ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 10 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 202

3-2-2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 202

# ಭದ್ರಾ ಕಾಲುವೆಯಲ್ಲಿ ಈಜಲು ಹೋಗಿ ಇಬ್ಬರು ಬಾಲಕರು ನೀರು ಪಾಲು

## ಸ್ಥಳಕ್ಕೆ ದೌಡಾಯಿಸಿದ ಶಾಸಕ ಕೆ.ಎಲ್. ಬಸವಂತಪ್ಪ







**ದಾವಣಗೆರೆ:** ನಾಲೆಯಲ್ಲಿ ಈಜಲು ಹೋದ ಬಾಲಕರಿಬ್ಬರು ನೀರು ಪಾಲಾಗಿರುವ ಘಟನೆ ತಾಲೂಕಿನ ಕುರ್ಕಿ ಗ್ರಾಮದಲ್ಲಿ ಭಾನುವಾರ ನಡೆದಿದೆ. ಕುರ್ಕಿ ಗ್ರಾಮದ ಪಾಂಡು (16) , ತುರ್ಚಘಟ್ಟ ಗ್ರಾಮದ ಗಣೇಶ್ (16) ನೀರು ಪಾಲಾದ ಬಾಲಕರು. ತುರ್ಚಘಟ್ಟ ಗುರುಕುಲ ವಸತಿ ಶಾಲೆಯಲ್ಲಿ ಈ ಬಾಲಕರು ಎಸ್ಸೆಸ್ಸೆಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು. ಭಾನುವಾರ ಶಾಲೆಗೆ ರಜೆ ಇದ್ದರಿಂದ ಕಟ್ಟಿಂಗ್ ಮಾಡಿಸಿಕೊಳ್ಳಲು ಇಬ್ಬರು ಕುರ್ಕಿ ಗ್ರಾಮಕ್ಕೆ ಬಂದಿದ್ದಾರೆ. ಗ್ರಾಮದ ಬಳಿ ಹರಿಯುತ್ತಿರುವ ದೊಡ್ಡದಾದ ಭದ್ರಾ ಕಾಲುವೆಯಲ್ಲಿ ಪಾಂಡು ಮತ್ತು ಯತೀಂದ್ರ ಈಜಲು ಬಂದಿದ್ದಾರೆ. ಪಾಂಡುಗೆ ಈಜಲು ಬರುತ್ತಿತ್ತು. ಗಣೇಶ್ ಈಜಲು ಬರುತ್ತಿರಲಿಲ್ಲ. ಮೊದಲು ಪಾಂಡು ಕಾಲುವೆಗೆ ಜಿಗಿದು ಈಜಾಡುತ್ತಿದ್ದ. ನಂತರ ಗಣೇಶ್ ಜಿಗಿದಿದ್ದಾನೆ. ಈ ವೇಳೆ ಗಣೇಶ ಮುಳುಗಿ ಏಳುತ್ತಿದ್ದಾಗ ಪಾಂಡು ಅವನನ್ನು ರಕ್ಷಣೆ ಮಾಡಲು ಬಂದಿದ್ದಾನೆ. ಈ ಸಂದರ್ಭದಲ್ಲಿ ಇಬ್ಬರು ನೀರು ಪಾಲಾಗಿದ್ದಾರೆ ಎನ್ನಲಾಗಿದೆ. ಅವರು ಈಜುತ್ತಿದ್ದ ಸಮೀಪವೇ ಗೇಟು ಇದ್ದು, ಈ ಗೇಟ್ ಬಳಿ ಪಾಂಡು ಮೃತದೇಹ ಪತ್ತೆಯಾಗಿದೆ. ಗಣೇಶ್ ಮೃತದೇಹ ಸಿಕ್ಕಿಲ್ಲ.

ಸುದ್ದಿ ತಿಳಿದ ಕೂಡಲೇ ಘಟನಾ ಸ್ಥಳಕ್ಕೆ ಶಾಸಕ ಕೆ.ಎಸ್. ಬಸವಂತಪ್ಪ ಭೇಟಿ ನೀಡಿ ನೀರು ಪಾಲಾದ ಬಾಲಕರ ಮೃತದೇಹ ಹೊರ ತೆಗೆಯಲು ಸಹಕರಿಸಿದ್ದಾರೆ. ನುರಿತ ಈಜುಗಾರರನ್ನು ಕರೆಸಿದ್ದು, ಪಾಂಡು ಮೃತದೇಹ ಸಿಕ್ಕಿದೆ. ಗಣೇಶ್ ಮೃತದೇಹ ಪತ್ತೆಯಾಗಿಲ್ಲ. ಹದಡಿ ಪೊಲೀಸರು ಮೃತದೇಹದ ಹುಡುಕಾಟ ನಡೆಸಿದ್ದಾರೆ.

ಇಬ್ಬರು ಬಾಲಕರು ನೀರು ಪಾಲಾದ ಸುದ್ದಿ ಹಬ್ಬುತ್ತಿದ್ದಂತೆ ಕುರ್ಕಿ ಗ್ರಾಮ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಜನರು ಬೈಕ್, ಕಾರು, ಟ್ರ್ಯಾಕ್ಟರ್ ಗಳಲ್ಲಿ ದೌಡಾಯಿಸಿದ್ದು, ಕಾಲುವೆ ಬಳಿ ಜನಸಾಗರ ಸೇರಿತ್ತು. ಪ್ರಕರಣ ದಾಖಲಾಗಿದೆ.

### ಶಾಸಕರಿಂದ ಸಾಂತ್ವನ

ನೀರು ಪಾಲಾದ ಮಕ್ಕಳ ಪೋಷಕರು, ಕುಟುಂಬದವರ ಅಕ್ರಂದನ ಮುಗಿಲು ಮುಟ್ಟಿದ್ದು, ಕೈಗೆ ಬಂದ ಮಕ್ಕಳನ್ನು ಕಳೆದುಕೊಂಡ ತಂದೆ-ತಾಯಿಗಳ ರೋಧನಕ್ಕೆ ಸೇರಿದ್ದ ಜನರು ಕೂಡ ಕಂಬನಿ ಮಿಡಿದರು. ಪೋಷಕರಿಗೆ ಇದೇ ಸಂದರ್ಭದಲ್ಲಿ ಶಾಸಕ ಕೆ.ಎಸ್. ಬಸವಂತಪ್ಪ ಸಾಂತ್ವನ ಹೇಳಿದರು.

# ಟಿ20 ವಿಶ್ವಕಪ್: ದಕ್ಷಿಣ ಆಫ್ರಿಕಾ ಮಣಿಸಿ ಎರಡನೇ ಬಾರಿ ವಿಶ್ವಕಪ್ ಗೆದ್ದ ಭಾರತ



**ಕೌಲಲಾಂಪುರ:** ಭಾನುವಾರ ಇಲ್ಲಿ ನಡೆದ ಐಸಿಸಿ 19 ವರ್ಷದೊಳಗಿನ ಮಹಿಳಾ ಟಿ20 ವಿಶ್ವಕಪ್ ಫೈನಲ್‌ನಲ್ಲಿ ದಕ್ಷಿಣ ಆಫ್ರಿಕಾವನ್ನು ಒಂಬತ್ತು ವಿಕೆಟ್‌ಗಳಿಂದ ಸೋಲಿಸಿದ ಭಾರತ ಸತತ ಎರಡನೇ ಬಾರಿಗೆ ಚಾಂಪಿಯನ್ ಪಟ್ಟ ಅಲಂಕರಿಸಿದೆ.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ನಡೆಸಿದ ದಕ್ಷಿಣ ಆಫ್ರಿಕಾ ನಿಗದಿತ 20 ಓವರ್‌ಗಳಲ್ಲಿ 82 ರನ್ ಗಳಿಸಿ ಸರ್ವಪತನ ಕಂಡಿತು. ದಕ್ಷಿಣ ಆಫ್ರಿಕಾ ನೀಡಿದ 83 ರನ್‌ಗಳ ಅಲ್ಪ ಗುರಿಯನ್ನು ಬೆನ್ನಟ್ಟಿದ ಭಾರತ 11.2 ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ ಗುರಿ ತಲುಪಿತು.

ಭಾರತದ ಪರ ಗೊಂಗಡಿ ತ್ರಿಶಾ ಮೂರು ವಿಕೆಟ್ ಕಬಳಿಸಿದರೆ, ವೈಷ್ಣವಿ ಶರ್ಮಾ, ಆಯುಷಿ ಶುಕ್ಲಾ ಮತ್ತು ಪಾರುಣಿಕ ಸಿಸೋಡಿಯಾ ಅವರು ತಲಾ ಎರಡು ವಿಕೆಟ್ ಪಡೆದು ಮಿಂಚಿದರು.

ಬ್ಯಾಟಿಂಗ್‌ನಲ್ಲೂ ಉತ್ತಮ ಪ್ರದರ್ಶನ ನೀಡಿದ ತ್ರಿಶಾ 33 ಎಸೆತಗಳಲ್ಲಿ ಅಜೇಯ 44 ರನ್ ಗಳಿಸಿದರೆ, ಸಾನಿಕಾ ಚಲ್ಕೆ 22 ಎಸೆತಗಳಲ್ಲಿ 26 ರನ್ ಗಳಿಸಿ ಔಟಾಗದೆ ಉಳಿದರು.

ದಕ್ಷಿಣ ಆಫ್ರಿಕಾ ಪರ ಮೈಕೆ ವ್ಯಾನ್ ವೂರ್ಸ್ಟ್ ಮಾತ್ರ (23) ಗರಿಷ್ಠ ಸ್ಕೋರ್ ಮಾಡಿದರು. ಉಳಿದ ನಾಲ್ವರು ಬ್ಯಾಟರ್‌ಗಳು ಮಾತ್ರ ಎರಡಂಕಿಯ ರನ್ ಕಲೆಹಾಕಿದರೆ, ಮತ್ತೆ ನಾಲ್ವರು ತಮ್ಮ ಖಾತೆಗಳನ್ನು ಸಹ ತೆರೆಯಲು ಸಾಧ್ಯವಾಗಲಿಲ್ಲ.

2023ರಲ್ಲಿ ನಡೆದ ಉದ್ಘಾಟನಾ ಆವೃತ್ತಿಯಲ್ಲಿ ಭಾರತವು ಫೈನಲ್‌ನಲ್ಲಿ ಇಂಗ್ಲೆಂಡ್ ಅನ್ನು ಏಳು ವಿಕೆಟ್‌ಗಳಿಂದ ಸೋಲಿಸಿ ಪ್ರಶಸ್ತಿಯನ್ನು ಗೆದ್ದಿತ್ತು. ಭಾರತ ತಂಡವನ್ನು ಕರ್ನಾಟಕದ ನಿಕಿ ಪ್ರಸಾದ್ ಮುನ್ನಡೆಸಿದ್ದು, ಟ್ರೋಫಿ ಗೆಲ್ಲುವಲ್ಲಿ ಯಶಸ್ವಿಯಾಗಿದ್ದಾರೆ.

# ಇಂದು ವಿದ್ಯಾರ್ಥಿಗಳಿಗೆ ದಿಕ್ಸೂಚಿ ಕಾರ್ಯಾಗಾರ



**ದಾವಣಗೆರೆ:** ಸ್ವಾಭಿಮಾನಿ ಬಳಗವು ಇಂದು ಹೊನ್ನಾಳಿ ಹಿರೇಕಲ್ಮಠದ ಸಮುದಾಯ ಭವನದಲ್ಲಿ ಪಿಯುಸಿ, ಡಿಗ್ರಿ, ಐಟಿಐ ಹಾಗೂ ಪಾಲಿಟೆಕ್ನಿಕ್ ವಿದ್ಯಾರ್ಥಿಗಳಿಗೆ ದಿಕ್ಸೂಚಿ ಕಾರ್ಯಾಗಾರ ಆಯೋಜಿಸಿದೆ.

ಬೆಳಿಗ್ಗೆ 10 ಗಂಟೆಗೆ ನಡೆಯುವ ಈ ಕಾರ್ಯಕ್ರಮವನ್ನು ಶ್ರೀ ಚನ್ನಪ್ಪ ಸ್ವಾಮಿ ಜನಕಲ್ಯಾಣ ಟ್ರಸ್ಟ್ ಸಹಯೋಗದಲ್ಲಿ ಬಳಗವು ಏರ್ಪಡಿಸಿದೆ. ಹಿರೇಕಲ್ಮಠದ ಶ್ರೀ ಒಡೆಯರ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮೀಜಿ ಸಾನಿಧ್ಯದಲ್ಲಿ ನಡೆಯಲಿದ್ದು, ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕರೂ ಆದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಮಾರ್ಗದರ್ಶನದಲ್ಲಿ ನಡೆಯಲಿದೆ.

ಈ ಕಾರ್ಯಕ್ರಮಕ್ಕೆ ಹೊನ್ನಾಳಿ ತಾಲೂಕಿನ ಪಿಯುಸಿ, ಪದವಿ, ಐಟಿಐ ಹಾಗೂ ಪಾಲಿಟೆಕ್ನಿಕ್ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸದುಪಯೋಗ ಪಡಿಸಿಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಅಯೋಧ್ಯೆಯ ಬಳಿ ಕಣ್ಣುಗುಡ್ಡೆ ಕಿತ್ತು ಯುವತಿಯ ಅತ್ಯಾಚಾರ-ಹತ್ಯೆ

**ಫೈಜಾಬಾದ್:** ಅಯೋಧ್ಯೆಯಲ್ಲಿ 22 ವರ್ಷದ ಯುವತಿಯನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಧಾರ್ಮಿಕ ಕಾರ್ಯಕ್ರಮಕ್ಕೆ ಹೋಗಿದ್ದ ಯುವತಿಯೊಬ್ಬಳನ್ನು ಕಣ್ಣುಗುಡ್ಡೆ ಕಿತ್ತು, ಬಟ್ಟೆ ಹರಿದು ಅತ್ಯಾಚಾರವೆಸಗಿ ಹತ್ಯೆ ಮಾಡಲಾಗಿರುವ ಘಟನೆ ಅಯೋಧ್ಯೆಯ ಬಳಿ ವರದಿಯಾಗಿದೆ.

22 ವರ್ಷದ ಯುವತಿ ಗುರುವಾರ ರಾತ್ರಿಯಾದರೂ ಮನೆಗೆ ಬಾರದಿದ್ದಾಗ ಆತಂಕಗೊಂಡ ಪೋಷಕರು ಪೊಲೀಸರಿಗೆ ದೂರು ನೀಡಿದ್ದರು. ವಿಪರ್ಯಾಸವೆಂದರೆ ದೂರು ಸ್ವೀಕರಿಸಿ ಸಹಕರಿಸಬೇಕಿದ್ದ ಪೊಲೀಸರು ಸಹ ನಿಮ್ಮ ಮಗಳನ್ನು ನೀವೇ ಹುಡುಕಿಕೊಳ್ಳಿ ಎಂದು ಹೇಳಿದ್ದಾರೆಂದು ಕುಟುಂಬ ಸದಸ್ಯರು ಆರೋಪಿಸಿದ್ದಾರೆ. ಕೊನೆಗೆ ಅಯೋಧ್ಯೆಯ ಕಾಲುವೆಯೊಂದರಲ್ಲಿ ಯುವತಿಯ ಮೃತದೇಹ ಅತ್ಯಂತ ಕೆಟ್ಟ ಪರ್ಸ್ಥಿತಿಯಲ್ಲಿ ಪತ್ತೆಯಾಗಿದೆ. ಮೃತದೇಹದ ಮೇಲೆ ಬಟ್ಟೆ ಇರಲಿಲ್ಲ. ಕಣ್ಣುಗುಡ್ಡೆ ಕಿತ್ತುಹಾಕಲಾಗಿದೆ. ದೇಹದ ಹಲವೆಡೆ ಗಂಭೀರ ಗಾಯಗಳಾಗಿವೆ. ಕೈಕಾಲುಗಳನ್ನು ಹಗ್ಗಗಳಿಂದ ಕಟ್ಟಲಾಗಿತ್ತು ಆಕೆಯ ಮೇಲೆ ಅತ್ಯಾಚಾರ ನಡೆಸಿ ನಂತರ ಕೊಲ್ಲಲಾಗಿದೆ ಎಂದು ಪೋಷಕರು ಶಂಕಿಸಿದ್ದಾರೆ.

ಈ ಬಗ್ಗೆ ತನಿಖೆ ನಡೆಸುತ್ತಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಕುಟುಂಬವು ಶುಕ್ರವಾರ ದೂರು ದಾಖಲಿಸಿದ ನಂತರ ಪೊಲೀಸರು ನಾಪತ್ತೆ ದೂರು ದಾಖಲಿಸಿದ್ದಾರೆ ಎಂದು ಅಧಿಕಾರಿ ಅಶುತೋಷ್ ತಿವಾರಿ ತಿಳಿಸಿದ್ದಾರೆ.

# ಮಂಡ್ಯ ಸರ್ಕಾರಿ ಶಾಲಾ ಆವರಣದಲ್ಲೇ 8 ವರ್ಷದ ಬಾಲಕಿ ಮೇಲೆಅತ್ಯಾಚಾರ

**ಮಂಡ್ಯ:** 8 ವರ್ಷದ ಬಾಲಕಿಯನ್ನು ಬೆದರಿಸಿ ಸರ್ಕಾರಿ ಶಾಲಾ ಅವರಣದಲ್ಲೇ ದುಷ್ಕರ್ಮಿಗಳು ಸಾಮೂಹಿಕ ಅತ್ಯಾಚಾರ ಮಾಡಿರುವ ಭೀಕರ ಘಟನೆ ಮಂಡ್ಯದಲ್ಲಿ ನಡೆದಿದೆ.

ಮಂಡ್ಯ ನಗರದ ಹೊರ ವಲಯದಲ್ಲಿ ಈ ಘಟನೆ ನಡೆದಿದ್ದು, ಕೇಕ್ ಕೊಡಿಸಿ, ಚಾಕು ಹಾಕುವುದಾಗಿ ಬೆದರಿಸಿ ಸರ್ಕಾರಿ ಶಾಲಾ ಆವರಣದಲ್ಲೇ 8 ವರ್ಷದ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಲಾಗಿದೆ.

## ಚನ್ನಗಿರಿ ಲೈಂಗಿಕ ದೌರ್ಜನ್ಯ ಪ್ರಕರಣ:

# ಗಲ್ಲು ಶಿಕ್ಷೆಗೆ ಮುತಾಲಿಕ್ ಆಗ್ರಹ




**ದಾವಣಗೆರೆ:** ಚನ್ನಗಿರಿ ಮೆಡಿಕಲ್ ಶಾಪ್ ನ ಅಮ್ಜದ್ ನೂರಾರು ಮಹಿಳೆಯರು, ವಿದ್ಯಾರ್ಥಿನಿಯರು, ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ್ದು, ರಾಕ್ಷಸಿ ಪ್ರವೃತ್ತಿಯ ವ್ಯಕ್ತಿಯಯಾಗಿರುವ ಈತನಿಗೆ ಸರ್ಕಾರ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸುವ ಮೂಲಕ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಬೇಕೆಂದು ಶ್ರೀ ರಾಮ ಸೇನೆ ಸಂಸ್ಥಾಪಕ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚನ್ನಗಿರಿಯಲ್ಲಿ ಜನವರಿ 30 ರಂದು ಆರೋಪಿ ಅಮ್ಜದ್ ಎಂಬಾತನನ್ನು ಪೊಲೀಸರು ಬಂಧಿಸಿದ್ದು, ಅತನ ಬಳಿ ಹಲವಾರು ಅತ್ಯಾಚಾರದ ವೀಡಿಯೋ ತುಣುಕುಗಳನ್ನು ಪೊಲಿಸರು ವಶ ಪಡಿಸಿಕೊಂಡಿದ್ದಾರೆ. 56ವರ್ಷದ ಈ ಆರೋಪಿ ತನ್ನ ಮೆಡಿಕಲ್ ಶಾಪಿನಲ್ಲಿ ರಾಕ್ಷಸೀಯ ಕೃತ್ಯ ನಡೆಸಿದ್ದು, ಇದರ ಹಿಂದೆ ವ್ಯವಸ್ಥಿತ ಸಂಘಟನೆಗಳು ಇರುವ ಶಂಕೆ ಇದೆ ಎಂದು ಆರೋಪಿಸಿದರು.

ಈ ಘಟನೆ ಕುರಿತಂತೆ ರಾಜ್ಯ ಸರ್ಕಾರ, ಗೃಹ ಇಲಾಖೆ, ಪೊಲೀಸ್ ಇಲಾಖೆ ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥ ಆರೋಪಿ ಯಾವುದೇ ಕಾರಣಕ್ಕೂ ಪ್ರಕರಣದಿಂದ ತಪ್ಪಿಸಿಕೊಳ್ಳದಂತೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಸಮಾಜದಲ್ಲಿ ಹೆಣ್ಣು ಮಕ್ಕಳು ಗೌರವಯುತವಾಗಿ ಜೀವನ ನಡೆಸಬೇಕು. ಚನ್ನಗಿರಿ ಘಟನೆಯಿಂದ ಅಲ್ಲಿನ ಮಹಿಳೆಯರು, ವಿದ್ಯಾರ್ಥಿಗಳು, ಬಾಲಕಿಯರು ಭಯಭೀತರಾಗಿದ್ದಾರೆ. ಇಂತಹ ಕೃತ ಮಾಡಿರುವ ಆರೋಪಿಗೆ ಗಲ್ಲು ಶಿಕ್ಷೆ ನೀಡಬೇಕು ಎಂದು ಆಗ್ರಹಿಸಿದರು.

ಆರೋಪಿಗೆ ಶಿಕ್ಷೆ ಆಗುವಲ್ಲಿ ಪೊಲೀಸ್ ಇಲಾಖೆ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಬೇಕು ಎಂದು ಒತ್ತಾಯಿಸಿದರಲ್ಲದೇ ಈ ಪ್ರಕರಣ ಕುರಿತು ಶ್ರೀ ರಾಮ ಸೇನೆಯಿಂದ ರಾಜಾದ್ಯಂತ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಫೆಬ್ರವರಿ 6 ರಂದು ಪ್ರತಿಭಟನೆ ನಡೆಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಕಾರ್ಯದರ್ಶಿ ಪರಶುರಾಮ ನಡುಮನಿ, ಜಿಲ್ಲಾಧ್ಯಕ್ಷ ಮಣಿಸರ್ಕಾರ್, ಚನ್ನಗಿರಿಯ ವಿನಯ್, ನಿತಿನ್, ಪಿ. ಸಾಗರ್, ಶ್ರೀಧರ್, ಶಿವಕುಮಾರ್, ಅಜಯ್, ಪ್ರಭು ಉಪಸ್ಥಿತರಿದ್ದರು.

# ಚಂದ್ರಗುತ್ತಿ ಕೋಟೆಯೊಳಗೆ ವೀರಗಲ್ಲು ಪತ್ತೆ



**ಚಂದ್ರಗುತ್ತಿ:** ಐತಿಹಾಸಿಕ ಮಾನ್ಯತೆ ಇರುವ ಚಂದ್ರಗುತ್ತಿ ಕೋಟೆಯೊಳಗೆ ವೀರಗಲ್ಲೊಂದು ಪತ್ತೆಯಾಗಿದೆ. ಇಲ್ಲಿನ ಪ್ರೌಢಶಾಲೆ ನಿವೃತ್ತ ಶಿಕ್ಷಕ ಯಶವಂತಪ್ಪ ಅವರು ಈ ಶಾಸನ ಪತ್ತೆ ಹಚ್ಚಿದ್ದು ಲಿಪಿಯ ಶೋಧ ಆಗಬೇಕಿದೆ.

ಇತಿಹಾಸ ಸಂಶೋಧಕ ಶ್ರೀಪಾದ ಬಿಚ್ಚುಗತ್ತಿ ಅವರಿಗೆ ಶಾಸನ ತೋರಿಸಿದ್ದು ವಿಜಯನಗರ ಕಾಲದ ವೀರಗಲ್ಲು ಎಂದಿದ್ದಾರೆ. ಆರಗದ ದೇವಪ್ಪ ಒಡೆ-ಯರ ಉಲ್ಲೇಖ ಕಾಣಿಸುತ್ತಿದ್ದು, ಸ್ವಚ್ಛ ಗೊಳಿಸಿ ಓದಬೇಕಿದೆ. ಇದು ಅಪ್ರಕಟಿತ ಶಾಸನವಾಗಿದ್ದು ಸದ್ಯದಲ್ಲಿಯೇ ಶಾಸನ ತಜ್ಞರಮೇಶ್ ಹಿರೆಜಂಬೂರು ಹಾಗೂ ಚುರ್ಚುಗುಂಡಿ ಮಂಜಪ್ಪ ಅವರನ್ನು ಕರೆಸಿ ಓದಿಸೋಣ ಎಂದಿದ್ದಾರೆ. ಚಂದ್ರಗುತ್ತಿಯಲ್ಲಿ ಇಲ್ಲಿಯವರೆಗೆ ಯಾವುದೇ ವೀರಗಲ್ಲು ಕಂಡು ಬಂದಿರಲಿಲ್ಲ, ಕೋಟೆಯೊಳಗೆ ಒಂದೇ ಒಂದು ಪರ್ಶಿಯನ್ ಲಿಪಿಯ ಶಾಸನವಿದ್ದು ದಿ.ರಘುನಾಥ್ ಭಟ್ ಓದಿ ಪ್ರಕಟಿಸಿದ್ದರು. ಹೊರವಲಯ ಬಸ್ತಿಕೊಪ್ಪದ ಕಂಚಿ ಶಿವರಾಂ ಅವರ ಜಾಗೆಯಲ್ಲಿ ಜೈನ ಶಾಸನ, ನಿಸದಿ ಕಲ್ಲು ಕಂಡು ಬಂದಿತ್ತು. ಲಿಪಿ ಪೂರ್ಣ ಹಾಳಾಗಿದ್ದು ಓದುವಂತಿರಲಿಲ್ಲ. ತದ ನಂತರ ಈ ಶಾಸನ ದೊರೆತಿದ್ದು ಇದು ಚಂದ್ರಗುತ್ತಿ ಕೋಟೆಯಲ್ಲಿ, ಇತಿಹಾಸದ ಮಹತ್ವಪೂರ್ಣ ದಾಖಲೆಯಾಗಲಿದೆ. ಚಂದ್ರಗುತ್ತಿ 14-15ನೇ ಶತಮಾನದಲ್ಲಿ ಪ್ರಮುಖ ವ್ಯಾಪಾರಿ ಕೇಂದ್ರವಾಗಿದ್ದ ಬಗ್ಗೆ, ಬನವಾಸಿ ಪನ್ನಿರ್ಛಾಸಿರದ ಪ್ರಮುಖ ವಿಭಾಗವಾಗಿ ಚಂದ್ರಗುತ್ತಿ 18 ಕಂಪಣವಾಗಿದ್ದ ಮಾಹಿತಿಯಿತ್ತು. ಇಲ್ಲಿನ ರೇಣುಕಾ ದೇಗುಲವೂ ಸೇರಿದಂತೆ ವಿಠ್ಠಲ ದೇವಸ್ಥಾನ, ಪಾಳುಗೊಂಡ ಚಂದ್ರನಾಥ ಬಸದಿ, ಕೋಟೆಯೊಳಗಿನ ಕೆಲವು ಪಾಳು ಕಟ್ಟಡ, ಊರೊಳಗಿನ ಕಲ್ಯಾಣಿ, ಈಶ್ವರ ದೇಗುಲದ ಅವಶೇಷ ಎಲ್ಲವೂ ವಿಜಯನಗರದ ಅವಧಿಯದ್ದಾಗಿವೆ. ಈ ಎಲ್ಲಾ ಆಕರಗಳೊಂದಿಗೆ ಪ್ರಸ್ತುತ ದೊರಕಿರುವ ಶಾಸನ ಮಹತ್ವದ್ದು ಎಂದಿದ್ದಾರೆ. ವೀರಗಲ್ಲು ಭೇಟಿ ವೇಳೆ ಯಶವಂತಪ್ಪ ಮಾಸ್ಟರ್ ಜೊತೆ, ಶ್ರೀಪಾದ ಬಿಚ್ಚುಗತ್ತಿ, ಅರಣ್ಯ ಇಲಾಖೆಯ ಮೌನೇಶ್, ಪತ್ರಕರ್ತ ಪುರುಷೋತ್ತಮ ಎನ್. ಗದ್ದೆಮನೆ ಇದ್ದರು.

# ಶಿವಶರಣರು, ವಚನಕಾರರು, ಸಮಾಜದ ಆಸ್ತಿ



**ಚಿಕ್ಕಮಗಳೂರು:** ಶಿವಶರಣರು, ವಚನಕಾರರು, ಸಮಾಜದ ಶಾಶ್ವತ ಆಸ್ತಿ, ಸಾಮಾಜಿಕ ಅಸಮಾನತೆ ಹೋಗಲಾಡಿಸುವ ಜೊತೆಗೆ ಜ್ಞಾನ ವಿಸ್ತರಣೆಗೆ ಅವರು ನೀಡಿದ ಕೊಡುಗೆ ಮಹತ್ತರವಾದುದ್ದು, ಎಂದು ಸಾಹಿತಿ ಸಂಗಮೇಶ್ವರ ತಿಳಿಸಿದರು.

ಜಿಲ್ಲಾಡಳಿತದ ವತಿಯಿಂದ ಇಂದು ನಗರದ ಕುವೆಂಪು ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಕಾಯಕ ನಿಷ್ಠೆ, ದಾಸೋಹದಂತಹ ಮೌಲ್ಯಯುತವಾದ ಕಾಣಿಕೆ ನೀಡಿದ್ದು, 12ನೇ ಶತಮಾನದ ಕಾಲದಲ್ಲಿ. ಇಂತಹ ಶರಣರು ಮಹಾಪುರುಷರು ಹಾಕಿಕೊಟ್ಟ ಮಾರ್ಗದರ್ಶನ ಹಾಗೂ ಸಂದೇಶಗಳು ಇಂದಿನ ಸಮಾಜಕ್ಕೆ ಪ್ರೇರಣೆಯಾಗಿದ್ದು, ಪ್ರತಿಯೊಬ್ಬರು ಜೀವನದಲ್ಲಿ ಆಳವಡಿಸಿಕೊಂಡು ಮುನ್ನಡೆಯಬೇಕು ಎಂದರು.

ಮಡಿವಾಳ ಮಾಚಿದೇವರು ಬದುಕಿನ ಸಾತ್ವಿಕತೆ ನೀಡಿ ಸತ್ಯ, ಶುದ್ಧ ಕಾಯಕ ಕೊಟ್ಟಿದ್ದಾರೆ. ಸಮಾಜದಲ್ಲಿ ಜಾತಿ ಮುಖ್ಯವಲ್ಲ, ಜೀವನ ಮುಖ್ಯ ಎಂದು ತೋರಿಸಿಕೊಟ್ಟಿದ್ದಾರೆ. ಅನುಭವ ಮಂಟಪ ಕಟ್ಟುವಲ್ಲಿ ಮಡಿವಾಳ ಮಾಚಿದೇವರ ಕಾಯಕ ಮಹತ್ವದ್ದು ಎಂದು ಹೇಳಿದರು.

ದೇಶದ ನಾನಾ ಭಾಗಗಳಿಂದ ಕಲ್ಯಾಣಕ್ಕೆ ಬರುವವರಿಗೆ ಪರೀಕ್ಷಿಸಿ ಮಡಿ ಹಾಸಿ ಸ್ವಾಗತಿಸುವ ಕೆಲಸ ಅವರದ್ದಾಗಿತ್ತು, ಮಾಚಿದೇವರ ಪರೀಕ್ಷೆಗೊಳಪಡದ ಹೊರತು ಕಲ್ಯಾಣಪುರ ಪ್ರವೇಶದ ಪ್ರಮಾಣ ಪತ್ರ ಹೊರಗಿನಿಂದ ಬರುವವರಿಗೆ ಸಿಗುತ್ತಿರಲಿಲ್ಲ ಎಂದರು.

ಕಲ್ಯಾಣ ಕ್ರಾಂತಿಯ ಸಂದರ್ಭದಲ್ಲಿ ಮಾಚಿದೇವರು ರಕ್ಷಣೆ, ವಚನ ಸಾಹಿತ್ಯದ ದಂಡ ನಾಯಕತ್ವದ ಜವಾಬ್ದಾರಿ ಹೊತ್ತು ಬಸವಣ್ಣ, ಅಕ್ಕನಾಗಮ್ಮ, ಕಿನ್ನರಿ ಬೊಮ್ಮಣ್ಣ ಮೊದಲಾದವರೊಂದಿಗೆ ಮಾಚಿದೇವ ಶರಣ ಸಮೂಹದ ಭೀಮ ರಕ್ಷೆಯಾಗಿ ನಿಂತರು ಎಂದರು.

ಶಾಸಕ ಹೆಚ್.ಡಿ. ತಮ್ಮಯ್ಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಶಿವ ಶರಣ-ರು, ವಚನಕಾರರು ಸಮಾಜದ ಶಾಶ್ವತ ಆಸ್ತಿ, ಸಾಮಾಜಿಕ ಅಸಮಾನತೆ ಹೋಗಲಾಡಿಸುವ ಜೊತೆಗೆ ಜ್ಞಾನ ವಿಸ್ತರಣೆಗೆ ಅವರು ನೀಡಿದ ಕೊಡುಗೆ ಮಹತ್ತರವಾದುದ್ದು, ತಮ್ಮ ಕಾಯಕದ ಮೂಲಕ ಸಮಾಜದಲ್ಲಿರುವ ಅಧರ್ಮ, ಅಸಂಸ್ಕೃತಿಯ ಕೊಳಕನ್ನು ಹೋಗಲಾಡಿಸಿದ ಕಾಯಕ ಯೋಗಿ ಮಡಿವಾಳ ಮಾಚಿದೇವರು ಅವರ ಆದರ್ಶಗಳು ಇಂದಿನ ಸಮಾಜದ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕವಾಗಿವೆ ಎಂದು ತಿಳಿಸಿದರು.

# ಫೆ.4 ಜಿ.ಎಂ. ವಿವಿಯಿಂದ ಕ್ಯಾನ್ಸರ್ ಜಾಗೃತಿ ಜಾಥಾ




**ದಾವಣಗೆರೆ:** ಜಿ.ಎಂ. ವಿಶ್ವವಿದ್ಯಾಲಯ ಮತ್ತು ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆ ಸಹಯೋಗದಲ್ಲಿ ಫೆ.4ರಂದು ಕ್ಯಾನ್ಸರ್ ಜಾಗೃತಿ ಜಾಥ ಹಮ್ಮಿಕೊಳ್ಳಲಾಗಿದೆ ಎಂದು ಜಿ.ಎಂ. ಫಾರ್ಮಸಿ ಕಾಲೇಜು ಪ್ರಾಂಶುಪಾಲ ಡಾ. ಗಿರೀಶ್ ಬೋಳಕಟ್ಟೆ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಮೋತಿವೀರಪ್ಪ ಕಾಲೇಜು ಆವರಣದಿಂದ ಅಂದು ಬೆಳಿಗ್ಗೆ 8:30ಕ್ಕೆ ಪ್ರಾರಂಭವಾಗುವ ಜಾಥಾಕ್ಕೆ ಜಿಎಂ ವಿವಿ ಕುಲಪತಿ ಜಿ.ಎಂ. ಲಿಂಗರಾಜು ಚಾಲನೆ ನೀಡಲಿದ್ದು, ಜಾಥಾವು ವಿದ್ಯಾರ್ಥಿ ಭವನ, ಕೆಇಬಿ ವೃತ್ತ, ಜಯದೇವ ವೃತ್ತ ಮತ್ತು ಗಾಂಧಿ ವೃತ್ತದ ಮುಖಾಂತರ ಹೈಸ್ಕೂಲ್ ಮೈದಾನದಲ್ಲಿ ಅಂತ್ಯಗೊಳ್ಳಲಿದೆ. ಬೆಳಿಗ್ಗೆ 10.30ಕ್ಕೆ ಜಿಎಂ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಂದ ಕ್ಯಾನ್ಸರ್ ಕುರಿತು ಜಾಗೃತಿ ಮೂಡಿಸುವ ಕಿರು ನಾಟಕ ಪ್ರದರ್ಶನ ನಡೆಯಲಿದೆ ಎಂದರು.

ಜಾಥಾದಲ್ಲಿ ಉಪ ಕುಲಪತಿ ಡಾ. ಎಸ್. ಆರ್. ಶಂಕಪಾಲ್, ಸಹ ಉಪಕುಲಪತಿ ಡಾ. ಎಚ್.ಡಿ. ಮಹೇಶಪ್ಪ, ಕುಲಸಚಿವ ಡಾ. ಸುನೀಲ್ ಕುಮಾರ್ ಹಾಗೂ ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆಯ ನಿರ್ದೇಶಕ ಡಾ. ಜಗದೀಶ್ ತುಬಚಿ ಹಾಗೂ ಡಾ. ಎಂ.ಡಿ. ಅಜಯ್, ಜಿಲ್ಲಾ ಔಷಧ ನಿಯಂತ್ರಣ ಇಲಾಖೆಯ ಸಹಾಯಕ ಔಷಧಿ ನಿಯಂತ್ರಕ ಅಧಿಕಾರಿ ಎಂ.ಎಸ್. ಗೀತಾ ಸೇರಿದಂತೆ ಮತ್ತಿತರರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆಯ ನಿರ್ದೇಶಕ ಡಾ. ಜಗದೀಶ್ ತುಬಚಿ ಮಾತನಾಡಿ, ಬದಲಾದ ಜೀವನಶೈಲಿ, ಮಾದಕ ವ್ಯಸನ, ನಗರೀಕರಣದ ಭರಾಟೆಗೆ ಸಿಲುಕಿ ದೇಶದಲ್ಲಿ ಪ್ರತಿವರ್ಷಕ್ಕೆ ಸುಮಾರು 4ಲಕ್ಷ ಕ್ಯಾನ್ಸರ್ ರೋಗಿಗಳು ಪತ್ತೆಯಾಗುತ್ತಿದ್ದಾರೆ. ಮುಂಬರುವ 2030ರ ವೇಳೆಗೆ ಇದು ಎರಡು ಪಟ್ಟು ಏರಿಕೆಯಾಗುವ ಸಾಧ್ಯತೆ ಹೆಚ್ಚಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಕ್ಯಾನ್ಸರ್ ರೋಗಿಗಳು ಮೊದಲ ಮತ್ತು ಎರಡನೇ ಹಂತದಲ್ಲಿಯೇ ಬಂದು ಔಷಧಿಯನ್ನು ಪಡೆದರೆ ಕ್ಯಾನ್ಸರ್ ಮುಕ್ತಗೊಳಿಸಬಹುದು. ಆದರೆ ಅವರು 4ನೇ ಹಂತದಲ್ಲಿರುವಾಗ ಬರುವುದರಿಂದ ಗುಣ ಪಡಿಸಲು ಸಾಧ್ಯವಾಗುವುದಿಲ್ಲ. ಕ್ಯಾನ್ಸರ್‌ನ್ನು ಮೊದಲೇ ಪತ್ತೆ ಹಚ್ಚಲು ಜಾಗೃತಿ ಮೂಡಿಸುವುದಕ್ಕಾಗಿಯೇ ಈ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಸಹಪ್ರಾಧ್ಯಾಪಕರಾದ ಡಾ. ಮಹಮದ್ ಯೂಸೂಫ್, ಡಾ. ಮಹಮದ್ ಆಸೀಫ್, ಪ್ರತೀಕ್ಷಾ ಇನ್ನಿತರರು ಉಪಸ್ಥಿತರಿದ್ದರು.

ಫೆ.4 ಜಿ.ಎಂ. ವಿವಿಯಿಂದ ಕ್ಯಾನ್ಸರ್ ಜಾಗೃತಿ ಜಾಥಾ




**ದಾವಣಗೆರೆ:** ಜಿ.ಎಂ. ವಿಶ್ವವಿದ್ಯಾಲಯ ಮತ್ತು ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆ ಸಹಯೋಗದಲ್ಲಿ ಫೆ.4ರಂದು ಕ್ಯಾನ್ಸರ್ ಜಾಗೃತಿ ಜಾಥ ಹಮ್ಮಿಕೊಳ್ಳಲಾಗಿದೆ ಎಂದು ಜಿ.ಎಂ. ಫಾರ್ಮಸಿ ಕಾಲೇಜು ಪ್ರಾಂಶುಪಾಲ ಡಾ. ಗಿರೀಶ್ ಬೋಳಕಟ್ಟೆ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಮೋತಿವೀರಪ್ಪ ಕಾಲೇಜು ಆವರಣದಿಂದ ಅಂದು ಬೆಳಿಗ್ಗೆ 8:30ಕ್ಕೆ ಪ್ರಾರಂಭವಾಗುವ ಜಾಥಾಕ್ಕೆ ಜಿಎಂ ವಿವಿ ಕುಲಪತಿ ಜಿ.ಎಂ. ಲಿಂಗರಾಜು ಚಾಲನೆ ನೀಡಲಿದ್ದು, ಜಾಥಾವು ವಿದ್ಯಾರ್ಥಿ ಭವನ, ಕೆಇಬಿ ವೃತ್ತ, ಜಯದೇವ ವೃತ್ತ ಮತ್ತು ಗಾಂಧಿ ವೃತ್ತದ ಮುಖಾಂತರ ಹೈಸ್ಕೂಲ್ ಮೈದಾನದಲ್ಲಿ ಅಂತ್ಯಗೊಳ್ಳಲಿದೆ. ಬೆಳಿಗ್ಗೆ 10.30ಕ್ಕೆ ಜಿಎಂ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಂದ ಕ್ಯಾನ್ಸರ್ ಕುರಿತು ಜಾಗೃತಿ ಮೂಡಿಸುವ ಕಿರು ನಾಟಕ ಪ್ರದರ್ಶನ ನಡೆಯಲಿದೆ ಎಂದರು.

ಜಾಥಾದಲ್ಲಿ ಉಪ ಕುಲಪತಿ ಡಾ. ಎಸ್.ಆರ್. ಶಂಕಪಾಲ್, ಸಹ ಉಪಕುಲಪತಿ ಡಾ. ಎಚ್.ಡಿ. ಮಹೇಶಪ್ಪ, ಕುಲಸಚಿವ ಡಾ. ಸುನೀಲ್ ಕುಮಾರ್ ಹಾಗೂ ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆಯ ನಿರ್ದೇಶಕ ಡಾ. ಜಗದೀಶ್ ತುಬಚಿ ಹಾಗೂ ಡಾ. ಎಂ.ಡಿ. ಅಜಯ್, ಜಿಲ್ಲಾ ಔಷಧ ನಿಯಂತ್ರಣ ಇಲಾಖೆಯ ಸಹಾಯಕ ಔಷಧಿ ನಿಯಂತ್ರಕ ಅಧಿಕಾರಿ ಎಂ.ಎಸ್. ಗೀತಾ ಸೇರಿದಂತೆ ಮತ್ತಿತರರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ. ನಿಮ್ಮ ಸಮಸ್ಯೆಗಳನ್ನು ಮರೆತು ಕುಟುಂಬದ ಸದಸ್ಯರೊಂದಿಗೆ ಒಳ್ಳೆಯ ಸಮಯ ಕಳೆಯುತ್ತೀರಿ.

### ವೃಷಭ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು. ಇಂದು ಹಣದ ಬಗ್ಗೆ ಕುಟುಂಬ ಸದಸ್ಯರಲ್ಲಿ ಗೊಂದಲ ಉಂಟಾಗಬಹುದು. ಹಣಕಾಸಿನ ವಿಷಯದ ಬಗ್ಗೆ ನೀವು ಕುಟುಂಬದ ಎಲ್ಲ ಸದಸ್ಯರಿಗೆ ಸ್ಪಷ್ಟವಾಗಿರಲು ಸಲಹೆ ನೀಡಬೇಕು.

### ಮಿಥುನ ರಾಶಿ

ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ನೀವು ಮನೆಯಿಂದ ಹೊರ ಇದ್ದು ಉದ್ಯೋಗ ಅಥವಾ ಅಧ್ಯಯನ ಮಾಡುತ್ತಿದ್ದರೆ, ನಿಮ್ಮ ಹಣ ಮತ್ತು ಸಮಯವನ್ನು ವ್ಯರ್ಥ ಮಾಡುವಂತಹ ಜನರಿಂದ ದೂರವಿರುವುದು ಕಲಿತುಕೊಳ್ಳಬೇಕು. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು. ಇಂದು ಪ್ರಣಯದ ಭಾವನೆಗಳಿಗೆ ಪ್ರತಿಕ್ರಿಯೆ ದೊರಕುತ್ತದೆ.

### ಕರ್ಕ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ. ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ಹೊಸ ಪ್ರೀತಿಯ ಸಂಪರ್ಕವನ್ನು ಹೊಂದುವ ಅವಕಾಶಗಳು ಬಲವಾಗಿದ್ದರೂ ವೈಯಕ್ತಿಕವಾದ ಮತ್ತು ಗೌಪ್ಯವಾದ ಮಾಹಿತಿಯನ್ನು ಬಹಿರಂಗಪಡಿಸಬೇಡಿ. ನಿಮ್ಮ ಕೆಲಸಕ್ಕೆ ಮೆಚ್ಚುಗೆ ದೊರಕಲಿದೆ.

### ಸಿಂಹ ರಾಶಿ

ಉತ್ತಮ ಆರೋಗ್ಯ ಏನಾದರೂ ಅಸಾಮಾನ್ಯವಾಗಿದ್ದನ್ನು ಸಾಧಿಸಲು ಸಾಧ್ಯವಾಗಿಸುವ ಒಂದು ವಿಶೇಷ ದಿನ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ನಿಮ್ಮ ಜೀವನದಲ್ಲಿ ಒಂದು ಭವ್ಯವಾದ ಲಯವನ್ನು ರೂಪಿಸಿಕೊಳ್ಳಿ ಮತ್ತು ಶರಣಾಗತಿಯ ಮತ್ತು ಹೃದಯದಲ್ಲಿ ಪ್ರೀತಿಯ ಜೊತೆ ನೇರವಾಗಿ ಮತ್ತು ಕೃತಜ್ಞತೆಯಿಂದ ನಡೆಯುವ ಕಲೆಯ ಮೌಲ್ಯಗಳನ್ನು ತಿಳಿದುಕೊಳ್ಳಿ. ಇದು ನಿಮ್ಮ ಕೌಟುಂಬಿಕ ಜೀವನವನ್ನು ಹೆಚ್ಚು ಅರ್ಥಪೂರ್ಣವಾಗಿಸುತ್ತದೆ.

### ಕನ್ಯಾ ರಾಶಿ

ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ಒಂದು ಕುಟುಂಬದ ಒಟ್ಟಾಗುವಿಕೆಯಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ.

### ತುಲಾ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ. ಇಂದು ನೀವು ಮನೆಯಲ್ಲಿ ಸೂಕ್ಷ್ಮ ಸಮಸ್ಯೆಯನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ.

### ವೃಶ್ಚಿಕ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ನಿಮಗೆ ಗೊತ್ತಿದ್ದ ಯಾರಾದರೂ ಹಣಕಾಸಿಗೆ ಸಂಬಂಧಿಸಿದ ವಿಷಯಗಳಿಗೆ ಅತಿಯಾಗಿ ಪ್ರತಿಕ್ರಿಯಿಸಬಹುದು, ಇದು ಮನೆಯಲ್ಲಿ ಆತಂಕದ ಕ್ಷಣಗಳು ತರುತ್ತದೆ. ಸಮಯ, ಕೆಲಸ, ಹಣ, ಸ್ನೇಹಿತರು, ಕುಟುಂಬ, ಬಂಧುಗಳು; ಎಲ್ಲವೂ ಒಂದು ಕಡೆ ಮತ್ತು ನಿಮ್ಮ ಸಂಗಾತಿಯ ಜೊತೆ ನೀವು ಇನ್ನೊಂದು ಕಡೆಗಿರುತ್ತೀರಿ.

### ಧನು ರಾಶಿ

ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ಸ್ನೇಹಿತರು ನಿಮಗೆ ಬೆಂಬಲ ನೀಡಿದರೂ –ಆದರೆ ಮಾತುಗಳ ಬಗ್ಗೆ ಎಚ್ಚರದಿಂದಿರಿ ಪ್ರೀತಿಪಾತ್ರರಲ್ಲದೇ ನಿಮ್ಮ ಸಮಯ ಕೊಲ್ಲುವುದು ಕಷ್ಟ. ಶ್ರೇಷ್ಠ ಜನರೊಡನೆ ಸಂಬಂಧ ನಿಮ್ಮಲ್ಲಿ ಒಳ್ಳೆಯ ವಿಚಾರಗಳು ಮತ್ತು ಯೋಜನೆಗಳನ್ನು ತರುತ್ತದೆ.

### ಮಕರ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ.

### ಕುಂಭ ರಾಶಿ

ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ಮನೆಯಲ್ಲಿ ಧರ್ಮಕಾರ್ಯಗಳನ್ನು ನಡೆಸಲಾಗುವುದು. ನಿಮ್ಮ ಗೆಳತಿ ನಿಮಗೆ ಮೋಸ ಮಾಡಬಹುದು.

### ಮೀನ ರಾಶಿ

ತುಂಬಾ ಚಿಂತೆ ಮತ್ತು ಒತ್ತಡ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು. ನೀವು ಮಾನಸಿಕ ಸ್ಪಷ್ಟತೆಯನ್ನು ಕಾಯ್ದುಕೊಳ್ಳಲು ಗೊಂದಲ ಮತ್ತು ಹತಾಶೆಯನ್ನು ತಡೆಗಟ್ಟಬೇಕು. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ. ನಿಮ್ಮ ಕುಟುಂಬದ ಸದಸ್ಯರ ಭಾವನೆಗಳನ್ನು ನೋಯಿಸುವುದನ್ನು ತಪ್ಪಿಸುವ ಮೂಲಕ ನಿಮ್ಮ ಕೋಪವನ್ನುನಿಯಂತ್ರಿಸಿ.

# ಮಾಯಕೊಂಡ ಕ್ಷೇತ್ರಕ್ಕೆ 750 ಮನೆ ಮಂಜೂರು

**ದಾವಣಗೆರೆ:** ಮಾಯಕೊಂಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ದಾವಣಗೆರೆ ತಾಲ್ಲೂಕಿಗೆ 506, ಚನ್ನಗಿರಿ ತಾಲೂಕಿಗೆ 244 ಸೇರಿ ಕ್ಷೇತ್ರಕ್ಕೆ ಒಟ್ಟು 750 ಮನೆಗಳು ಮಂಜೂರಾಗಿವೆ ಎಂದು ಶಾಸಕ ಕೆ.ಎಸ್. ಬಸವಂತಪ್ಪ ತಿಳಿಸಿದ್ದಾರೆ.



ನಿರ್ಗತಿಕರು, ಬಡವರಿಗೆ ಸೂರು ಕಲ್ಪಿಸಲು ಸರ್ಕಾರ ಮತ್ತು ವಸತಿ ಸಚಿವರ ಮೇಲೆ ಒತ್ತಡ ಹಾಕಿ ಮನೆಗಳನ್ನು ಮಂಜೂರು ಮಾಡಿಸಲಾಗಿದೆ. ಕ್ಷೇತ್ರದ ವ್ಯಾಪ್ತಿಯ ದಾವಣಗೆರೆ ತಾಲೂಕಿನ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿಗಳಿಗೆ 2022-23ನೇ ಸಾಲಿನ ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಮತ್ತು ಬಸವ ವಸತಿ ಯೋಜನೆಯಡಿ 506, ಚನ್ನಗಿರಿ ತಾಲೂಕಿನ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿಗಳಿಗೆ 244 ಸೇರಿದಂತೆ ಒಟ್ಟು 750 ಮನೆಗಳನ್ನು ಮಂಜೂರು ಮಾಡಿಸಲಾಗಿದೆ.

ದಾವಣಗೆರೆ ತಾಲ್ಲೂಕಿನ ಗ್ರಾಪಂಗಳಾದ ಆಲೂರು 12, ಆನಗೋಡು 31, ಅಣಜಿ 23, ಅಣಬೇರು 30, ಅತ್ತಿಗೆರೆ 18, ಬಾಡ 25, ಬಸವನಾಳು 24, ಗೋಪನಾಳು 21, ಹೆಮ್ಮನಬೇತೂರು 25, ಹೊನ್ನೂರು 20, ಹುಚ್ಚವ್ವನಹಳ್ಳಿ 23, ಐಗೂರು 5, ಕಂದಗಲ್ಲು 10, ಕಂದನಕೋವಿ 10, ಕೊಡಗನೂರು 19, ಕುರ್ಕಿ 20, ಮಳಲಕೆರೆ 20, ಮತ್ತಿ 15, ಮಾಯಕೊಂಡ 33, ನರಗನಹಳ್ಳಿ 22, ಶ್ಯಾಗಲೆ 21, ತೋಳಹುಣಸೆ 14, ನೇರ್ಲಿಗೆ 18, ಲೋಕಿಕೆರೆ 22, ಶ್ರೀರಾಮನಗರ 5 ಸೇರಿ ಒಟ್ಟು 506 ಮನೆ ಹಂಚಿಕೆ ಮಾಡಲಾಗಿದೆ.

ಚನ್ನಗಿರಿ ತಾಲ್ಲೂಕಿನ ಗ್ರಾಪಂಗಳಾದ ಬಸವಾಪಟ್ಟಣ 34, ಬೆಳಲಗೆರೆ 18, ಚಿರಡೋಣಿ 30, ದಾಗಿನಕಟ್ಟೆ 17, ಜಿ.ಕೆ.ಹಳ್ಳಿ 8, ಕಬ್ಬಳ 5, ಕಂಸಾಗರ 14, ಕಣಿವೆಬಿಳಚಿ 2, ಕಾರಿಗನೂರು 10, ಕತ್ತಲಗೆರೆ 12, ಕೋಟೆಹಾಳ್ 11, ನಿಲೋಗಲ್ಲು 14, ತ್ಯಾವಣಿಗೆ 26, ರುದ್ರಾಪುರ 3, ನಿವಿಲೇಹಾಳು 16, ನಲ್ಕುದುರೆ 24 ಸೇರಿ ಒಟ್ಟು 244 ಮನೆ ಹಂಚಿಕೆ ಮಾಡಲಾಗಿದೆ ಎಂದು ಶಾಸಕ ಕೆ.ಎಸ್.ಬಸವಂತಪ್ಪ ಮಾಹಿತಿ ನೀಡಿದ್ದಾರೆ.

ಸರ್ಕಾರ ನಿರ್ಗತಿಕರಿಗೆ, ಬಡವರಿಗೆ ಮನೆ ನೀಡಿದೆ.

ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು, ಸದಸ್ಯರು ಅರ್ಹ ಫಲಾನುಭವಿಗಳನ್ನು ಪಾರದರ್ಶಕವಾಗಿ ಗುರುತಿಸಿ ಮನೆ ನೀಡಬೇಕು. ಯಾವುದೇ ಕಾರಣಕ್ಕೂ ಫಲಾನುಭವಿಗಳ ಬಳಿ ಮನೆ ನೀಡುವುದಕ್ಕೆ ಹಣ ವಸೂಲಿ ಮಾಡಬಾರದು. ಒಂದು ವೇಳೆ ಹಣ ವಸೂಲಿ ಮಾಡಿದರೆ ಫಲಾನುಭವಿಗಳು ನೇರವಾಗಿ ಶಾಸಕರನ್ನು ಸಂಪರ್ಕಿಸಬೇಕೆಂದು ಮನವಿ ಮಾಡಿದ್ದಾರೆ.

# ಚಿಗಟೇರಿ ಆಸ್ಪತ್ರೆಯಲ್ಲಿ ಸ್ವಚ್ಛತಾ ಅಭಿಯಾನ

### ಪರಿಸರ ಸ್ವಚ್ಛತೆಯಿಂದ ಹರಡುವ ಕಾಯಿಲೆಗಳನ್ನು ನಿಯಂತ್ರಿಸಬಹುದು: ಡಾ. ಎಂ.ಬಿ ನಾಗೇಂದ್ರಪ್ಪ

**ದಾವಣಗೆರೆ :** ನಮ್ಮ ಆರೋಗ್ಯ ನಮ್ಮ ಕೈಯಲ್ಲಿ ಪರಿಸರ ಸ್ವಚ್ಛವಾಗಿದ್ದರೆ ಇದರಿಂದ ಹರಡುವ ರೋಗಗಳನ್ನು ತಡೆಗಟ್ಟಲು ಸಾಧ್ಯವಾಗಲಿದೆ ಎಂದು ಚಿಗಟೇರಿ ಜಿಲ್ಲಾ ಆಸ್ಪತ್ರೆ ಸರ್ಜನ್ ಡಾ; ಎಂ.ಬಿ.ನಾಗೇಂದ್ರಪ್ಪ ತಿಳಿಸಿದರು.



ಅವರು ಶನಿವಾರ ಮಹಾನಗರ ಪಾಲಿಕೆ ಮತ್ತು ಚಿಗಟೇರಿ ಜಿಲ್ಲಾ ಆಸ್ಪತ್ರೆ ವತಿಯಿಂದ ಆಸ್ಪತ್ರೆಯ ಆವರಣದಲ್ಲಿ ಸ್ವಚ್ಛತಾ ಆಂದೋಲನ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ಸಾರ್ವಜನಿಕ ಆಸ್ತಿಗಳು, ರಸ್ತೆಗಳು ಮತ್ತು ಸಮಾಜವನ್ನು ಸ್ವಚ್ಛವಾಗಿಡುವುದು ಮತ್ತು ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಆಸ್ಪತ್ರೆಯ ಆವರಣದಲ್ಲಿ ಸ್ವಚ್ಛತಾ ಆಂದೋಲನ ಅಭಿಯಾನ ಆಯೋಜಿಸಲಾಗಿದೆ.

ಸ್ವಚ್ಛತೆಯಿಂದ ಸುತ್ತಮುತ್ತಲಿನ ಪರಿಸರದ ನೈರ್ಮಲ್ಯತೆಯನ್ನು ಕಾಪಾಡಿಕೊಳ್ಳಬಹುದು. ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯದೇ ಸಂಗ್ರಹಣಾ ಸ್ಥಳಗಳಲ್ಲಿ ಮಾತ್ರ ಹಾಕಬೇಕು. ಆಸ್ಪತ್ರೆ ಆವರಣದಲ್ಲಿ ಆಹಾರದ ತಿನಿಸುಗಳನ್ನು ಹಾಕಿ ಇನ್ನೊಬ್ಬರಿಗೆ ತೊಂದರೆಯಾಗುವ ರೀತಿಯಲ್ಲಿ ಮಾಡುತ್ತಾರೆ. ಇದರಿಂದ ಹಲವಾರು ಸಾಂಕ್ರಾಮಿಕ ರೋಗಗಳಿಗೆ ಕಾರಣವಾಗುತ್ತದೆ, ಆಸ್ಪತ್ರೆಗೆ ಬರುವ ಸಾರ್ವಜನಿಕರು ಜಾಗೃತರಾಗಬೇಕೆಂದರು.

ಸಂದರ್ಭದಲ್ಲಿ ಪಾಲಿಕೆಯ ಸದಸ್ಯರಾದ ಗಡಿಗುಡಾಳು ಮಂಜುನಾಥ, ಪಾಲಿಕೆಯ ಪೌರಕಾರ್ಮಿಕರು, ಆರೋಗ್ಯ ರಕ್ಷಾ ಸಮಿತಿ ಸದಸ್ಯರು, ಸಿಬ್ಬಂದಿ ಹಾಗೂ ಆಸ್ಪತ್ರೆಯ ಸ್ವಚ್ಛತಾ ಸಿಬ್ಬಂದಿಗಳು ಭಾಗವಹಿಸಿದ್ದರು.

# ಜಾತಿ ಪದ್ಧತಿ-ಅಸ್ಪೃಶ್ಯತೆ ವಿರುದ್ಧ ಹೋರಾಡಿದ ಚೇತನ ಮಾಚಿದೇವ

**ಶಿವಮೊಗ್ಗ:** ಮಡಿವಾಳ ಮಾಚಿದೇವ 12 ನೇ ಶತಮಾನದಲ್ಲಿ ಜಾತಿ ಪದ್ಧತಿಯ ವಿರುದ್ಧ ಹೋರಾಡಿದರು. ಆ ಮೂಲಕ ಸರ್ವರಿಗೂ ಸಮಪಾಲು, ಸಮಬಾಳು ಎಂಬ ಆದರ್ಶದ ಮಾರ್ಗವನ್ನು ಹಾಕಿಕೊಟ್ಟವರು. ಪ್ರಸ್ತುತ ನಾವೆಲ್ಲರೂ ಅವರ ಜೀವನಾದರ್ಶಗಳನ್ನು ಅನುಸರಿಸಬೇಕು ಎಂದು ಶಾಸಕರಾದ ಎಸ್. ಎನ್. ಚನ್ನಬಸಪ್ಪ ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಮಡಿವಾಳ ಸಮಾಜ ಸಂಘ ಸಹಯೋಗದೊಂದಿಗೆ ಶನಿವಾರ ನಗರದ ಕುವೆಂಪು ರಂಗಮಂದಿರದಲ್ಲಿ ಆಯೋಜಿಸಿದ್ದ ಶ್ರೀ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಡಿವಾಳ ಮಾಚಿದೇವರು ಯಾವುದೇ ಜಾತಿ, ಜನಾಂಗ, ಧರ್ಮಕ್ಕೆ ಸಿಮೀತವಾಗದೆ ಇಡೀ ಮನುಕುಲದ ಒಳಿತಿಗಾಗಿ ದುಡಿದವರು. ಈ ಸಮಾಜಕ್ಕೆ ಯಾವುದು ಬೇಕು, ಬೇಡ ಎಂಬ ಚಿಂತನೆಯಲ್ಲಿ ತೊಡಗಿಕೊಂಡವರು. ಇದಲ್ಲದೆ ಸದಾ ಶೋಷಿತರು, ಅಸ್ಪೃಶ್ಯರು, ಶಿಕ್ಷಣದಿಂದ ವಂಚಿತರಾದವರ ಬಗ್ಗೆ ಹೆಚ್ಚಿನ ಕಾಳಜಿ ವಹಿಸುತ್ತಿದ್ದರು. ಮಾಚಿದೇವನು ಕೂಡ ಶಿಕ್ಷಣದಿಂದ ವಂಚಿತರಾದ ಸಮುದಾಯದಿಂದ ಬಂದವರು. ಆದರೆ ಅವರಿಗೆ ಮಲ್ಲಿಕಾರ್ಜುನ ಸ್ವಾಮಿ ಎಂಬ ಗುರು ಶಿಕ್ಷಣ ನೀಡಿದರು. ಅದರಿಂದ ಅವರಿಗೆ 3 ಲಕ್ಷಕ್ಕೂ ಹೆಚ್ಚು ವಚನಗಳನ್ನು ರಚಿಸಲು ಸಾಧ್ಯವಾಯಿತು. ಮಲ್ಲಿಕಾರ್ಜುನ ಸ್ವಾಮಿ ಇಲ್ಲದಿದ್ದರೆ ಮಾಚಿದೇವನಂತಹ ದಾರ್ಶನಿಕನನ್ನು ಈ ಸಮಾಜ ನೋಡುತ್ತಿರಲಿಲ್ಲ. ಗುರುಪರಂಪರೆ ಇಲ್ಲದೆ ಸಮಾಜವನ್ನು ಕಟ್ಟಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಮಾಚಿದೇವನು ವಚನಗಳ ಮೂಲಕ ಪ್ರಕಾಶಮಾನವಾಗಿ ಬೆಳೆದರು. ದೇಹದ ಶುಚಿತ್ವ ಬಗ್ಗೆ ಮಾತ್ರವಲ್ಲದೆ ಮನಸ್ಸಿನ ಶುಚಿತ್ವದ ಬಗ್ಗೆಯೂ ಅರಿವು ಮೂಡಿಸಿದರು. ಮಡಿ ಮೈಲಿಗೆಯ ತಾರತಮ್ಯದ ವಿರುದ್ಧ ಸಂಘಟಿಸಿದರು. ಕಾಯಕ, ಕಾರ್ಯ ಹೀಗೇ ಹತ್ತು ಹಲವಾರು ವಿಷಯಗಳನ್ನು ತಿಳಿಸಿಕೊಟ್ಟಿದ್ದಾರೆ. ಇವೆಲ್ಲವೂ ಮಾತಿಗೆ ಸೀಮಿತವಾಗದೇ ಅದನ್ನು ಅನುಸರಿಸಬೇಕು ಎಂದರು.

ವಿಧಾನ ಪರಿಷತ್ ಶಾಸಕರಾದ ಬಲ್ಕೀಶ್ ಬಾನು ಮಾತನಾಡಿ, ಯುವಕರಿಗೆ ಇಂತಹ ಮಹನೀಯರ ಪರಿಚಯವಾಗುವುದು ಇತ್ತೀಚಿನ ವಿದ್ಯಾಮಾನಗಳಲ್ಲಿ ಅಗತ್ಯವಾಗಿದೆ. ಯುವಜನತೆಯನ್ನು ಕೂಡ ಕಾರ್ಯಕ್ರಮದಲ್ಲಿ ಒಳಗೊಳ್ಳುವಂತೆ ಮಾಡಬೇಕು. ಆ ಮೂಲಕ ವಚನಕಾರರ ಸಂದೇಶವು ಇಡೀ ಸಮಾಜಕ್ಕೆ ತಲುಪಬೇಕು ಎಂದರು.

ಮಾಚಿದೇವ ಅಸ್ಪೃಶ್ಯತೆ, ತಾರತಮ್ಯದಂತಹ ಸಾಮಾಜಿಕ ಪಿಡುಗಗಳ ವಿರುದ್ಧ ಕ್ರಾಂತಿ ಮಾಡುತ್ತಿದ್ದರು. ಸಮಾಜದ ಪ್ರಾವಿತ್ರತೆ ಕಾಪಾಡುವಲ್ಲಿ ಶ್ರಮಿಸಿದ್ದಾರೆ. ಕಾಯಕವೇ ಕೈಲಾಸ ತತ್ವದಲ್ಲಿ ನಂಬಿಕೆ ಇಟ್ಟಿಕೊಂಡಿದ್ದ ಇವರು ದೇಹ ಮಾತ್ರವಲ್ಲ ಮನಸ್ಸು ಕೂಡ ಶುದ್ಧವಾಗಿರಬೇಕೆಂದು ಸಾರುತ್ತಿದ್ದರು ಎಂದರು.

ಸೂಡಾ ಅಧ್ಯಕ್ಷರಾದ ಹೆಚ್. ಎಸ್. ಸುಂದರೇಶ್ ಮಾತನಾಡಿ, ಮಾಚಿದೇವ ಮನುಷ್ಯರಲ್ಲ. ಅವರು ದೈವ ಸಂಭೂತರು. 12 ನೇ ಶತಮಾನದಲ್ಲಿ ಸಮಾಜದಲ್ಲಿನ ಅಂಕುಡೊಂಕು ತಿದ್ದಲು ಬಂದವರು. ಆ ಮೂಲಕ ವಚನ ಕ್ರಾಂತಿ ಆರಂಭಿಸಿ ಶೋಷಿತ ವರ್ಗಗಳ ಸುಧಾರಣೆ ಮಾಡಿದರು. ಶರಣರೆಲ್ಲರೂ ಒಂದುಗೂಡಿಕೊಂಡು ಸಮಸಮಾಜ ನಿರ್ಮಾಣಕ್ಕೆ ಶ್ರಮಿಸುತ್ತಿದ್ದರು. ಈಗ ಅಂತಹ ಕಾರ್ಯವನ್ನು ಅಂಬೇಡ್ಕರ್ ಮಾಡಿದ್ದಾರೆ. ಶರಣರ ಮಾರ್ಗವನ್ನು ಅನುಸರಿಸಿದ ಅಂಬೇಡ್ಕರ್ ಎಲ್ಲರಿಗೂ ಸ್ವಾತಂತ್ರ ?ಯ, ಸಮಾನವಾದ ಹಕ್ಕನನ್ನು ನೀಡಲು ಸಂವಿಧಾನವನ್ನು ರಚಿಸಿದರು. ಸಂಪತ್ತು ಎಲ್ಲ ವರ್ಗದವರಿಗೆ ಸಮಾನವಾಗಿ ಹಂಚಿಕೆ ಆಗಬೇಕೆಂಬ ಆಶಯ ಅವರದಾಗಿತ್ತು ಎಂದರು.

ನಿವೃತ್ತ ಪ್ರೌಢಶಾಲಾ ಶಿಕ್ಷಕರಾದ ಕೆ.ಬಿ.ಮಂಜಪ್ಪ ಉಪನ್ಯಾಸ ನೀಡಿ, ಶರಣರಲ್ಲಿ ಮಾಚಿದೇವ ಅಗ್ರಸ್ಥಾನ ಪಡೆದಿದ್ದರು. ಬಸವಣ್ಣ ಕಲ್ಯಾಣಕ್ಕೆ ಬಂದಾಗ ಮಾಚಿದೇವರನ್ನು ಮೆಚ್ಚಿ ಅನುಭವ ಮಂಟಪಕ್ಕೆ ಕರೆದುಕೊಂಡು ಹೋದರು. ಆ ಮೂಲಕ ಮಾಚಿದೇವ ಶರಣ ಸಂಘದಲ್ಲಿ ಸ್ಥಾನ ಪಡೆದುಕೊಂಡರು. ಆದರೆ ಅಲ್ಲಿಯೂ ತನ್ನ ಕಾಯಕ ವೃತ್ತಿಯನ್ನು ಮುಂದುವರೆಸಿದರು ಎಂದರು.

ಶರಣ ಸಮೂಹದಲ್ಲಿ ಹಿರಿಯರಾಗಿದ್ದ ಮಾಚಿದೇವ ವಿಶೇಷ ಸ್ಥಾನ ಗಳಿಸಿದ್ದರು. ತಮ್ಮ ಇಡೀ ಜೀವನವನ್ನು ಸಮಾಜಕ್ಕಾಗಿ ಮುಡಿಪಾಗಿಟ್ಟಿದ್ದರು. ಕಲ್ಯಾಣ ಕ್ರಾಂತಿ ನಂತರ ಅನೇಕ ಶರಣರನ್ನು ಮತ್ತು ಅವರ ವಚನಗಳನ್ನು ರಕ್ಷಣೆ ಮಾಡಿದರು. ಇದರಿಂದ ಅನೇಕ ಶರಣರ ವಚನಗಳು ಈಗಲೂ ನಮಗೆ ಓದಲು ಸಿಗುತ್ತಿದೆ. ವೃತ್ತಿಯ ಬಗ್ಗೆ ಬಹಳ ನಿಷ್ಠೆಯಿಂದ ಇದ್ದ ಮಾಚಿದೇವ ಅಗಸತನ ಕೀಳಲ್ಲ, ಅರಸತನ ಮೇಲಲ್ಲ. ಅವರವರ ವೃತ್ತಿಯಲ್ಲಿ ಅವರು ಅರಸರೇ ಎಂದು ತಿಳಿಸಿದ್ದರು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಡಿವಾಳ ಸಮಾಜ ಸಂಘದ ಅಧ್ಯಕ್ಷರಾದ ಹೆಚ್. ಎಸ್.ಸದಾಶಿವಪ್ಪ ಹಾಗೂ ಸಮಾಜದ ಮುಖಂಡರುಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಉಮೇಶ್ ಹೆಚ್ ಹಾಜರಿದ್ದರು.

# ದೇವಾಲಯಗಳ ನಿರ್ಮಾಣದಿಂದಧಾರ್ಮಿಕ ಶ್ರದ್ಧೆ, ಭಕ್ತಿ, ಸಂಸ್ಕೃತಿಗಳ ಪುನರುತ್ಥಾನವಾಗುತ್ತದೆ. ಹೆಚ್.ಡಿತಮ್ಮಯ್ಯ.

**ಚಿಕ್ಕಮಗಳೂರು:** ದೇವಾಲಯಗಳನ್ನು ನಿರ್ಮಾಣ ಮಾಡುವುದು ಸುಲಬದಕಾರ್ಯವಲ್ಲನೂತನದೇವಾಲಯಗಳ ನಿರ್ಮಾಣದಿಂದಧಾರ್ಮಿಕ ಶ್ರದ್ಧೆ, ಭಕ್ತಿ ಮತ್ತು ಸಂಸ್ಕೃತಿಗಳ ಪುನರುತ್ಥಾನವಾಗುತ್ತದೆಎಂದು ಚಿಕ್ಕಮಗಳೂರು ವಿಧಾನ ಸಭಾಕ್ಷೇತ್ರದ ಶಾಸಕ ಹೆಚ್.ಡಿತಮ್ಮಯ್ಯ ಹೇಳಿದರು.



ಚಿಕ್ಕಮಗಳೂರು ತಾಲ್ಲೂಕು, ಲಕ್ಯಾ ಹೋಬಳಿಯ ಕೆ.ಬಿ.ಹಾಳ್ ಗ್ರಾಮದಲ್ಲಿಇಂದು ಶ್ರೀ ದುರ್ಗಾಬದೇವಿ ನೂತನದೇವಾಲಯ ಲೋಕಾರ್ಪಣೆ, ವಿಗ್ರಹ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಪೂಜಾಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದಅವರು ನಮ್ಮ ಪೂರ್ವಿಕರು ಆಚರಿಸಿ ಬೆಳಿಸಿಕೊಂಡು ಬಂದಿರುವ ಸಂಸ್ಕಾರಯುತ ಕಾರ್ಯಗಳನ್ನು ನಾವು ನಮ್ಮ ಮುಂದಿನ ಪೀಳಿಗೆಗೆ ಪರಿಚಯಿಸಿಕೊಡಬೇಕು ಎಂದರು.

ಯಾವುದೇ ದೇವಾಲಯಗಳ ನಿರ್ಮಾಣದ ನಂತರ ದೇವಾಲಯಗಳಲ್ಲಿ ಪೂಜೆ ಪುನಸ್ಕಾರಗಳೊಂದಿಗೆ ಅದರ ನಿರ್ವಾಹಣೆಯಕಾರ್ಯವು ವ್ಯವಸ್ಥಿತವಾಗಿರಬೇಕು. ದೇವಾಲಯಗಳಿಗೆ ತೆರಳಿ ಹೋರ ಬಂದ ಮಾನಸಿಕವಾಗಿ ಶಾಂತಿಯುತವಾಗಿರಲು ಸಾಧ್ಯವಾಗುತ್ತದೆ ಎಂದ ಅವರು ಪ್ರತಿಯೊಬ್ಬರೂದೇವರು, ಗುರು ಹಿರಿಯರನ್ನು ಪೂಜಿಸಿ ಗೌರವಿಸುವುದರೊಂದಿಗೆಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಿಎಂದರು.

ಸಾಹಿತಿಗಳಾದ ಚಟ್ನಳ್ಳಿ ಮಹೇಶ್ಧಾರ್ಮಿಕ ಉಪನ್ಯಾಸ ನೀಡಿಇತ್ತೀಚಿನ ದಿನಗಳಲ್ಲಿ ಸುಳ್ಳು, ಮೋಸ, ಅನ್ಯಾಯದ ಕೃತ್ಯಗಳು ಹೆಚ್ಚುತ್ತಿದೆ. ಆತ್ಮ ಸಾಕ್ಷಿಯ ಮೂಲಕ ಮಾನವನೆ ಮಹಾ ದೇವನಾಗಬೇಕು, ನರ ಹರನಾಗಬೇಕು ಪ್ರತಿ ಮನೆಯು ಮಹಾ ಮನೆಯಾಗಬೇಕು ಎಂಬ ಸಂಕಲ್ಪದಿಂದ ನಮ್ಮ ಹಿರಿಯರು ದೇವಾಲಯಗಳ ನಿರ್ಮಾಣ ಮಾಡಿದ್ದಾರೆ. ಪ್ರತಿಯೊಬ್ಬರಲ್ಲಿರುವ ನಾನು ಎಂಬ ಅಸೂಹೆ, ಅಹಂಕಾರವನ್ನು ದೇವಾಲಯಗಳು ನಿರ್ನಾಮ ಮಾಡುತ್ತವೆಎಂದಅವರು ದೇವಾಲಯಗಳ ನಿರ್ಮಾಣ ಕೇವಲ ಪ್ರದರ್ಶನವಲ್ಲಅದುಆತ್ಮದ ಬೆಳಕು ಎಂದು ತಿಳಿಸಿದರು.

ಮಾಜಿಜಿಲ್ಲಾ ಪಂಚಾಯಿತಿ ಸದಸ್ಯರವೀಂದ್ರ ಬೆಳವಾಡಿ ಮಾತನಾಡಿ ಭೂಮಿ ಮೇಲೆ ಆಚಾರ, ವಿಚಾರಧಾರ್ಮಿಕ ಕಾರ್ಯಗಳು ಇನ್ನೂಜೀವಂತವಾಗಿರಲು ದೇವಾಲಯಗಳ ಕೊಡುಗೆ ಬಹಳಷ್ಟಿದೆ.ದೇವಾಲಯಗಳು ಮಾನವನಲ್ಲಿಒಗ್ಗಟ್ಟನ್ನು ನಿರ್ಮಾಣ ಮಾಡುತ್ತವೆ. ಪ್ರತಿಯೊಬ್ಬರುಒಂದುಗೂಡಿಉತ್ತಮಕಾರ್ಯಕ್ಕೆ ಶ್ರಮಿಸಿದರೆ ಉತ್ತಮ ಸಮಾಜ ನಿರ್ಮಾಣವಾಗುತ್ತದೆಎಂದರು.

ಬಿಜೆಪಿ ಮುಖಂಡರಾದ ಪಲ್ಲವಿ ಸಿ.ಟಿ.ರವಿ, ತಾಲ್ಲೂಕು ಪಂಚಾಯಿತಿ ಮಾಜಿಅಧ್ಯಕ್ಷೆ ಶುಭ ಸತ್ಯಮೂರ್ತಿ, ಗ್ರಾಮ ಪಂಚಾಯಿತಿಅಧ್ಯಕ್ಷೆಛಾಯಾದಯಾನಂದ್ ಸಭೆಯನ್ನು ಉದ್ದೇಶಿಸಿ ಮಾತನಾಡಿದರು, ಈ ಸಂದರ್ಭದಲ್ಲಿಶ್ರೀ ದುರ್ಗಾಂಬ ದೇವಿ ಕ್ಷೇಮಾಭಿವೃದ್ಧಿ ಸಂಘ 'ಡಅಧ್ಯಕ್ಷರಾದಕೆ.ಟಿ.ರಂಗಶೆಟ್ಟಿ, ಗೌರವಾಧ್ಯಕ್ಷ ಕೆ.ಡಿ.ಪುಟ್ಟೇಗೌಡ, ಉಪಾಧ್ಯಕ್ಷರಾದಕೆ. ಎಸ್ ಸಿದ್ದೇಗೌಡ, ಖಜಾಂಚಿಗಳಾದ ಕೆ.ಆರ್‌ಗುರುಮೂರ್ತಿ, ಕಾರ್ಯದರ್ಶಿಗಳಾದ ಕೆ.ಸಿ ರಾಮೇಗೌಡ, ಶಿಲ್ಪಿ ಮೋಹನ್, ನಿವೃತ್ತ ಡಿ.ಓ.ಎಸ್ಪಿ ಪುರುಷೋತ್ತಮ್, ಸಮಾಜ ಸೇವಕರಾದರಾಮಕೃಷ್ಣೇಗೌಡ, ಗ್ರಾಮ ಪಂಚಾಯಿತಿ, ಉಪಾಧ್ಯಕ್ಷಕೆ.ಜಿ ಪ್ರವೀಣ್, ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಶಿವಶಂಕರ್ ಶೆಟ್ಟಿ ನೆರವೇರಿಸಿದರು.

### ಬಾಲ ಕಾರ್ಮಿಕರು ಹಾಗೂ ಕಿಶೋರಕಾರ್ಮಿಕರು ಪತ್ತೆ

**ದಾವಣಗೆರೆ :** ಪ್ಯಾನ್ ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಆಂದೋಲನದ ಅಂಗವಾಗಿ ಹರಿಹರದಲ್ಲಿರುವ ಇಟ್ಟಿಗೆ ಭಟ್ಟಿಗಳಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಶುಕ್ರವಾರ (ಜ.24) ಭೇಟಿ ನೀಡಿ ಬಾಲ ಮತ್ತು ಕಿಶೋರಾವಸ್ಥೆ ಕಾರ್ಮಿಕರ ತಪಾಸಣೆ ನಡೆಸುವಾಗ ಗುತ್ತೂರು ಕಾಲೋನಿ ಇಟ್ಟಿಗೆ ಭಟ್ಟಿ ತಪಾಸಣೆಯಲ್ಲಿ 2 ಗಂಡು ಮಕ್ಕಳು ಕಾರ್ಮಿಕರು ಹಾಗೂ 4 ಹೆಣ್ಣು ಮಕ್ಕಳು ಕಿಶೋರಕಾರ್ಮಿಕರು ಅಪಾಯಕಾರಿ ಉದ್ದಿಮೆಯಲ್ಲಿ ದುಡಿಯುತ್ತಿರುವುದು ಪತ್ತೆಯಾಗಿದ್ದು, ಪತ್ತೆಯಾದ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರಿಪಡಿಸಿ ಮಾಲೀಕರ ವಿರುದ್ಧ ಸೂಕ ಕಾನೂನು ಕ್ರಮ ಕೈಗೊಳ್ಳಲಾಗಿದೆ.ಹರಿಹರದ ವೃತ್ತದ ಕಾರ್ಮಿಕರೆ ನಿರೀಕ್ಷಕರಾದ ಜೆ. ಕವಿತಾಕುಮಾರಿ, ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿಗಳು, ಮಕ್ಕಳ ರಕ್ಕಣಾ ಘಟಕದ ಸಿಬ್ಬಂದಿಗಳಾದ ಹಾಲೇಶ್, ರವಿ, ಹಾಗೂ ಅಂಗನವಾಡಿ ಸಹಾಯಕಿ ಬೇಬಿ, ಯೋಜನಾ ನಿರ್ದೇಶಕರು ಪ್ರಸನ್ನ ಇ.ಎನ್ ಇದ್ದರು.

# ಕ್ರೀಡಾಶಾಲೆಗೆ ಪ್ರತಿಭಾವಂತ ಕ್ರೀಡಾಪಟುಗಳ ಆಯ್ಕೆ

**ಚಿತ್ರದುರ್ಗ:** 2025-26ನೇ ಸಾಲಿಗೆ ಚಿತ್ರದುರ್ಗ ನಗರದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದ ಕ್ರೀಡಾ ವಸತಿ ಶಾಲೆಗೆ ವಾಲಿಬಾಲ್ ಹಾಗೂ ಅಥ್ಲೆಟಿಕ್ ಕ್ರೀಡೆಗಳಲ್ಲಿ 2025-26ನೇ ಸಾಲಿನಲ್ಲಿ ಜಿಲ್ಲೆಯ ಪ್ರತಿಭಾವಂತ ಬಾಲಕ ಹಾಗೂ ಬಾಲಕಿಯರನ್ನು ಗುರುತಿಸಿ ಕ್ರೀಡಾಶಾಲೆಗೆ ಪ್ರವೇಶ ನೀಡಲಾಗುವುದು.

ಪ್ರವೇಶ ಪಡೆದ ಬಾಲಕ-ಬಾಲಕಿಯರಿಗೆ ಇಲಾಖೆಯ ವತಿಯಿಂದ ಉಚಿತವಾಗಿ ಊಟ, ವಸತಿ ಮತ್ತು ಕ್ರೀಡಾ ಪರಿಣಿತರುಗಳಿಂದ ತರಬೇತಿಯನ್ನು ನೀಡಿ ಅತ್ಯುತ್ತಮ ಕ್ರೀಡಾಪುಟಗಳನ್ನಾಗಿ ರೂಪುಗೊಳಿಸಿ ರಾಜ್ಯ, ರಾಷ್ಟ್ರ, ಅಂತ ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ರೀತಿಯಲ್ಲಿ ತರಬೇತಿಗೊಳಿಸಲಾಗುವುದು.

ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ 4ನೇ ತರಗತಿಯಲ್ಲಿ ಓದುತ್ತಿರುವ ಮತ್ತು 2025ರ ಜೂನ್ 1ಕ್ಕೆ 10 ವರ್ಷ ಮತ್ತು 11 ವರ್ಷ ಮೀರದ ಬಾಲಕ ಮತ್ತು ಬಾಲಕಿಯರು ಆಯ್ಕೆಯಲ್ಲಿ ಭಾಗವಹಿಸಬಹುದು. ಆಯ್ಕೆಯಲ್ಲಿ ಅಭ್ಯರ್ಥಿಗಳು ದೈಹಿಕ ಸಾಮರ್ಥ್ಯ, ಶಕ್ತಿ, ಚಾಕಚಕ್ಯತೆ, ಸಹಿಷ್ಣುತೆ, ಕುಶಲತೆ, ವೇಗ ಹಾಗೂ ಆಯಾ ಕ್ರೀಡೆಗೆ ಅಗತ್ಯವಿರುವ ಎತ್ತರ ಪರೀಕ್ಷಿಸಿ ಒಟ್ಟಾರೆ ಶೇ.50 ಕ್ಕೂ ಹೆಚ್ಚು ಅಂಕಗಳನ್ನು ಪಡೆದವರಿಗೆ ಯೋಗ್ಯತಾನುಸಾರ ಆಯ್ಕೆಗೆ ಪರಿಗಣಿಸಲಾಗುವುದು. ಜಿಲ್ಲಾ ಮಟ್ಟದ ಆಯ್ಕೆಯನ್ನು ಫೆ.13 ರಿಂದ 15 ರವರೆಗೆ ಚಿತ್ರದುರ್ಗ ನಗರದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಸಲಾಗುವುದು.ಆಸಕ್ತ ಅರ್ಹ ಅಭ್ಯರ್ಥಿಗಳು ತಮ್ಮ ತಾಲ್ಲೂಕು ಕೇಂದ್ರಗಳಲ್ಲಿ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಸಾಧ್ಯವಾಗದಿದ್ದಲ್ಲಿ ಫೆ.13 ರಿಂದ ಫೆ.15 ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ನಡೆಯುವ ಆಯ್ಕೆ ಟ್ರಯಲ್ಸ್‌ನಲ್ಲಿ ಸಂಬಂಧಪಟ್ಟ ದಾಖಲೆಗಳೊಂದಿಗೆ ಭಾಗವಹಿಸಬಹುದಾಗಿದೆ.ಆಯ್ಕೆಯಲ್ಲಿ ಭಾಗವಹಿಸುವ ಬಾಲಕ-ಬಾಲಕಿಯರಿಗೆ ಯಾವುದೇ ರೀತಿಯ ಭತ್ಯೆಯನ್ನು ಇಲಾಖೆ ವತಿಯಿಂದ ನೀಡಲಾಗುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ವಾಲಿಬಾಲ್ ತರಬೇತುದಾರ ಮಹಮ್ಮದ್ ಮುಹೀಬುಲ್ಲಾ ದೂರವಾಣಿ ಸಂಖ್ಯೆ 9611673475, ಅಥ್ಲೆಟಿಕ್ಸ್ ತರಬೇತುದಾರರು ತಿಪ್ಪಣ್ಣ ಎಸ್. ಮಾಳಿ ದೂರವಾಣಿ ಸಂಖ್ಯೆ 9380889647 ಗೆ ಸಂಪರ್ಕಿಸಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ನಿಧನ ಸುದ್ದಿಗಳು

### ಎಂ.ಆರ್.ಶಿವಲಿಂಗಸ್ವಾಮಿ ನಿಧನ

ಬಸವಾಪಟ್ಟಣ: ಸಮೀಪದ ಸಾಗರಪೇಟೆಯ ಬಾಲಾಜಿ ಬಾರ್ ಮಾಲೀಕ ಎಂ.ಆರ್.ಶಿವಲಿಂಗಸ್ವಾಮಿ (55) ಶನಿವಾರ ನಿಧನರಾದರು.ಇವರಿಗೆ ಪತ್ನಿ, ಪುತ್ರ, ಪುತ್ರಿ ಇದ್ದಾರೆ. ಅಂತ್ಯಕ್ರಿಯೆ ಭಾನುವಾರ ಬೆಳಿಗ್ಗೆ ದಾವಣಗೆರೆಯ ಗ್ಲಾಸ್ಹೌಸ್ ಪಕ್ಕದ ಶಾಮನೂರು ವೀರಶೈವ ರುದ್ರ-ಭೂಮಿಯಲ್ಲಿ ನಡೆಯದಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

### ಎಸ್.ವಿ.ಸುಭದ್ರಾ ನಿಧನ

**ದಾವಣಗೆರೆ:** ವಿನೋಬ ನಗರ ನಿವಾಸಿ ಎಸ್.ವಿ.ಸುಭದ್ರಾ (64) ಶುಕ್ರವಾರ ರಾತ್ರಿ ಸ್ವಗೃಹದಲ್ಲಿ ನಿಧನರಾದರು. ಇವರಿಗೆ ಇಬ್ಬರು ಪುತ್ರರು, ಪುತ್ರಿ ಇದ್ದಾರೆ.ಅಂತ್ಯಕ್ರಿಯೆ ಶನಿವಾರ ನಗರದಲ್ಲಿ ಎಸ್ವಿ.ಸುಭದ್ರಾ ನಡೆಯಿತು.

### ಹೊಳೆಮಠದ ಶಾರದಮ್ಮ ನಿಧನ

**ಹೊನ್ನಾಳಿ:** ಪಟ್ಟಣ ಪಂಚಾಯಿತಿ ಮಾಜಿ ಸದಸ್ಯ ಹೊಳೆಮಠದ ಮುರಿಗೇಂದ್ರಯ್ಯ ಅವರ ಪತ್ನಿ ಹೊಳೆಮಠದ ಶಾರದಮ್ಮ (76) ಶನಿವಾರ ನಿಧನರಾದರು. ನ್ಯಾಮತಿ ಭಾಗದ ವಿಜಯ ಕರ್ನಾಟಕ ವರದಿಗಾರ ಎಚ್.ಎಂ.ಶಾಸ್ತ್ರೀ ಸೇರಿದಂತೆ ಇಬ್ಬರು ಪುತ್ರರು, ಪುತ್ರಿ ಹೊಳೆಮಠದ ಶಾರದಮ್ಮ ಇದ್ದಾರೆ. ಅಂತ್ಯಕ್ರಿಯೆ ಪಟ್ಟಣದಲ್ಲಿ ಶನಿವಾರ ನಡೆಯಿತು.

### ಮೆರವಣಿಗೆ ಬಸವರಾಜಪ್ಪ ನಿಧನ

**ನ್ಯಾಮತಿ:** ಪಟ್ಟಣದ ನೆಹರೂ ರಸ್ತೆ ಬಳಿಯ ನಿವಾಸಿ, ಜವಳಿ ವರ್ತಕ ಮೆರವಣಿಗೆ ಬಸವರಾಜಪ್ಪ (68) ಹೃದಯಾಘಾತದಿಂದ ಶನಿವಾರ ನಿಧನರಾದರು. ಇವರಿಗೆ ಪತ್ನಿ, ಇಬ್ಬರು ಪುತ್ರರು, ಪುತ್ರಿ ಇದ್ದಾರೆ.ಅಂತ್ಯಕ್ರಿಯೆ ಸ್ವಗ್ರಾಮದಲ್ಲಿ ಭಾನುವಾರ ಮಧ್ಯಾಹ್ನ ಮೆರವಣಿಗೆ ಬಸವರಾಜಪ್ಪ 1 ಗಂಟೆಗೆ ನೆರವೇರಿದೆ ಎಂದು ಕುಟುಂಬದವರು ತಿಳಿಸಿದರು.



# ನೂರೈವತ್ತು ವರುಷ; ಸೆಂಟ್ರಲ್ ಕಾಲೇಜಿಗೆ ಹರುಷ



'ಇದೇ ಕೊಠಡಿಯಲ್ಲೇ ರಾಜಾಜಿಯವರು ಪಾಠ ಕೇಳುತ್ತಿದ್ದುದು. ಅದೇ ಕೊಠಡಿಯಲ್ಲಿ, ಸರ್ ಸಿ.ವಿ.ರಾಮನ್, 'ರಾಮನ್ ಎಫೆಕ್ಟ್' ಕುರಿತು ಉಪನ್ಯಾಸ ನೀಡಿದ್ದು. ಈ ಕ್ರೀಡಾಂಗಣದಲ್ಲೇ ಮೈಸೂರು ರಾಜ್ಯ ಘೋಷಣೆಯಾಗಿದ್ದು. ಮೈಸೂರು ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ಆರಂಭವಾಗಿದ್ದು ಇಲ್ಲೇ.'

ಬೆಂಗಳೂರಿನ ಸೆಂಟ್ರಲ್ ಕಾಲೇಜು, ಸಾಹಿತ್ಯ, ಸಂಗೀತ, ವಿಜ್ಞಾನ, ರಾಜಕೀಯ,ಹೋರಾಟ.. ಹೀಗೆ ಹತ್ತು ಹಲವು ಕ್ಷೇತ್ರಗಳ ಸಾಧಕರ ಗರಡಿ ಮನೆ. 150 ವರ್ಷದ ಹರೆಯದರಲ್ಲಿ ಮಿರಿಮಿರಿ ಮಿಂಚುತ್ತಿರುವ ಈ ಕಾಲೇಜಿನ ಹೆಜ್ಜೆಗುರುತುಗಳು ಇಲ್ಲಿವೆ..

ನೂರೈವತ್ತರ ಹರೆಯದ ಬೆಂಗಳೂರಿನ ಸೆಂಟ್ರಲ್ ಕಾಲೇಜಿನ ಮಹತ್ವದ ಘಟನೆಗಳನ್ನು ಸಿಬ್ಬಂದಿ ಉಮೇದಿನಿಂದ ವಿವರಿಸುತ್ತಿದ್ದರೆ, ಅಂದಿನ ಘಟನೆಗಳೆಲ್ಲಾ ಮೆರವಣಿಗೆಹೊರಟು ರೋಮಾಂಚನವಾಯಿತು.

ಸೆಂಟ್ರಲ್ ಕಾಲೇಜು,ಮೂರು 'ಭಾರತ ರತ್ನಗಳು, ಜ್ಞಾನಪೀಠ ಪುರಸ್ಕೃತರು, ಸಾಹಿತಿಗಳು, ಕಾನೂನು ಪರಿಣತರು, ಮುಖ್ಯಮಂತ್ರಿಗಳು, ನ್ಯಾಯಮೂರ್ತಿಗಳು, ವಿಜ್ಞಾನಿಗಳು, ಎಂಜಿನಿಯರ್ಗಳು, ಸಂಗೀತಗಾರರು, ಕ್ರೀಡಾಪಟುಗಳು, ಪತ್ರಕರ್ತರು...ಹೀಗೆ ನಾನಾ ಕ್ಷೇತ್ರಗಳ 'ತಾರೆ'ಗಳು ಮಿನುಗಲು ಕಾರಣ ಇದೇ ಕಾಲೇಜು.

ಬ್ರಿಟಿಷರ ಶೈಕ್ಷಣಿಕ ಕಕ್ಕುಲತೆಯಿಂದ ನಿರ್ಮಾಣವಾದ ಇದು ಜಗವೇಕೊಂಡಾಡುವಂತಹ 'ರತ್ನ'ಗಳನ್ನು ನೀಡಿದೆ.

ಬೆಂಗಳೂರಿನ ಅರಮನೆ ರಸ್ತೆಯ ಎರಡು ಬದಿಯಲ್ಲಿ 43 ಎಕರೆಯಲ್ಲಿ ಕೆಂಪು ಕಟ್ಟಡಗಳೊಂದಿಗೆ ಕಂಗೊಳಿಸುತ್ತಿರುವ ಸೆಂಟ್ರಲ್ ಕಾಲೇಜು ಆರಂಭವಾಗಿದ್ದು 1858ರಲ್ಲಿ. ಅದೂ ಪುಟ್ಟ ಶೆಡ್ನಲ್ಲಿ. ಆರಂಭದಲ್ಲಿ ಇದು 'ಬೆಂಗಳೂರು ಪ್ರೌಢಶಾಲೆ'ಯಾಗಿತ್ತು. ನಂತರ 'ಸೆಂಟ್ರಲ್ ಹೈಸ್ಕೂಲ್' ಆಯಿತು.

ಬ್ರಿಟಿಷ್ ಶಿಕ್ಷಣ ತಜ್ಞರೆವರೆಂಡ್ ಜಾನ್ ಗ್ಯಾರೆಟ್ ಸಂಸ್ಥೆಯ ಸ್ಥಾಪಕ ಪ್ರಾಚಾರ್ಯರು. 1860ರಲ್ಲಿ ಬಿ. ಎಲ್.ರೈಸ್, ಪ್ರಾಚಾರ್ಯ ರಾದರು. ಅದೇ ವರ್ಷದಲ್ಲೇ ಐತಿಹಾಸಿಕ ಸೆಂಟ್ರಲ್ ಬ್ಲಾಕ್ ಗಡಿಯಾರ ಗೋಪುರದ ಕಟ್ಟಡ ನಿರ್ಮಾಣವಾಗಿದ್ದು. 1875ರಲ್ಲಿದ್ದ ಹೈಸ್ಕೂಲ್ ತದನಂತರ 'ಸೆಂಟ್ರಲ್ ಕಾಲೇಜು' ಆಯಿತು.

ಡಿಸೆಂಬರ್ 11 1958ರಂದು ಸೆಂಟ್ರಲ್ ಕಾಲೇಜಿನಲ್ಲಿ ನಡೆದ ಶತಮಾನೋತ್ಸವ ಸಮಾರಂಭದಲ್ಲಿ ಕಾಲೇಜಿನ ಹಳೆಯ ವಿದ್ಯಾರ್ಥಿ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಸಿ.ರಾಜಗೋ ಪಾಲಾಚಾರಿ ಮೈಸೂರಿನ ಮಹಾರಾಜ ಜಯಚಾಮರಾಜೇಂದ್ರ ಒಡೆಯರ್ ಸರ್ ಎಂ.ವಿಶ್ವೇಶ್ವರಯ್ಯ ಎಸ್.ನಿಜಲಿಂಗಪ್ಪ ಮತ್ತಿತರರು ಭಾಗವಹಿಸಿದ್ದರು.

ಆರಂಭದಲ್ಲಿ ಮದ್ರಾಸ್ ವಿಶ್ವವಿದ್ಯಾಲಯದ ತೆಕ್ಕೆಯಲ್ಲಿತ್ತು. ಆಗ ಕಾಲೇಜಿನಲ್ಲಿ ಕೇವಲ 43 ವಿದ್ಯಾರ್ಥಿಗಳಿದ್ದರು. 1916ರಲ್ಲಿ, ಸರ್ ಎಂ.ವಿಶ್ವೇಶ್ವರಯ್ಯ ಮತ್ತು ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ದೂರದೃಷ್ಟಿಯಿಂದಾಗಿ, ಮೈಸೂರು ವಿಶ್ವವಿದ್ಯಾಲಯ ಸ್ಥಾಪನೆಯಾಯಿತು. ಸೆಂಟ್ರಲ್ ಕಾಲೇಜು, ಮೈಸೂರು ವಿವಿ ವ್ಯಾಪ್ತಿಗೆ ಸೇರಿತು. ಮೈಸೂರು ವಿವಿಯಲ್ಲಿ ಮಹಾರಾಜ ಕಾಲೇಜು 'ಕಲಾ' ಕಾಲೇಜಾದರೆ, ಬೆಂಗಳೂರಿನ ಸೆಂಟ್ರಲ್ ಕಾಲೇಜು 'ವಿಜ್ಞಾನ ಕ್ಯಾಂಪಸ್' ಎಂದೇ ಪ್ರಸಿದ್ಧವಾಯಿತು.

ಸೆಂಟ್ರಲ್ ಕಾಲೇಜು ಆರಂಭವಾದಾಗಿನಿಂದ ಸುಮಾರು ನಲವತ್ತರ ದಶಕದವರೆಗೆ ಬ್ರಿಟಿಷ್ ಶಿಕ್ಷಣ ತಜ್ಞರಾದ ಚಾರ್ಲ್ಸ್ ವಾಲ್ಟರ್ಸ್ , ಜಾನ್ ಕುಕ್, ಜೆ.ಜಿ.ಟೈಟ್, ಇ.ಪಿ. ಮೆಟ್ಕಾಲ್ಫ್, ಎಫ್.ಆರ್. ಸೆಲ್, ಮೆಕಾಲ್ವೈನ್,ಮ್ಯಾಕಿಂತೋಷ್ನಂತಹ ಅನೇಕ ದಿಗ್ಗಜರು ಪ್ರಾಂಶುಪಾಲರಾಗಿದ್ದರು. 1942ರಲ್ಲಿ ಎ.ಸುಬ್ಬರಾವ್ ಪ್ರಾಚಾರ್ಯರಾಗಿ ನೇಮಕವಾದರು. ಇವರು ಕಾಲೇಜಿನ ಮೊದಲ ಭಾರತೀಯ ಪ್ರಾಚಾರ್ಯ.

ಹೆಮ್ಮೆಯ ಗುರುಗಳು, ವಿಧೇಯ ವಿದ್ಯಾರ್ಥಿಗಳು..

ಭಾರತ ರತ್ನ ಪ್ರಶಸ್ತಿ ಪುರಸ್ಕೃತರಾದ ಸಿ. ರಾಜಗೋಪಾಲಚಾರಿ, ಸರ್ ಎಂ. ವಿಶ್ವೇಶರಯ್ಯ ಮತ್ತು ಸಿ.ಎನ್.ಆರ್.ರಾವ್,ಮಾಜಿ ಮುಖ್ಯಮಂತ್ರಿಗಳಾದ ಎಸ್. ನಿಜಲಿಂಗಪ್ಪ ಮತ್ತು ಡಿ.ದೇವರಾಜ ಅರಸು, ಮೈಸೂರಿನಮಾಜಿ ದಿವಾನ್ ಸರ್ ಮಿರ್ಜಾ ಇಸ್ಮಾಯಿಲ್, ನ್ಯಾಯಾಂಗ ವ್ಯವಸ್ಥೆಯಲ್ಲಿ ಹೆಸರುಮಾಡಿದ ಎಂ.ಎನ್. ವೆಂಕಟಾಚಲಯ್ಯ, ನಿಟ್ಟೂರು ಶ್ರೀನಿವಾಸ ರಾವ್, ಸಂತೋಷ್ ಹೆಗ್ಡೆ ಇಲ್ಲಿನ ಪ್ರತಿಭೆಗಳು.

ಜ್ಞಾನಪೀಠ ಪುರಸ್ಕೃತಮಾಸ್ತಿ ವೆಂಕಟೇಶ ಅಯ್ಯಂಗಾರ್, ಸಿದ್ದಗಂಗಾಮಠದ ಮಠಾಧೀಶರಾಗಿದ್ದ ಶಿವಕುಮಾರ ಸ್ವಾಮೀಜಿ, ಕಥಕ್ ನೃತ್ಯಗಾರ್ತಿ ಮಾಯಾರಾವ್, ವೈಣಿಕ ಎಲ್. ರಾಜಾರಾವ್, ಚಲನಚಿತ್ರ ಸಾಹಿತಿ ಆರ್.ಎನ್. ಜಯಗೋಪಾಲ್, ಸರೋದ್ ವಾದಕ ರಾಜೀವ್ ತಾರಾನಾಥ್, ಶಿಕ್ಷಣ ತಜ್ಞ ಎಚ್. ನರಸಿಂಹಯ್ಯ, ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್. ದೊರೆಸ್ವಾಮಿ, ಕ್ರಿಕೆಟಿಗರಾದ ಜಿ.ಆರ್. ಜಗನ್ನಾಥ್, ವೈ.ವಿ.ಪಟೇಲ್ ಇಲ್ಲಿಯೇ ಕಲಿತಿದ್ದು.

ರಂಗಕರ್ಮಿ ಪ್ರಸನ್ನ, ಕವಿಗಳಾದ ಎಚ್.ಎಸ್. ವೆಂಕಟೇಶಮೂರ್ತಿ , ದೊಡ್ಡರಂಗೇಗೌಡ, ಎಸ್.ಜಿ.ಸಿದ್ಧರಾಮಯ್ಯ, ಶಿಕ್ಷಣ ತಜ್ಞ ಚಿ.ನಾ. ಮಂಗಳಾ ಸೇರಿದಂತೆ ವಿವಿಧ ಕ್ಷೇ ತ್ರಗಳಲ್ಲಿ ಖ್ಯಾತನಾಮರಾಗಿರುವ ಸಾವಿರಾರು ಮೇಧಾವಿಗಳು ಪದವಿ ಪಡೆದದ್ದು ಇದೇ ಕಾಲೇಜಿನಿಂದ.

ಇಂಥ ಘಟಾನುಘಟಿ ಸಾಧಕರಿಗೆ ಪಾಠ ಹೇಳಿದವರೇನೂ ಕಡಿಮೆ ಇಲ್ಲ. ಕುವೆಂಪು, ಎ.ಆರ್. ಕೃಷ್ಣಶಾಸ್ತ್ರಿ , ಬಿ.ಎಂ.ಶ್ರೀಕಂಠಯ್ಯ, ಟಿ.ಎಸ್. ವೆಂಕಣ್ಣಯ್ಯ, ಜಿ.ಪಿ. ರಾಜರತ್ನಂ , ವಿ.ಸೀತಾರಾಮಯ್ಯ, ತೀ.ನಂ.ಶ್ರೀಕಂಠಯ್ಯ, ಎ. ಎನ್.ಮೂರ್ತಿರಾವ್, ಎಲ್.ಎಸ್.ಶೇಷಗಿರಿರಾವ್, ಎಸ್.ವಿ.ರಂಗಣ್ಣ, ರಂ.ಶ್ರೀ.ಮುಗಳಿ, ಜಿ. ಎಸ್.ಶಿವರುದ್ರಪ್ಪ, ಎಂ.ಚಿದಾನಂ ದಮೂರ್ತಿ, ಚಂದ್ರಶೇಖರ ಕಂಬಾರ, ನಿಸಾರ್ ಅಹಮದ್, ಪಿ.ಲಂಕೇಶ್, ಕಿ.ರಂ.ನಾಗರಾಜ್, ಹಂ.ಪ. ನಾಗರಾಜಯ್ಯ,ದೇ .ಜವರೇಗೌಡ, ಎನ್. ಎಸ್.ಲಕ್ಷ್ಮೀ ನಾರಾಯಣ ಭಟ್ಟ, ಬರಗೂರು ರಾಮಚಂದ್ರಪ್ಪ, ಕೆ.ಮರುಳಸಿದ್ದಪ್ಪ ಸೇರಿದಂ ಹಲವರು ಸೆಂಟ್ರಲ್ ಕಾಲೇಜಿನಲ್ಲಿ ಪಾಠಮಾಡಿದ್ದಾರೆ.

ಸ್ವಾತಂತ್ರ್ಯ ಹೋರಾಟಗಾರ ಸಿ.ರಾಜಗೋಪಾಲಚಾರಿ ಅವರು ಪಾಠಕೇಳುತ್ತಿದ್ದ ತರಗತಿ ಈಗಿನ 'ರಾಜಾಜಿ ಹಾಲ್'ರಾಮನ್, ರಾಜಾಜಿ ಹಾಲ್...

ಭಾರತ ರತ್ನ ಸರ್ ಸಿ.ವಿ.ರಾಮನ್ ನೊಬೆಲ್ ಪುರಸ್ಕಾರ ಪಡೆಯುವುದಕ್ಕೆ ಎರಡು ವರ್ಷ ಮುಂಚೆ (ಮಾ.16, 1928) ಸೆಂಟ್ರಲ್ ಕಾಲೇಜಿನ ಕೊಠಡಿಯೊಂದರಲ್ಲಿ 'ರಾಮನ್ ಎಫೆಕ್ಟ್'ನ ಉಪನ್ಯಾಸ ನೀಡಿದ್ದರು. 1930ರಲ್ಲಿ ಅವರಿಗೆ ಭೌತಶಾಸ್ತ್ರದ ಈ ಸಂಶೋಧನೆಗೆ ನೊಬೆಲ್ ಪುರಸ್ಕಾರ ಲಭಿಸಿತು. ಆ ನೆನಪಿಗಾಗಿ ಉಪನ್ಯಾಸ ನೀಡಿದ ಕೊಠಡಿಗೆ 'ರಾಮನ್ ಹಾಲ್' ಎಂದು ಹೆಸರಿಡಲಾಗಿದೆ. ಇವತ್ತಿಗೂ ಆ ಸಭಾಂಗಣದಲ್ಲೇ ವಿದ್ಯಾರ್ಥಿಗಳಿಗೆ ಭೌತಶಾಸ್ತ್ರ ಬೋಧಿಸಲಾಗುತ್ತಿದೆ.

ಸ್ವಾತಂತ್ರ್ಯ ಹೋರಾಟಗಾರ ಸಿ. ರಾಜಗೋಪಾಲಾಚಾರಿ ಪಾಠ ಕೇಳುತ್ತಿದ್ದ ತರಗತಿಯನ್ನು ನವೀ ಕರಣಗೊಳಿಸಿ 'ರಾಜಾಜಿ ಹಾಲ್'ಮಾಡಲಾಗಿದೆ. ಮುಂದೆ ಅದು 'ಹಾಲ್ ಆಫ್ ಫೇಮ್' ಎಂಬ ಹೆಸರಿನ ತಾಣವಾಗಿ ರೂಪಿಸಲುಯೋ ಜನೆ ಸಿದ್ಧವಾಗುತ್ತಿದೆ.

ಸಾಹಿತ್ಯ, ರಂಗಭೂಮಿ, ಚಳವಳಿ...

ಸೆಂಟ್ರಲ್ ಕಾಲೇಜು, ಶಿಕ್ಷಣವಲ್ಲದೆ ಸಾಹಿತ್ಯ, ರಂಗಭೂಮಿ ಸೇರಿದಂತೆ ವಿವಿಧ ಸಾಹಿತ್ಯ ಚಟುವಟಿಕೆ ಹಾಗೂ ಚಳವಳಿಗಳ ನೆಲೆಯಾಗಿತ್ತು. ಸಾಹಿತ್ಯ ಚಟುವಟಿಕೆಗಳಿಗ್ಗಾಗಿಯೇ ಎ.ಆರ್. ಕೃಷ್ಣಶಾಸ್ತ್ರಿಯವರ ನೇತೃತ್ವದಲ್ಲಿ 1918ರಲ್ಲಿ 'ಸೆಂಟ್ರಲ್ ಕಾಲೇಜು ಕರ್ನಾ ಟಕ ಸಂಘ' ಪ್ರಾರಂಭವಾಯಿತು. ಸಂಘದ ಮೊದಲ ಅಧ್ಯಕ್ಷರು ಪ್ರೊ. ವೆಂಕಟನಾರಾಯಣಪ್ಪ, ಬಳಿಕ ಜಿ.ಪಿ.ರಾಜರತ್ನಂ ಆದರು.

ಸ್ವಾತಂತ್ರ್ಯ ಚಳವಳಿ, ಕರ್ನಾಟಕ ಏಕೀಕರಣದಹೋರಾಟ ಕಾವೇರಲು ಸೆಂಟ್ರಲ್ ಕಾಲೇಜಿನ ವಿದ್ಯಾರ್ಥಿಗಳ ಪಾತ್ರ ಹಿರಿದು. ಗೋಕಾಕ್ ಚಳವಳಿಯ ಪೂರಕ ಹೋರಾಟಗಳು ನಡೆದಿದ್ದು ಇದೇ ಕಾಲೇಜಿನಲ್ಲಿ. ಇದು ಸಾಂಸ್ಕೃತಿಕ ಚಟುವಟಿಕೆಗಳ ತಾಣವಾಗಿತ್ತು ಎಂದು ಹಳೇ ವಿದ್ಯಾರ್ಥಿಗಳು ನೆನಪಿಸಿಕೊಳ್ಳುತ್ತಾರೆ.

1958ರಲ್ಲಿ ಸೆಂಟ್ರಲ್ ಕಾಲೇಜಿನ ಸಮಾರಂಭವೊಂದರಲ್ಲಿ ರಾಜಗೋ ಪಾಲಚಾರಿ ಮತ್ತು ಸರ್ ಎಂ.ವಿಶ್ವೇ ಶ್ವರಯ್ಯ ಭಾಗವಹಿಸಿದ್ದರು. ಸೆಂಟ್ರಲ್ ಕಾಲೇಜು ವಿಜ್ಞಾನ ಕಾಲೇಜೆಂದು ಗುರುತಿಸಿಕೊಂಡರೂ, ಜಿ.ಪಿ.ರಾಜರತ್ನಂ, ಜಿ. ಎಸ್.ಶಿವರುದ್ರಪ್ಪನವರಂಥ ಸಾಹಿತ್ಯದ ಮೇರು ಪರ್ವತಗಳಿಂದ ಕನ್ನಡ ವಿಭಾಗದ ಬೇರುಗಳು ಗಟ್ಟಿಯಾದವು.

'ಜಿ.ಪಿ.ರಾಜರತ್ನಂ ನಿವೃತ್ತಿಯ ನಂತರವೂ ವೇತನವಿಲ್ಲದೇ ಎರಡು ವರ್ಷ ಪಾಠಮಾಡಿದ್ದರು. ಕರ್ನಾಟಕ ಸಂಘ ಬಹಳ ಕ್ರಿಯಾಶೀಲವಾಗಿತ್ತು. ಕ.ವೆಂ.ರಾಜಗೋಪಾಲ್ ಅವರು 'ಅಶ್ವತ್ಥಾಮನ್' ನಾಟಕವನ್ನು ಮಾಡಿಸಿದ್ದರು. ರಾಜರತ್ನಂ ಅವರು ನಾನುಮಾಡಿದ ಅಶ್ವತ್ಥಾಮನ ಪಾತ್ರವನ್ನು ಮೆಚ್ಚಿದ್ದರು'ಎಂದು ಸಾಹಿತಿ ಪ್ರೊ.ಸಿ.ವೀರಣ್ಣ ನೆನಪಿಸಿಕೊಂಡರು.

ಸಾಹಿತಿ ಪ್ರೊ ಎಸ್.ಜಿ. ಸಿದ್ದರಾಮಯ್ಯ, 'ಪ್ರಗತಿಪರ ವಿದ್ಯಾರ್ಥಿಗಳ ಗುಂಪುಮಾಡಿಕೊಂಡು, ಸಮಕಾಲೀನ ಸಾಹಿತ್ಯ ವಿಚಾರಗಳ ಬಗ್ಗೆ ಚರ್ಚಿಸುತ್ತಿದ್ದೆವು. ಓದಿನ ಅಭಿರುಚಿ ಹೆಚ್ಚಾಗಿದ್ದು ಈ ಗುಂಪಿನಿಂದ. ಇವತ್ತಿನ ನನ್ನಂಥ ಅನೇಕರ ಬೆಳವಣಿಗೆಗೆ, ಕಾಲೇಜಿನಲ್ಲಿದ್ದ ಸಾಹಿತ್ಯದ ವಾತಾವರಣ, ಜಿಎಸ್ಎಸ್ ಅವರಂಥವರ ಮಾರ್ಗದರ್ಶನ ಕಾರಣ' ಎಂದು ನೆನಪಿಸಿಕೊಳ್ಳುತ್ತಾರೆ.

ಸೆಂಟ್ರಲ್ ಕರ್ನಾಟಕ ಸಂಘ ಬಹಳ ಕ್ರಿಯಾಶೀಲವಾಗಿತ್ತು. ಜಿ.ಎಸ್.ಶಿವರುದ್ರಪ್ಪನವರು ಕನ್ನಡ ಸಾಹಿತ್ಯ ಕುರಿತು ದೊಡ್ಡ ವಿಚಾರ ಸಂಕಿರಣ ಏರ್ಪಡಿಸಿದ್ದರು. ಅದರಲ್ಲಿ ನವೋದಯ ಮತ್ತು ನವ್ಯ ಸಾಹಿತಿಗಳನ್ನು ಮುಖಾಮುಖಿಯಾಗಿಸಿದ್ದರು. ಒಂದು ಕಡೆ ಲಂಕೇಶ್, ಇನ್ನೊಂದು ಕಡೆ ಶಿವರಾಮ ಕಾರಂತರು ವಿಚಾರ ಮಂಡಿಸಿದ್ದರು ಎನ್ನುವುದು ರಂಗಕರ್ಮಿ ಪ್ರಸನ್ನ ಅವರ ಸ್ಮೃತಿಪಟಲದಲ್ಲಿದೆ. ಆ ಕಾಲದಲ್ಲಿ ಓದಿದ ಸೆಂಟ್ರಲ್ ಕಾಲೇಜಿನಯಾವುದೇ ವಿದ್ಯಾರ್ಥಿ ಯನ್ನು ಮಾತನಾಡಿಸಿದರೂ ಇಂಥ ನೂರಾರು ನೆನಪುಗಳನ್ನು ಮೊಗೆದು ಹರವಿಕೊಂಡು, ಸಂಭ್ರಮಿಸುತ್ತಾರೆ.

'ಸೆಂಟ್ರಲ್' ಕ್ರೀಡೆಗಳು

ಶಿಕ್ಷಣ, ಸಾಹಿತ್ಯ, ಸಂಸ್ಕೃತಿ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲೂ ಸೆಂಟ್ರಲ್ ಕಾಲೇಜಿನ ಮುಡಿಯಲ್ಲಿ ಹಲವು ಗರಿಗಳಿವೆ. 1935, ಸೆಂಟ್ರಲ್ ಕಾಲೇಜಿನ ವಜ್ರ ಮಹೋತ್ಸವ ವರ್ಷ. ಇದರ ನೆನಪಿಗಾಗಿ ಕಾಲೇ ಜಿನಲ್ಲಿ ಕ್ರೀಡಾ ಮೈದಾನ ಉದ್ಘಾಟನೆಗೊಂಡಿತು. ಇ.ಎ.ಎಸ್. ಪ್ರಸನ್ನ, ಜಿ.ಆರ್.ವಿಶ್ವನಾಥ್ ಮತ್ತು ಮನ್ಸೂರ್ ಅಲಿಖಾನ್ ಪಟೌಡಿ ಸೇರಿದಂತೆ ಹಲವು ಖ್ಯಾತ ಕ್ರಿಕೆಟಿಗರು ಈ ಮೈದಾನದಲ್ಲಿ ಫೋರು, ಸಿಕ್ಸರ್ ಬಾರಿಸಿದ್ದಾರೆ. ಗ್ಯಾರಿ ಸೋಬರ್ಸ್ ಸೇರಿದಂತೆ ಹಲವು ವಿದೇಶಿ ಕ್ರಿಕೆಟಿಗರು ಆಹ್ವಾನಿತ ಪಂದ್ಯಗಳನ್ನಾಡಿದ್ದಾರೆ. ಸೆಂಟ್ರಲ್ ಮೈದಾನ 50ಕ್ಕೂ ಹೆಚ್ಚು ಪ್ರಥಮ ದರ್ಜೆ ಕ್ರಿಕೆಟ್ ಪಂದ್ಯಗಳಿಗೆ ಸಾಕ್ಷಿಯಾಗಿದೆ. ಹಾಕಿ, ಬ್ಯಾಡ್ಮಿಂಟನ್, ಈಜು, ಅಥ್ಲೆಟಿಕ್ಸ್ ಎಲ್ಲದರಲ್ಲೂ ಸೆಂಟ್ರಲ್ ಕಾಲೇಜು ವಿದ್ಯಾರ್ಥಿಗಳೇ ಚಾಂಪಿಯನ್ ಗಳಾಗುತ್ತಿದ್ದರು.

'ನಾನು 1958–60ರ ಅವಧಿಯಲ್ಲಿ ಸೆಂಟ್ರಲ್ ಕಾಲೇಜಿನ ಹಾಕಿ ತಂಡದ ಕ್ಯಾಪ್ಟನ್ ಆಗಿದ್ದೆ' ಎಂದು ಸುಪ್ರೀಂ ಕೋರ್ಟ್ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ನೆನಪಿನ ಬುತ್ತಿ ಬಿಚ್ಚಿಡುತ್ತಾರೆ.

ರಾಷ್ಟ್ರಪತಿ ಬಾಬು ರಾಜೇಂದ್ರಪ್ರಸಾದ್ ಅವರು ಮೈಸೂರು ರಾಜ್ಯವೆಂದು ಘೋಷಣೆಮಾಡಿದ್ದು ಇದೇ ಕ್ರೀಡಾಂಗಣದಲ್ಲಿ. ಹಾಗಾಗಿ ಇದು ಸೆಂಟ್ರಲ್ ಕಾಲೇಜಿನಷ್ಟೇ, ನಾಡಿನ ಹೆಗ್ಗುರುತುಗಳ ಐತಿಹಾಸಿಕ ತಾಣವೂ ಹೌದು ಎಂದು ನೆನಪಿಸಿಕೊಳ್ಳುತ್ತಾರೆ ಹಳೆಯ ವಿದ್ಯಾರ್ಥಿಗಳು.

ವಿಶ್ವವಿದ್ಯಾಲಯದ ನಂತರ..

1964ರಲ್ಲಿ ಬೆಂಗಳೂರು ವಿಶ್ವವಿದ್ಯಾಲಯ ರಚನೆಯಾದ ನಂತರ ಸೆಂಟ್ರಲ್ ಕಾಲೇಜಿನಲ್ಲೇ ವಿಶ್ವವಿದ್ಯಾಲಯ ನಡೆಯುತ್ತಿತ್ತು. 1972ರಲ್ಲಿ ಜ್ಞಾನಭಾರತಿ ಕ್ಯಾಂಪಸ್ ಆರಂಭದ ಮೇಲೆ, ಇಲ್ಲಿನ ಬಹುತೇಕ ವಿಭಾಗಗಳು ಅಲ್ಲಿಗೆ ಸ್ಥಳಾಂತರಗೊಂಡವು. ಸೆಂಟ್ರಲ್ ಕಾಲೇಜು 'ಸಿಟಿ ಕ್ಯಾಂಪಸ್' ಆಯಿತು. 2017ರಿಂದ ಬೆಂಗಳೂರು ನಗರ ವಿಶ್ವವಿದ್ಯಾಲಯವಾಗಿ ರೂಪಾಂತರಗೊಂಡಿದೆ.

ನೂರೈ ವತ್ತರ ಸಂಭ್ರಮದಲ್ಲಿರುವ ಸೆಂಟ್ರಲ್ ಕಾಲೇಜು 'ಇತಿಹಾಸ ಮತ್ತು ಆಧುನಿಕತೆ' ಎರಡರ ಸಮ್ಮಿಶ್ರಣದೊಂದಿಗೆ ಹಳೇ ವೈಭವವನ್ನು ಪಡೆದುಕೊಳ್ಳುವತ್ತ ಹೆಜ್ಜೆ ಹಾಕಿದೆ.

ಈಗ ಜ್ಞಾನಜ್ಯೋತಿ

2017–18ರಲ್ಲಿ ಬೆಂಗಳೂರು ವಿಶ್ವವಿದ್ಯಾಲಯಮೂರು ಭಾಗವಾದ ನಂತರ, ಬೆಂಗಳೂರು ನಗರ ವಿಶ್ವವಿದ್ಯಾಲಯ ಹುಟ್ಟಿಕೊಂಡಿದೆ. ಸೆಂಟ್ರಲ್ ಕಾಲೇಜು, ಈಗ 'ಜ್ಞಾನ ಜ್ಯೋತಿ' ಹೆಸರಿನ ಬೆಂಗಳೂರು ನಗರ ವಿಶ್ವವಿದ್ಯಾಲಯದ ಪ್ರಧಾನ ಕಚೇರಿಯಾಗಿದೆ.

'ಕುವೆಂಪು ಅವರ ವಿಶ್ವಮಾನವ ಆಶಯದೊಂದಿಗೆ ಸಾಗುತ್ತಿರುವ ವಿಶ್ವವಿದ್ಯಾಲಯ, ಕುವೆಂಪು ಅವರ ಆಗು ನೀ ಅನಿಕೇತನ ವಿಶ್ವವಿದ್ಯಾಲಯದ ಧ್ಯೇಯವಾಕ್ಯವಾಗಿಸಿಕೊಂಡಿದೆ' ಎಂದು ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಲಿಂಗರಾಜ ಗಾಂಧಿ ಹೇಳುತ್ತಾರೆ.

ಕ್ಯಾಂಪಸ್ನಲ್ಲಿರುವ ಕಟ್ಟಡಗಳನ್ನು 155 ಕೋಟಿ ವೆಚ್ಚದಲ್ಲಿ ನವೀಕರಣಗೊಳಿಸಲಾಗಿದೆ. ಪಾರಂಪರಿಕ ವಾಸ್ತುಶಿಲ್ಪವನ್ನು ಉಳಿಸಿಕೊಂಡು ಕಾಲೇ ಜಿಗೆ ಹೊಸ ರೂಪ ಕೊಡಲಾಗಿದೆ. ಕಾಲೇಜು ಅವರಣದಲ್ಲಿ ಹಸುರೀಕರಣ, ಇಂಗು ಗುಂಡಿಗಳ ರಚನೆಗಳಿವೆ. ಪರಿಸರ ಸ್ನೇಹಿ ಕ್ಯಾಂಪಸ್ ಆಗಿದೆ. ಏಳು ಅಂತಸ್ತಿನ ಶೈಕ್ಷಣಿಕ ಸಂಕೀರ್ಣ, ಸುಸಜ್ಜಿತ ಕ್ರೀಡಾ ಸಂಕೀರ್ಣ , ಒಲಿಂಪಿಕ್ ದರ್ಜೆಯ ಈಜುಕೊಳ ಸ್ಥಾಪಿಸಲಾಗಿದೆ. ಹೊಸ ಕೋರ್ಸ್ಗಳನ್ನು ಪರಿಚಯಿಸಲಾಗಿದೆ. ಕಾಲೇಜಿಗೆ 150 ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ವರ್ಷಪೂರ್ತಿ ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎನ್ನುತ್ತಾರೆ ಅವರು.





## ಬಣ ಬಡಿದಾಟ ಸರಿಪಡಿಸಿಕೊಳ್ಳಿ

**ಕಡೂರು:** ಶಾಸಕ ಆನಂದ್ ಅವರ ಬಣ ಯಾವುದಾದರೂ ಇರಲಿ ಅದನ್ನು ನಿಮಗೆ ತಿಳಿಸುವ ಅವಶ್ಯಕತೆ ಇಲ್ಲ. ತಮ್ಮ ಪಕ್ಷದಲ್ಲಿ ಇರುವ ಬಣ ಬಡಿದಾಟ ಸರಿಮಾಡಿಕೊಳ್ಳಿ ಎಂದು ಬಿಜೆಪಿ ಮುಖಂಡ ಭರತ್ ಕೆಂಪರಾಜು ಅವರು ಪತ್ರಿಕಾ ಹೇಳಿಕೆ ಮೂಲಕ ಕೇಳಿರುವ ಪ್ರಶ್ನೆಗಳಿಗೆ ಕಾಂಗ್ರೆಸ್ ವಕ್ತಾರ ಪ್ರಕಾಶ್ ನಾಯ್ಕ ಉತ್ತರಿಸಿದರು. ಪಟ್ಟಣದ ಕಾಂಗ್ರೆಸ್ ಕೇರಿಯಲ್ಲಿ ಪತಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೆ ಶಾಸಕರಾಗಿದ್ದ ಕೆ.ಎಂ.ಕೃಷ್ಣಮೂರ್ತಿ ಅವರು ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿ ಗೆದ್ದು ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿದ್ದಾರೆ. ಅವರಿಗೆ ಇಂದಿಗೂ ಕ್ಷೇತ್ರದ ಜನತೆ ಕೃತಜ್ಞರಾಗಿದ್ದರೆ. ಅವರ ಕುಟುಂಬದ ನೀವು ನಿಮ್ಮ ಅಸ್ತಿತ್ವ ಉಳಿಸಿಕೊಳ್ಳಲು ಹೆಣಗಾಡಿ ಎಲ್ಲಿಯೂ ಸಲ್ಲದೆ ಬಿಜೆಪಿಯ ಬಾವುಟ ಹಿಡಿದಿದ್ದೀರಿ. ನಿಮ್ಮಿಂದ ನಮ್ಮ ಶಾಸಕರು ರಾಜಕೀಯ ಪಾಠ ಕಲಿಯುವ ಅಗತ್ಯವಿಲ್ಲ ಎಂದರು. ಶಾಸಕರ ಆನಂದ್ ಅವರು ಮೊದಲಿನಿಂದ ಕಾಂಗ್ರೆಸ್ಸಿನ ಬಣದಲ್ಲಿ ಇದ್ದಾರೆ, ಅವರು ಎಲ್ಲಿ ಇದ್ದಾರೆ ಎಂಬುದರ ಬಗ್ಗೆ ತಮಗೆ ಸ್ಪಷ್ಟನೆ ನೀಡುವ ಅಗತ್ಯವಿಲ್ಲ. ತಮ್ಮಂತೆ ಹಣ ಮತ್ತು ಅಧಿಕಾರಕ್ಕಾಗಿ ದಿನಕ್ಕೊಂದು ಪಕ್ಷ ಬದಲಿಸಿಲ್ಲ. ಅವರಿಗೆ ನಿಮ್ಮಿಂದ ಪಕ್ಷ ನಿಷ್ಠೆಯ ಪಾಠ ಕಲಿಯುವ ಅಗತ್ಯವಿಲ್ಲ. ನಿಮ್ಮ ಪಕ್ಷದಲ್ಲಿರುವ ಬಣ ಬಡಿದಾಟವನ್ನು ರಾಜ್ಯದ ಜನ ದಿನವೂ ನೋಡುತ್ತಿದ್ದಾರೆ. ಸದ್ಯ ನೀವು ಯಾವ ಬಣದಲ್ಲಿ ಇದ್ದೀರಿ ಎಂಬುದನ್ನು ಸ್ಪಷ್ಟಪಡಿಸಿ ಎಂದರು. ಗೋಷ್ಠಿಯಲ್ಲಿ ಶ್ರೀನಿವಾಸ ನಾಯ್ಕ, ಸಂತೋಷ್ ಬಳ್ಳೇಕೆರೆ, ಪ್ರಮೋದ್ ಕನಕ, ಲಿಂಗರಾಜ, ಯರದಕೆರೆ ಲೋಹಿಯಾ, ತರುಣ್, ಸಚಿನ್, ನವೀನ್ ಮತ್ತು ಕೆಂಚಪ್ಪ ಇದ್ದರು.

## ಕುವೆಂಪು ವಿ.ವಿ.ಮುಚ್ಚುವ ದಿನ ದೂರವಿಲ್ಲ

**ಶಿವಮೊಗ್ಗ;** ಕುವೆಂಪು ವಿವಿಯು ಮುಚ್ಚುವ ದಿನಗಳು ದೂರವಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಡಿ.ಎಸ್.ಅರುಣ್ ಆತಂಕ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಕುವೆಂಪು ವಿವಿಯಲ್ಲಿ ಭ್ರಷ್ಟಾಚಾರ ಸೇರಿದಂತೆ ಅನೇಕ ಅಧ್ವಾನಗಳು ನಡೆಯ ತೊಡಗಿವೆ. ಈ ಬಗ್ಗೆ ಸರ್ಕಾರವಾಗಲೀ ಅಲ್ಲಿನ ಕುಲಪತಿಗಳಾಗಲಿ ಕಿಂಚಿತ್ತೂ ಯೋಚಿಸುತ್ತಿಲ್ಲ. ಹೀಗೆ ಮುಂದುವರೆದರೆ ಕುವೆಂಪು ವಿವಿ ಮುಚ್ಚುವ ದಿನಗಳು ಹತ್ತಿರ ಬರುತ್ತವೆ. ಅದಕ್ಕೂ ಮುಂಚೆ ಸರ್ಕಾರ ಈ ಬಗ್ಗೆ ಗಮನಹರಿಸಬೇಕು ಎಂದರು.ಇತ್ತೀಚೆಗೆ ಕುವೆಂಪು ವಿವಿಯಲ್ಲಿ ಘಟಿಕೋತ್ಸವ ಕಾರ್ಯಕ್ರಮ ನಡೆಯಿತು. ಅಂದು ಸಾವಿರಾರು ವಿದ್ಯಾರ್ಥಿಗಳಿಗೆ ಸಂಭ್ರಮದ ದಿನವಾಗಿತ್ತು, ರ್‍ಯಾಂಕ್ ಬಂದ ವರು ತಮ್ಮ ಪೋಷಕರ ಜೊತೆಗೆ ಬಂದಿದ್ದರು. ಇಂತಹ ಒಂದು ಸಂಭ್ರಮದ ಕಾರ್ಯಕ್ರಮವೊಂದು ಅಲ್ಲಿನ ಅವ್ಯವಸ್ಥೆಗಳಿಗೆ ಸಾಕ್ಷಿಯಾಯಿತು ಎಂದು ಬೇಸರ ವ್ಯಕ್ತಪಡಿಸಿದರು.ಈ ಎಲ್ಲಕ್ಕಿಂತ ಮುಖ್ಯವಾಗಿ ಈ ಸಮಾರಂಭಕ್ಕೆ ಉನ್ನತ ಶಿಕ್ಷಣ ಸಚಿವರು ಬರ ಬೇಕಿತ್ತು. ಇಲ್ಲಿನ ಸಮಸ್ಯೆಗಳ ಬಗ್ಗೆ ಆಲಿಸಬೇಕಿತ್ತು. ನಾವು ಕೂಡ ಅವರು ಬರುತ್ತಾರೆ ಎಂದುಕೊಂಡಿದ್ದೆವು. ಆದರೆ ಅವರು ಬರಲಿಲ್ಲ. ಕಳೆದ ವರ್ಷವೂ ಅವರು ಬಂದಿರಲಿಲ್ಲ. ಕುವೆಂಪು ವಿವಿ ಬಗ್ಗೆ ಯಾಕಿಷ್ಟು ತಾತ್ಸಾರ ಎಂದು ಅರ್ಥ ವಾಗುತ್ತಿಲ್ಲ. ರಾಜ್ಯಪಾಲರು ಕಾರ್ಯಕ್ರಮಕ್ಕೆ ಬರುತ್ತಾರೆ ಎಂಬ ಕಾರಣಕ್ಕೆ ಅವರು ಬರಲಿಲ್ಲ ಎಂಬ ಅನುಮಾನ ನಮಗಿದೆ. ಅವರು ಹೇಳಿದ ದಿನಾಂಕವನ್ನೇ ಗೊತ್ತುಪಡಿಸಲಾಗಿತ್ತು. ಆದರೂ ಕೂಡ ಬರಲಿಲ್ಲ ಎಂದರು.ಇದೇ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪಕ್ಷದವರೇ ಆದ ಹಿರಿಯ ಮುತ್ಸದ್ದಿ ರಾಜ ಕಾರಣಿ ಕಾಗೋಡು ತಿಮ್ಮಪ್ಪ ಅವರಿಗೆ ಗೌರವ ಡಾಕ್ಟರೇಟ್ ನೀಡಿದರು. ಇದಕ್ಕಾದರೂ ಅವರು ಬರಬಹುದಿತ್ತು. ಆದರೆ, ಬರಲಿಲ್ಲ. ಏನಾಗಿದೆ ಅವರಿಗೆ ಎಂದು ಗೊತ್ತಿಲ್ಲ ಎಂದರು.ಇನ್ನು ಅಲ್ಲಿನ ಸಾಫ್ಟ್‌ವೇರ್ ಹಗರಣ ದೊಡ್ಡದಿದೆ. ಸದ್ಯದರಲ್ಲೇ ಈ ಹಗರಣದ ಬಗ್ಗೆ ತನಿಖೆಯಾಗಲಿದೆ. 25 ಲಕ್ಷಕ್ಕೂ ಹೆಚ್ಚು ಮೊತ್ತದ ಹಗರಣ ಇದಾಗಿದೆ. ಕುವೆಂಪು ವಿವಿಯಲ್ಲಿ 500ಕ್ಕೂ ಹೆಚ್ಚು ನೌಕರರಿದ್ದಾರೆ. ವಿದ್ಯಾರ್ಥಿಗಳಿಂದ ಪಡೆದ ಶುಲ್ಕದಲ್ಲಿ ಅರೆಕಾಲಿಕ ಉದ್ಯೋಗಿಗಳಿಗೆ ವೇತನ ಬಳಸಿಕೊಳ್ಳುತ್ತಾರೆ ಎಂದರೆ ಕುವೆಂಪು ವಿವಿ ಸ್ಥಿತಿ ಎಲ್ಲಿಗೆ ಬಂದಿದೆ ಎಂದು ಅರ್ಥವಾಗುತ್ತದೆ ಎಂದರು.ರಾಜ್ಯ ಸರ್ಕಾರ ಈಗ ಮತ್ತೊಂದು ನಿರ್ಧಾರ ಕೈಗೊಂಡಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿವಿ ಸ್ಥಾಪಿಸಲು ಹೊರಟಿದೆ. ಈ ವಿವಿಗೆ ಮುಖ್ಯಮಂತ್ರಿಗಳು ಕುಲಾಧಿಪತಿಗಳಾಗಿರಬೇಕು ಎಂಬ ನಿರ್ಣಯ ಕೈಗೊಳ್ಳ ಲಾಗಿದೆ. ಇದು ಎಷ್ಟರಮಟ್ಟಿಗೆ ಸರಿಯೋ ಅರ್ಥವಾಗುತ್ತಿಲ್ಲ. ಬಹುಶಃ ರಾಜ್ಯಪಾ ಲರೇ ಕುಲಪತಿಗಳಾಗಬೇಕು ಎಂಬ ಈಗಿರುವ ನಿಯಮದಿಂದ ರಾಜ್ಯ ಸರ್ಕಾರ ಆತಂಕಗೊಂಡಂತೆ ಕಾಣುತ್ತದೆ ಎಂದರು.ಸಚಿವ ಮಧು ಬಂಗಾರಪ್ಪ ಅವರು ಸಂಸದರ ಬಗ್ಗೆ ಹಗುರವಾಗಿ ಮಾತನಾಡು ವುದನ್ನು ನಿಲ್ಲಿಸಬೇಕು ಎಂದು ಹೇಳಿದ ಅರುಣ್, ರಾಜ್ಯ ಹಾಗೂ ಜಿಲ್ಲೆಯ ಪಕ್ಷದ ಅಧ್ಯಕ್ಷರ ಆಯ್ಕೆಗೆ ಸಂಬಂಧಿಸಿದಂತೆ ಬಿಜೆಪಿಯಲ್ಲಿ ಒಂದು ಶಿಸ್ತು ಇದೆ. ಆ ಶಿಸ್ತಿನ ಪ್ರಕಾರವೇ ನಡೆಯುತ್ತದೆ. ಗೊಂದಲಗಳಿದ್ದರೆ ಹಿರಿಯರು ಅದನ್ನು ಸರಿ ಪಡಿಸುತ್ತಾರೆ ಎಂದರು.ಪತ್ರಿಕಾಗೋಷ್ಠಿಯಲ್ಲಿ ಶಾಸಕ ಎಸ್. ಎನ್. ಚನ್ನಬಸಪ್ಪ, ಮಾಲತೇಶ್, ಅಣ್ಣಪ್ಪ ಕೆ.ವಿ., ಚಂದ್ರಶೇಖರ್, ಇದ್ದರು.

# ಚೆಕ್ ಡ್ಯಾಂನಲ್ಲಿ ಅನುಮಾನಾಸ್ಪದವಾಗಿ ಮೃತಪಟ್ಟ ವ್ಯಕ್ತಿಯ ಸಾವಿನ ತನಿಖೆ ಕೈಗೊಳ್ಳಲು ಮನವಿ



**ಮೊಳಕಾಲ್ಮೂರು :** ತಾಲೂಕಿನ ಸಿದ್ದಯ್ಯನಕೋಟೆ ಬಳಿಯ ಚಿನ್ನಹಗರಿ ನದಿಯ ಚೆಕ್ ಡ್ಯಾಂನಲ್ಲಿ ಅನುಮಾನಾಸ್ಪದವಾಗಿ ಮೃತಪಟ್ಟ ವ್ಯಕ್ತಿಯೋರ್ವನ ಸಾವಿನ ಬಗ್ಗೆ ಶೀಘ್ರವಾಗಿ ತನಿಖೆ ಕೈಗೊಂಡು ತಪ್ಪಿತಸ್ಥರನ್ನು ಬಂಧಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಪಟ್ಟಣದ ಪೊಲೀಸ್ ಠಾಣೆಯ ಆವರಣದಲ್ಲಿ ದೂರುದಾರರರೊಂದಿಗೆ ಹಿರೇಕೆರೆಹಳ್ಳಿ ಗ್ರಾಮದ ದಸಂಸ ಸಮಿತಿಯ ಪದಾಧಿಕಾರಿಗಳು ಮನವಿ ಸಲ್ಲಿಸಿದ್ದಾರೆ.

ತಾಲೂಕಿನ ಹಿರೇಕೆರೆಹಳ್ಳಿ ಗ್ರಾಮದ ಅನುಮಾನಾಸ್ಪದವಾಗಿ ಮೃತ ಬಸವರಾಜ (40) ನು ತನ್ನ ಮಗಳ ಆರತಿ ಕಾರ್ಯಕ್ರಮಕ್ಕೆ ಆಹ್ವಾನಿಸಲು ಹೆಂಡತಿಯ ತವರೂರಾದ ತಾಲೂಕಿನ ಸಿದ್ದಯ್ಯನಕೋಟೆ ಗ್ರಾಮಕ್ಕೆ ತೆರಳಿದ್ದಾನೆ. ಮೃತ ವ್ಯಕ್ತಿ ಬಸವರಾಜನು ಸುಮಾರು ಸಂಜೆ 5 : 15 ರ ವೇಳೆಗೆ ಮೊಬೈಲ್ ನಲ್ಲಿ ಕರೆ ಮಾಡಿ ತನ್ನ ಹೆಂಡತಿಯಾದ ಶಿವರುದ್ರಮ್ಮನೊಂದಿಗೆ ಮಾತನಾಡಿದ ಕೆಲವೇ ಸಮಯದ ಸಂಜೆ 6 ಗಂಟೆ ವೇಳೆಗೆ ಹೆಂಡತಿಯ ತಮ್ಮನಾದ ತಿಪ್ಪೇಸ್ವಾಮಿ ಮೃತ ಬಸವರಾಜನು ಏಕಾಏಕಿ ಚಿನ್ನಹಗರಿ ನದಿಯ ಚೆಕ್ ಡ್ಯಾಂ ನಲ್ಲಿ ಮೃತಪಟ್ಟಿರುವ ಬಗ್ಗೆ ಮೃತನ ಹೆಂಡತಿ ಶಿವರುದ್ರಮ್ಮಗೆ ಮಾಹಿತಿ ನೀಡಿದ್ದಾರೆ. ಈ ಮಾಹಿತಿ ತಿಳಿಯುತ್ತಿದ್ದಂತೆಯೇ ಮೃತನ ಬಂಧುಗಳು ಹಾಗೂ ಇನ್ನಿತರರು ಘಟನಾ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ ಅನುಮಾನಸ್ಪದವಾಗಿರುವುದು ಕಂಡು ಬಂದಿದೆ. ಮೃತ ಬಸವರಾಜನಿಗೆ ಈಜು ಬರುತ್ತಿದ್ದು, ಕಡಿಮೆ ಕಾಲಾವಧಿಯಲ್ಲಿ ನೀರಿಗೆ ಬಿದ್ದು ಮೃತಪಟ್ಟಿದ್ದಾನೆಂದು ಬಿಂಬಿಸಿರುವುದು ಅನುಮಾನಕ್ಕೀಡಾಗಿದೆ. ಮೃತ ಬಸವರಾಜನು ಚೆಕ್ ಡ್ಯಾಂನ ನೀರಿಗೆ ಬಿದ್ದು ಸಾವಿಗೀಡಾದಾಗ ಮೃತನ ಬಳಿಯಿದ್ದ ಮೊಬೈಲ್, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್ ಹಾಗೂ ಪರ್ಸ್ ನೀರಿಗೆ ಹಾನಿಯಾಗದಂತೆ ಸಿದ್ದಯ್ಯನಕೋಟೆ ಗ್ರಾಮದ ಅಂಗಡಿಯೊಬ್ಬರಿಂದ ಹೆಂಡತಿಯ ತಮ್ಮ ತಿಪ್ಪೇಸ್ವಾಮಿಗೆ ನೀಡಿರುವುದು ಅನುಮಾನದ ಶಂಕೆ ವ್ಯಕ್ತವಾಗಿರುವುದು ಮೃತ ಬಸವರಾಜನನ್ನು ಯಾರೋ ದುಷ್ಕರ್ಮಿಗಳು ಕೊಲೆ ಮಾಡಿ ನೀರಿನಲ್ಲಿ ಬಿಸಾಡಲಾಗಿರಬಹುದೆಂದು ಸಂಶಯ ವ್ಯಕ್ತವಾಗಿದೆ. ಈ ಬಗ್ಗೆ ಮೊಳಕಾಲ್ಮೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದು, ಪೊಲೀಸ್ ವೃತ್ತ ನಿರೀಕ್ಷಕ ವಸಂತ ವಿ ಅಸೊದೆ, ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಜಿ .ಪಾಂಡುರಂಗ ಹಾಗೂ ಇನ್ನಿತರ ಪೊಲೀಸ್ ಸಿಬ್ಬಂದಿಗಳು ಗಂಭೀರವಾಗಿ ಪರಿಗಣಿಸಿ ಮೃತನ ಸಾವಿಗೆ ಕಾರಣಾದ ದುಷ್ಕರ್ಮಿಗಳನ್ನು ಪತ್ತೆ ಹಚ್ಚಿ ಅವರನ್ನುಬಂಧಿಸಿಕಠಿಣಶಿಕ್ಷೆಗೊಳಪಡಿಸಬೇಕೆಂದು ಆಗ್ರಹಿಸಿದರು.

ಪೊಲೀಸ್ ವೃತ್ತ ನಿರೀಕ್ಷಕ ವಸಂತ ವಿ ಅಸೋದೆ, ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಜಿ. ಪಾಂಡುರಂಗ ಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಗ್ರಾ.ಪಂ.ನ ಅಧ್ಯಕ್ಷ ವೀರನಗೌಡ, ಮೃತನ ಹೆಂಡತಿ ಶಿವರುದ್ರಮ್ಮ, ಸಹೋದರಾದ ನುಂಕಪ್ಪ, ಮಹೇಶ್, ದಸಂಸ ಗ್ರಾಮ ಸಮಿತಿಯ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರಾದ ಬನ್ನೀಮರದ ಬಸಪ್ಪ, ರುದ್ರಪ್ಪ, ,ತಿಪ್ಪೇಸ್ವಾಮಿ, ಉಮೇಶ್, ಸೊಪ್ಪಿನಜ್ಜನವರ ಭೀಮಣ್ಣ, ಭೈರಪ್ಪ, ಹೊನ್ನೂರಪ್ಪ, ಅಂಜೀನಪ್ಪ, ನಾಗವರ್ಮ, ಮಂಜಣ್ಣ, ಭೀಮಣ್ಣ, ಟೇಬಲ್ ನಾಗರಾಜ್, ಎಂ.ಮೂರ್ತಿ, ರಾಜಪ್ಪ, ಭೈರಜ್ಜ, ನುಂಕಪ್ಪ, ರಾಮು, ಶಿವಣ್ಣ, ಚಂದ್ರಣ್ಣ, ಗಣೇಶ್, ಹೊನ್ನೂರಸ್ವಾಮಿ, ಮೂರ್ತಿ, ಹಲಕುಂದೆಪ್ಪ ಹಾಗೂ ಹೆಚ್ಚಿನ ಗ್ರಾಮಸ್ಥರು ಭಾಗವಹಿಸಿದ್ದರು.

# ಆಕಸ್ಮಿಕ ಅಪಘಾತ–ಸಾವು ನಿಯಂತ್ರಿಸಲು ಸೂಚನೆ



**ಶಿವಮೊಗ್ಗ:** ಜಿಲ್ಲೆಯ ವಿವಿಧ ಜನನಿಬಿಢ ಸ್ಥಳಗಳಲ್ಲಿ ಆಗಾಗ್ಗೆ ಸಂಭವಿಸುತ್ತಿರುವ ವಾಹನ ಅಪಘಾತಗಳು, ಸಾವು–ನೋವುಗಳನ್ನು ನಿಯಂತ್ರಿಸಲು ಸಾರಿಗೆ, ಲೋಕೋಪಯೋಗಿ ಸೇರಿದಂತೆ ಸಂಬಂಧಿಸಿದ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ವಿಶೇಷ ಗಮನಹರಿಸುವಂತೆ ಸಂಸದ ಬಿ.ವೈ.ರಾಘವೇಂದ್ರ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸಾರಿಗೆ ಸುರಕ್ಷತಾ ಕ್ರಮಗಳ ಕುರಿತು ಏರ್ಪಡಿ ಸಲಾಗಿದ್ದ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ ಪದೇ ಪದೇ ಆಕಸ್ಮಿಕ ಅನಾಹುತಗಳು ಸಂಭವಿಸುವ ಸ್ಥಳಗಳನ್ನು ಆಯಾ ತಾಲೂಕುಗಳ ಪೊಲೀಸ್ ಠಾಣೆಗಳಿಂದ ಪಡೆದು, ಅದರ ನಿಯಂತ್ರಣಕ್ಕಾಗಿ ಕೈಗೊಳ್ಳಬಹುದಾದ ಸುರಕ್ಷತಾ ಕ್ರಮಗಳ ಕುರಿತು ಅಗತ್ಯವಿರುವ ಅನುದಾನ ಬಿಡುಗಡೆಗೊಳಿಸಲು ಕ್ರಿಯಾಯೋಜನೆಯನ್ನು ತಯಾರಿಸಿ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ ಅವರು, ಕೇಂದ್ರ ಸಾರಿಗೆ ಮತ್ತು ರಸ್ತೆ ಮಂತ್ರಾಲಯದಿಂದ ಅಗತ್ಯವಿರುವ ಅನುದಾನವನ್ನು ಬಿಡುಗಡೆಗೊಳಸಲು ಯತ್ನಿಸಲಾಗುವುದು ಎಂದರು.

ನಗರದ ಕೇಂದ್ರ ಸ್ಥಳದಿಂದ ವಿಮಾನ ನಿಲ್ದಾಣಕ್ಕೆ ಸಾರ್ವಜನಿಕ ಹಿತದೃಷ್ಟಿಯಿಂದ ಕೂಡಲೇ ಬಸ್‌ಸಂಪರ್ಕ ವ್ಯವಸ್ಥೆ ಕಲ್ಪಿಸಲು ಸಾರಿಗೆ ಇಲಾಖಾಧಿಕಾರಿಗಳು ತಕ್ಷಣದ ಕ್ರಮಗಳನ್ನು ಕೈಗೊಳ್ಳಬೇಕು. ಅಲ್ಲದೇ ನಗರದ ರೈಲ್ವೇ ನಿಲ್ದಾಣದ ಮುಂಭಾ ಗದಲ್ಲಿ ಎಲ್ಲೆಂದರಲ್ಲಿ ನಿಂತಿರುವ ಆಟೋಗಳಿಂದಾಗಿ ಸಾರ್ವಜನಿಕರಿಗೆ, ಪ್ರಯಾ ಣಿಕರಿಗೆ ಅನಗತ್ಯ ಕಿರಿಕಿರಿ, ಅಶಿಸ್ತು ಉಂಟಾಗುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ನಿರಂತರವಾಗಿ ಬರುತ್ತಲೇ ಇವೆ. ಆದ್ದರಿಂದ ಪಾವತಿ ಬಳಸುವ ಆಟೋ ಕೌಂಟರ್‌ಗಳನ್ನು ತೆರೆಯಬೇಕು. ಅದಕ್ಕಾಗಿ ಆಟೋ ಚಾಲಕರ ಸಂಘಟನೆಗಳ ಸಹಕಾರ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಿದ ಅವರು, ಈ ವ್ಯವಸ್ಥೆ ಅಧಿಕೃತವಾಗಿ ಜಾರಿಯಾಗುವವರೆಗೆ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸುವಂತೆ ಅವರು ಸಲಹೆ ನೀಡಿದರು.

ಶಿವಮೊಗ್ಗದಿಂದ ಶಿಕಾರಿಪುರಕ್ಕೆ ಮಾರ್ಗದಲ್ಲಿ ಬರುವ ಹಾರೋಗೊಪ್ಪ ಗ್ರಾಮದ ಸಮೀಪದಲ್ಲಿ ಭಾರೀ ವಾಹನ ಅನಾಹುತಗಳು ಸಂಭವಿಸುತ್ತಲೆ ಇರುತ್ತವೆ. ಅವುಗಳ ನಿಯಂತ್ರಣಕ್ಕಾಗಿ ಲೋಕೋಪಯೋಗಿ ಇಲಾಖಾಧಿಕಾರಿಗಳು ತ್ವರಿತ ಕ್ರಮಗಳನ್ನು ಕೈಗೊಳ್ಳಬೇಕು. ಅಲ್ಲದೇ ಕೆಲವು ರಾಷ್ಟ್ರೀಯ ಹೆದ್ದಾರಿಗಳ ನಿಗದಿತ ಪ್ರದೇಶಗಳಲ್ಲಿಯೂ ಅಪಘಾತಗಳು ಆಗುತ್ತಿರುವ ಮಾಹಿತಿ ಇದೆ. ಅವುಗಳನ್ನು ನಿಯಂತ್ರಿಸಲು ಕೂಡಲೇ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಶಿಕಾರಿಪುರ ತಾಲೂಕಿನ ಅಂಬಾರಗೊಪ್ಪ ಮತ್ತು ತಡಗಣಿ ಗ್ರಾಮಗಳಿಗೆ ಹೊಂದಿ ಕೊಂಡಂತಿರುವ ಮುಖ್ಯರಸ್ತೆಗಳೂ ಸಹ ಸಂಭವನೀಯ ಅಪಘಾತ ವಲಯ ಗಳೆಂದು ಪರಿಗಣಿಸಿ, ಸುರಕ್ಷತಾ ಕ್ರಮಗಳನ್ನು ಅನುಸರಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಶಾಸಕ ಡಿ.ಎಸ್.ಅರುಣ್, ಜಿಪಂ ಸಿಇಓ ಎನ್. ಹೇಮಂತ್, ಮಹಾನಗರಪಾಲಿಕೆ ಆಯುಕ್ತೆ ಕವಿತಾ ಯೋಗಪ್ಪನವರ್, ಲೋಕೋಪಯೋಗಿ ಇಲಾಖೆ ಅಭಿಯಂತರ ವಿಜಯ್‌ಕುಮಾರ್, ವಲಯ ಅರಣ್ಯಾಧಿಕಾರಿ ಶಿವಶಂ ಕರ್ ಮತ್ತಿತರರು ಉಪಸ್ಥಿತರಿದ್ದರು.

> ಆಲ್ಕೊಳ ವರ್ತುಲದಿಂದ ಗಾಡಿಕೊಪ್ಪದವರೆಗೆ ರಸ್ತೆ ಅತ್ಯಂತ ಕಿರಿಯದಾಗಿದ್ದು, ಅಪಘಾತಗಳು ಸಂಭವಿಸುತ್ತಿವೆ. ಆ ಪ್ರದೇಶದಲ್ಲಿನ ರಸ್ತೆಯನ್ನು ವಿಸ್ತರಿಸಲು ಕ್ರಮ ಕೈಗೊಳ್ಳಬೇಕು. ರಸ್ತೆಯ ಇಕ್ಕೆಲಗಳಲ್ಲಿರುವ ದುರ್ಬಲ ಹಾಗೂ ಅಪಾಯಕಾರಿ ಮರಗಳನ್ನು ತೆರವುಗೊಳಿಸಲು ಕೂಡಲೇ ಕ್ರಮ ಕೈಗೊಳ್ಳಬೇಕು.
> **–ಎಸ್.ಎನ್.ಚನ್ನಬಸಪ್ಪ**, ಶಾಸಕರು.

> ಈಗಾಗಲೇ ಕೆಲವು ಕಡೆ ರಸ್ತೆಗಳಲ್ಲಿ ಅಳವಡಿಸಿರುವ ಹಂಪ್‌ಗಳಿಗೆ ಬಣ್ಣ ಬಳಿ ಯದಿರುವುದರಿಂದ ಅಪಘಾತಗಳು ಸಂಭವಿಸುತ್ತಿವೆ. ಕೂಡಲೇ ಅವುಗಳಿಗೆ ಬಣ್ಣ ಬಳಿಯಿರಿ.
> **–ಆರಗ ಜ್ಞಾನೇಂದ್ರ**, ಮಾಜಿ ಸಚಿವರು.

# ವಿದ್ಯಾರ್ಥಿಗಳಲ್ಲಿ ಶಿಸ್ತು ಬೆಳೆಸುವ ಅಗತ್ಯವಿದೆ



**ಸಾಗರ :** ವಿದ್ಯಾರ್ಥಿಗಳಲ್ಲಿ ಶಿಸ್ತು, ವ್ಯಕ್ತಿತ್ವ, ಸಮಯ ಪ್ರಜ್ಞೆ ಮತ್ತು ನಾಯಕತ್ವ ಗುಣ ಬೆಳೆಸುವ ಅಗತ್ಯವಿದೆ. ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಳ್ಳುವುದು ಹೆಚ್ಚು ಸೂಕ್ತ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಪರಶುರಾಮಪ್ಪ ಈ. ತಿಳಿಸಿದರು.

ಇಲ್ಲಿನ ನಿರ್ಮಲ ಬಾಲಿಕಾ ಪ್ರೌಢಶಾಲೆಯಲ್ಲಿ ಸ್ಕೌಡ್ಸ್ ಮತ್ತು ಗೈಡ್ಸ್ ಜಿಲ್ಲಾ ಪುರಸ್ಕಾರ ಪರೀಕ್ಷಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು. ಕಲಿಕೆ ಸಂದರ್ಭದಲ್ಲಿ ಮಕ್ಕಳು ವಿಸ್ತಾರವಾಗಿ ಆಲೋಚಿಸಿ, ಸಿಗುವ ಎಲ್ಲ ವಿಷಯಗಳನ್ನು ಮನನ ಮಾಡಿಕೊಂಡು ಅದನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ನಾಲ್ಕು ಗೋಡೆ ನಡುವಿನ ಶಿಕ್ಷಣದ ಜೊತೆಗೆ ಬದುಕಿನ ಶಿಕ್ಷಣ ಕಲಿಯುವುದು ಅತ್ಯಗತ್ಯ. ಅಂಕದ ಜೊತೆಗೆ ವ್ಯಕ್ತಿತ್ವ ವಿಕಸನಕ್ಕೂ ಹೆಚ್ಚಿನ ಒತ್ತು ನೀಡಬೇಕು. ಮಕ್ಕಳು ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ಕ್ರಿಯಾಶೀಲವಾಗಿ ತೊಡಗಿಸಿಕೊಳ್ಳಬೇಕು ಎಂದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಆಯುಕ್ತೆ ಸರಸ್ವತಿ ನಾಗರಾಜ್, ತಾಲ್ಲೂಕಿನ ಪ್ರತಿಶಾಲೆಯಲ್ಲೂ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕ ತೆರೆಯುವ ಅಗತ್ಯವಿದೆ.

# ಪೇಮೆಂಟ್ ಸೀಟ್‌ನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಸ್ಸಿ/ಎಸ್ಟಿ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ನೀಡಲು ಸಿಎಂಗೆ ಮನವಿ



**ಚಿತ್ರದುರ್ಗ:** ಈ ದಿನದಿಂದಲೇ ಪೇಮೆಂಟ್ ಸೀಟ್‌ನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಸ್ಸಿ/ಎಸ್ಟಿ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ನೀಡಬೇಕೆಂದು ಮುಖ್ಯಮಂತ್ರಿಗಳಿಗೆ ಒತ್ತಾಯಿಸಿ ಅಂಬೇಡ್ಕರ್ ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಬಿ.ಪಿ.ತಿಪ್ಪೇಸ್ವಾಮಿ ನೇತೃತ್ವದಲ್ಲಿ ಬುಧವಾರ ಬೆಂಗಳೂರಿನ ಸಿಎಂ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ನೀಡಲಾಯಿತು.

ಮುಂಬರುವ ಕರ್ನಾಟಕ ರಾಜ್ಯ ಬಜೆಟ್‌ನಲ್ಲಿ ಎಸ್ಸಿ/ಎಸ್‌ಟಿ ವಿದ್ಯಾರ್ಥಿಗಳ ಅತಿ ಮುಖ್ಯ ಬೇಡಿಕೆಗಳನ್ನು ಪರಿಗಣಿಸಿ ಬಜೆಟ್‌ನಲ್ಲಿ ಸೇರಿಸಿ, ಅನುದಾನ ಮೀಸಲಿರಿಸಿ, ಮಕ್ಕಳ ಶೈಕ್ಷಣೀಕ ಅಭಿವೃದ್ಧಿಗೆ ಉಪಕರಿಸಬೇಕೆಂದು ಮನವಿ ಮಾಡಿದರು. ಅಲ್ಲದೇ ಎಸ್ಸಿ/ಎಸ್ಟಿ ವರ್ಗದ ವಿದ್ಯಾರ್ಥಿಗಳ ಪ್ರಮುಖ ಬೇಡಿಕೆಗಳಾದ ಪೇಮೆಂಟ್ ಸೀಟ್‌ನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಸ್ಸಿ /ಎಸ್ಟಿ ವಿದ್ಯಾರ್ಥಿಗಳಿಗೆ ಈ ದಿನದಿಂದಲೇ ಹಾಸ್ಟೆಲ್ ಸೌಲಭ್ಯ ಒದಗಿಸುವುದು. 2013 ರಿಂದ 2018 ರವರೆಗೆ ಜಾರಿಯಲ್ಲಿದ್ದ ರೀತಿಯಲ್ಲೇ ಎಸ್ಸಿ/ಎಸ್ಟಿ ವಿದ್ಯಾರ್ಥಿಗಳಿಗೆ ಜಿಎನ್‌ಎಂ ನರ್ಸಿಂಗ್, ಬಿಎಸ್ಸಿ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ತರಬೇತಿ ಆರಂಭಿಸುವುದು. ಎಸ್ಸಿ ವಿದ್ಯಾರ್ಥಿಗಳಿಗೆ ಆದಾಯದ ಮಿತಿ ರೂ.2.5ಲಕ್ಷದಿಂದ ರೂ.10ಲಕ್ಷಕ್ಕೆ ಹೆಚ್ಚಿಸುವುದು.ಬೆಲೆ ಏರಿಕೆಗೆ ತಕ್ಕಂತೆ ಎಸ್ಸಿ/ಎಸ್ಟಿ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನ ರೂ.1600 ರಿಂದ ರೂ.2500ಕ್ಕೆ ಹೆಚ್ಚಿಸುವುದು ಮುಂತಾದ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಸ್ಸಿ/ಎಸ್ಟಿ ವಿದ್ಯಾರ್ಥಿಗಳ ಶೈಕ್ಷಣೀಕ ಅಭಿವೃದ್ಧಿಗೆ ಶ್ರಮಿಸುವ ಮೂಲಕ ಅವರ ಹಿತ ಕಾಯುವುದು ನಮ್ಮ ಕಾಂಗ್ರೆಸ್ ಸರಕಾರದ ಬದ್ಧತೆಯಾಗಿದೆ. ಕೂಡಲೇ ಈ ಬಗ್ಗೆ ಸಮಾಜ ಕಲ್ಯಾಣ ಇಲಾಖೆ ಸಚಿವರ ಜತೆಯಲ್ಲಿ ಚರ್ಚಿಸಿ, ಬಗೆಹರಿಸುತ್ತೇನೆ ಎಂದು ಭರವಸೆ ನೀಡಿ–ದರು.

ಮಾಜಿ ಸಚಿವ ಎಚ್.ಆಂಜನೇಯ್ ಮಾತನಾಡಿ ವಿದ್ಯಾರ್ಥಿಗಳು ಅನುಭವಿಸುತ್ತಿರುವ ಸಮಸ್ಯೆಗಳ ತೀವ್ರತೆ ಬಗ್ಗೆ ಸಿಎಂ ಅವರಿಗೆ ಮನವರಿಕೆ ಮಾಡಿದರು. ಈ ಸಂದರ್ಭದಲ್ಲಿ ಮಾಜಿ ರಾಜ್ಯಸಭಾ ಸದಸ್ಯರಾದ ಎಲ್. ಹನುಮಂತಯ್ಯ, ಭೀಮಾ ಯಾತ್ರೆ ಬಳಗದ ಅಧ್ಯಕ್ಷ ರವಿಕುಮಾರ್, ಉಪನ್ಯಾಸಕ ಈ.ಪ್ರಕಾಶ್, ಶಾಂತಕುಮಾರ್ ತಿಪಟೂರು ಮಂಜು, ಸಚಿನ್ ಗೌತಮ್ ಇತರರಿದ್ದರು.

## ವೀರಮಕ್ಕಳ ಕುಣಿತ ಪ್ರದರ್ಶನ



ಚಿತ್ರದುರ್ಗ: ತಾಲ್ಲೂಕು ಕುರುಮರಡಿಕೆರೆ ಗ್ರಾಮದಲ್ಲಿ ಜ–29 ರಂದು ವೀರಮಕ್ಕಳ ಕುಣಿತ ಪ್ರದರ್ಶಿಸಲಾಯಿತು. ಜಿಲ್ಲಾ ಜಾನಪದ ಕಲಾ ಮಂಡಲ (ರಿ.) ಚಿತ್ರದುರ್ಗ ಇವರಿಂದ ವೀರಮಕ್ಕಳ ಕುಣಿತ ಎಂಬ ಜಾನಪದ ನೃತ್ಯವನ್ನು ಪ್ರದರ್ಶಿಸಲಾಯಿತು. ಚಿತ್ರದುರ್ಗ ಜಿಲ್ಲೆಯ ಪಾರಂಪರಿಕ ಇತಿಹಾಸ ಪ್ರಸಿದ್ಧ ಬುಡಕಟ್ಟು ಜನಾಂಗದ ಜಾನಪದ ಕಲೆಯಾದ ವೀರಮಕ್ಕಳ ಕುಣಿತ ಸಾರ್ವಜನಿಕರನ್ನು ಆಕರ್ಷಿಸಿತು. ಕಲಾ ಮಂಡಲದ ಕಲಾವಿದರಾಗಿ ಜಿ.ಗಿರೀಶ್, ಎಸ್. ಉಮಾಪತಿ, ಜಿ.ರಾಜಣ್ಣ, ಆರ್.ಅಮೋಘವರ್ಷ, ಸಾಗರ, ಆರ್.ಅರುಣ್‌ಕುಮಾರ್, ಸಿದ್ದೇಶ್ವರ, ಯು.ದರ್ಶನ, ಸಿ.ಕೆಂಚೇಶ್, ಶ್ರೀಧರ, ವೆಂಕಟೇಶ್‌ಪ್ರಸಾದ್, ಭುವನ, ಗೌತಮ, ಆರ್.ಅಭಿಲಾಷ್, ಎಸ್.ಮಧುಸೂಧನ ರವರುಗಳು ಭಾಗವಹಿಸಿ ಯಶಸ್ವಿ ಪ್ರದರ್ಶನ ಮಾಡಿದರು. ಗ್ರಾಮದ ಸುಮಾರು 100 ಜನ ಪ್ರೇಕ್ಷಕರು ಈ ಕಾರ್ಯಕ್ರಮ ವೀಕ್ಷಿಸಿ ಸಂತೋಷಿಸಿದರು.

## ಆದರ್ಶ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಆರ್.ಪುಟ್ಟಸ್ವಾಮಿ ತಂಡ ಭೇಟಿ; ಪರಿಶೀಲನೆ



**ಮೊಳಕಾಲ್ಮೂರು :** ಪಟ್ಟಣದ ಆದರ್ಶ ವಿದ್ಯಾಲಯದಲ್ಲಿ ನೂತನವಾಗಿ ಆದರ್ಶ ಸರ್ಕಾರಿ ಪದವಿ ಪೂರ್ವ ಕಾಲೇಜು ಆರಂಭದ ಹಿನ್ನೆಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಆರ್.ಪುಟ್ಟಸ್ವಾಮಿ ತಮ್ಮ ತಂಡದೊಂದಿಗೆ ಆಗಮಿಸಿ ಪರಿಶೀಲನೆ ನಡೆಸಿದರು.

ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶ ಬಂದ ಮಾರನೇ ದಿನದಿಂದಲೇ ಪ್ರವೇಶಕ್ಕೆ ವಿದ್ಯಾರ್ಥಿಗಳಿಂದ ದಾಖಲಾತಿ ಆರಂಭವಾಗುವ ವಿಜ್ಞಾನ ಹಾಗೂ ವಾಣಿಜ್ಯ ಸಂಯೋಜನಾ ಕಾಲೇಜುಗಳಲ್ಲಿ ಪ್ರಯೋಗಾಲಯಗಳು ಸೇರಿದಂತೆ ಇನ್ನಿತರ ಮೂಲ ಸೌಕರ್ಯಗಳ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಕಾರ್ಯಯೋಜನೆ ತಯಾರಿಸಲು ತಜ್ಞ ಅಧಿಕಾರಿಗಳ ತಂಡದೊಂದಿಗೆ ಪರಿಶೀಲಿಸಲಾಯಿತು .

ತಂಡದ ಸದಸ್ಯರಾದ ಕೆ.ಎಚ್.ರಾಜು, ಅಶೋಕ್, ತಿಪ್ಪೇಸ್ವಾಮಿ, ಶಾಖಾಧಿಕಾರಿ ಮಹೇಶ್, ಹರೀಶ್, ಪಾಟೀಲ್, ನಿಯೋಜಿತ ತಿತಿ ಪ್ರಾಚಾರ್ಯ ಬಿ.ಗೋವಿಂದಪ, ಶಾಲಾ ಉಪ ಪ್ರಾಚಾರ್ಯ ಎಂ.ಮಲ್ಲಿಕಾರ್ಜುನ ಹಾಗೂ ಇನ್ನಿತರ ಶಿಕ್ಷಕರು ಭಾಗವಹಿಸಿದ್ದರು.

## ಖಾಸಾಬೇಡರಪಡೆ ಕುಣಿತ ಪ್ರದರ್ಶನ



ಚಿತ್ರದುರ್ಗ ತಾಲ್ಲೂಕು ಬೆಳಗಟ್ಟ ಗ್ರಾಮದಲ್ಲಿ ಜ–30 ರಂದು ಖಾಸಾಬೇಡರಪಡೆ ಕುಣಿತ ಪ್ರದರ್ಶಿಸಲಾಯಿತು. ಜಿಲ್ಲಾ ಜಾನಪದ ಕಲಾ ಮಂಡಲ (ರಿ.) ಚಿತ್ರದುರ್ಗ ಇವರಿಂದ ಖಾಸಾಬೇಡರಪಡೆ ಕುಣಿತ ಎಂಬ ಜಾನಪದ ನೃತ್ಯವನ್ನು ಪ್ರದರ್ಶಿಸಲಾಯಿತು.

ಚಿತ್ರದುರ್ಗ ಜಿಲ್ಲೆಯ ಪಾರಂಪರಿಕ ಇತಿಹಾಸ ಪ್ರಸಿದ್ಧ ಬುಡಕಟ್ಟು ಜನಾಂಗದ ಜಾನಪದ ಕಲೆಯಾದ ಖಾಸಾಬೇಡರಪಡೆ ಕುಣಿತ ಸಾರ್ವಜನಿಕರನ್ನು ಆಕರ್ಷಿಸಿತು. ಕಲಾ ಮಂಡಲದ ಕಲಾವಿದರಾಗಿ ಜಿ.ಗಿರೀಶ್, ಎಸ್. ಉಮಾಪತಿ, ಜಿ.ರಾಜಣ್ಣ, ಆರ್.ಅಮೋಘವರ್ಷ, ಸಾಗರ, ಆರ್.ಅರುಣ್‌ಕುಮಾರ್, ಸಿದ್ದೇಶ್ವರ, ಯು.ದರ್ಶನ, ಸಿ.ಕೆಂಚೇಶ್, ಶ್ರೀಧರ, ವೆಂಕಟೇಶ್‌ಪ್ರಸಾದ್, ಭುವನ, ಗೌತಮ, ಆರ್.ಅಭಿಲಾಷ್, ಎಸ್.ಮಧುಸೂಧನ ರವರುಗಳು ಭಾಗವಹಿಸಿ ಯಶಸ್ವಿ ಪ್ರದರ್ಶನ ಮಾಡಿದರು. ಗ್ರಾಮದ ಸುಮಾರು 200 ಜನ ಪ್ರೇಕ್ಷಕರು ಈ ಕಾರ್ಯಕ್ರಮ ವೀಕ್ಷಿಸಿ ಸಂತೋಷಿಸಿದರು.

# ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ಬ್ಯಾಗ್ ವಿತರಣೆ

**ಚಿಕ್ಕಮಗಳೂರು:** ಅತ್ತಿಗುಂಡಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲಾಮಕ್ಕಳಿಗೆ ಉಚಿತ ಶಾಲಾ ಬ್ಯಾಗ್ಗಳನ್ನು ವಿತರಿಸಲಾಗಿತು.

ನಗರದ ಎಂಜಿ ರಸ್ತೆಯ ಆಂಜನೇಯ ಜ್ಯುವೆಲರ್ಸ್ ಮಾಲೀಕರಾದ ವಿಜಯ ಕುಮಾರ್ ರವರು ಮಕ್ಕಳಿಗೆ ಶಾಲಾ ಬ್ಯಾಗ್ ಗಳನ್ನು ವಿತರಿಸಿದ್ದು ಸರ್ಕಾರಿ ಶಾಲೆಯಲ್ಲಿ ಮಕ್ಕಳಿಗೆ ಪ್ರೋತ್ಸಾಹಿಸಲು ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಸೇವೆ ನೀಡುವುದಾಗಿ ತಿಳಿಸಿದರು.

ಇವರ ಈ ಕಾರ್ಯಕ್ಕೆ ಅತ್ತಿಗುಂಡಿ ಗ್ರಾಮಸ್ಥರು ಹಾಗೂ ಶಾಲಾ ಸಿಬ್ಬಂದಿಗಳು ಧನ್ಯವಾದಗಳನ್ನು ಅರ್ಪಿಸಿದರು.

ಈ ಸಮಯದಲ್ಲಿ ಶಾಲಾ ಶಿಕ್ಷಕರಾದ ದೇವರಾಜ್. ಶಾಲಾ ಅಧ್ಯಕ್ಷರದ ಮೋಹನ್ ಕುಮಾರ್. ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷರಾದ ಶಿವಕುಮಾರ್ ಹಾಗೂ ಗ್ರಾಮಸ್ಥರಾದ ಜೈಪಾಲ್. ಸತೀಶ್ ಎಂ. ಸತೀಶ್ ಕೆ.ಪ್ರವೀಣ್ ಸಾಕೇತ್, ಜೈಪಾಲ್, ಸತೀಶ್.ಡಿ, ವಿಶ್ವ, ಚಂದ್ರು, ಪ್ರಸನ್ನ ಎ.ಕೆ ಇದ್ದರು

# ಪರಿಶಿಷ್ಟ ಜಾತಿ / ಪಂಗಡ ಸಮುದಾಯದ ಕುಂದು ಕೊರತೆ

**ಚಿಕ್ಕಮಗಳೂರು:** ಪರಿಶಿಷ್ಟ ಜಾತಿ / ಪಂಗಡ ಸಮುದಾಯದವರು ವಾಸಿಸುವ ಪ್ರದೇಶಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಜೊತೆಗೆ ಅವರ ಸಮಸ್ಯೆಗಳಿಗೆ ಸ್ಪಂದಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ವಿಕ್ರಂ ಅಮಟೆ ಅವರು ಹೇಳಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನೆನ್ನೆ ನಡೆದ ಜಿಲ್ಲಾ ಮಟ್ಟದ 13 ಪರಿಶಿಷ್ಟ ಜಾತಿ / ಪಂಗಡದ ಮುಖಂಡರುಗಳ ಹಾಗೂ ಸದಸ್ಯರ ಕುಂದು ಕೊರತೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ಎಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ / ಪಂಗಡದ ಮುಖಂಡರುಗಳ ಸಭೆಗಳನ್ನು ನಡೆಸಲಾಗುತ್ತಿದ್ದು, ಸಮಾಜದಲ್ಲಿ ಶಾಂತಿ, ಸಾಮರಸ್ಯ ಮೂಡಿಸುವ ಅವರ ಸಮಾಜದ ಮುಖಂಡರುಗಳು ಭಾಗವಹಿಸುವಿಕೆ ಹಾಗೂ ಅಲ್ಲಿ ನಡೆಯುವ ಚರ್ಚೆಗಳು ಹಾಗೂ ಸಮಸ್ಯೆಗಳಿಗೆ ಪರಿಹಾರ ಕಂಡು ಕೊಳ್ಳುವ ನಿಟ್ಟಿನಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಈ ಸಮುದಾಯದ ಸಮಸ್ಯೆಗಳಿಗೆ ಪರಿಹಾರ ಕಂಡು ಕೊಳ್ಳುವ ಪ್ರಯತ್ನ ಮಾಡಲಾಗುತ್ತದೆ ಎಂದ ಅವರು ಠಾಣೆಗಳಿಗೆ ಬರುವ ಸಮಸ್ಯೆಗಳೆಂದರೆ, ಹಕ್ಕುಪತ್ರ ನಿವೇಶನ, ಜಮೀನು ಒತ್ತುವರಿ, ಕುಡಿಯುವ ನೀರು, ಬೆಳಕು, ರಸ್ತೆ, ಸ್ಮಶಾನ, ಚರಂಡಿ ಹಾಗೂ ದೌರ್ಜನ್ಯ ಪ್ರಕರಣಗಳಿವೆ ಎಂದರು. ಸಾಮಾನ್ಯವಾಗಿ ಸಮುದಾಯದ ಮುಖಂಡರುಗಳು ಸಮುದಾಯದ ಜನರಿಗೆ ಸರ್ಕಾರದಿಂದ ದೊರಕುವ ಸೌಲಭ್ಯಗಳ ಬಗ್ಗೆ ತಿಳುವಳಿಕೆ ಮೂಡಿಸಬೇಕು. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರು ದೂರು ದಾಖಲಿಸುವಾಗ ಇರುವ ಉತ್ಸಾಹ ಅದು ಅಂತಿಮ ಹಂತ ತಲುಪುವವರೆಗೂ ಇರುವಂತೆ ನೋಡಿಕೊಳ್ಳಬೇಕು. ಇತ್ತೀಚಿಗೆ ದೌರ್ಜನ್ಯ ಪ್ರಕರಣಗಳಿಗೆ ನ್ಯಾಯ ಒದಗಿಸುವ ಕೆಲಸ ಬಹಳಷ್ಟು ಆಗುತ್ತಿದೆ ಎಂದು ಹೇಳಿದರು.

ಜಿಲ್ಲೆಯ ಕೆಲ ತಾಲ್ಲೂಕು ಕಛೇರಿಗಳಲ್ಲಿ ಸರಿಯಾದ ದಾಖಲಾತಿಗಳು ನಶಿಸಿ ಹೋಗುತ್ತಿರುವ ದೂರುಗಳು 53. 94 ಅರ್ಜಿಗಳಲ್ಲಿ ಆಗುತ್ತಿರುವ ಸಮಸ್ಯೆಗಳಿಗೆ ಉನ್ನತ ಅಧಿಕಾರಿಗಳ ಮಟ್ಟದ ಚರ್ಚಿಸಲಾಗಿ ವಿಳಂಬವಿಲ್ಲದೆ ಹಲವಾರು ಸಮಸ್ಯೆಗಳನ್ನು ಬಗೆಹರಿಸಲು ಎಲ್ಲಾ ಇಲಾಖೆಗಳ ಮುಖ್ಯಸ್ಥರಿಗೆ ತಿಳಿಸಲಾಗುವುದು. ಕಳಸ ತಾಲ್ಲೂಕಿನ ಕೆಲಗ್ರಾಮಗಳಿಗೆ ಇನ್ನೂ ಅಗತ್ಯ ಮೂಲಭೂತ ಸೌಕರ್ಯ ಇಲ್ಲದಿರುವುದು ದೂರು ಬಂದಿದೆ. ಇಂತಹ ಹಲವಾರು ಗ್ರಾಮಗಳ ಸಮಸ್ಯೆಗಳಿಗೆ ಪರಿಹಾರ ಕಂಡು ಕೊಳ್ಳಲು ಪ್ರಯತ್ನಿಸಲಾಗುವುದು ಎಂದರು.

ಜಿಲ್ಲೆಯಲ್ಲಿ ಇದುವರಿಗೂ ನಿರ್ಮಿಸಿರುವ ಅಂಬೇಡ್ಕರ್ ಭವನಗಳ ಮೇಲುಸ್ತುವಾರಿ ಅವುಗಳ ನಿರ್ವಹಣೆ ಬಗ್ಗೆ ಹಲವು ದೂರುಗಳ ಬಗ್ಗೆ ಸಂಬಂಧಪಟ್ಟ ಇಲಾಖೆಯವರಿಗೆ ಸರಿಪಡಿಸಿ ಸೂಕ್ತ ನಿರ್ವಹಣೆ ಬಗ್ಗೆ ತಿಳಿಸಲಾಗಿದೆ. ನ್ಯಾಯಾಲಯಗಳಲ್ಲಿ ದಾಖಲಾಗಿರುವ ವಿವಿಧ ಪ್ರಕರಣಗಳಿಗೆ ಶೀಘ್ರ ನ್ಯಾಯ ಸಿಗುವ ರೀತಿಯಲ್ಲಿ ಕ್ರಮಕೈಗೊಳ್ಳಲಾಗಿದೆ ಎಂದರು.

ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಕೃಷ್ಣಮೂರ್ತಿ ಅವರು ಕಳೆದ ಸಭೆಯಲ್ಲಿ ವ್ಯಕ್ತವಾದ ವಿಷಯಗಳ ಬಗ್ಗೆ ಅನುಪಾಲನ ವರದಿಯನ್ನು ಸಭೆಗೆ ತಿಳಿಸಿದ ಅವರು.

ಜಿಲ್ಲೆಯ ವಿವಿಧ ಕಡೆಗಳಲ್ಲಿ ಒಟ್ಟು 223 ಅಬಕಾರಿ ಪ್ರಕರಣಗಳನ್ನು ದಾಖಲಿಸಿ ಒಂದು ಸಾವಿರ ಲೀಟರ್ ಮದ್ಯ ನಾಶಪಡಿಸಲಾಗಿದೆ ಎಂದ ಅವರು. ಎಸ್ಸಿ/ಎಸ್ ಟಿ ಪ್ರಕರಣದಡಿಯಲ್ಲಿ ಒಟ್ಟು 64 ಪ್ರಕರಣಗಳನ್ನು ದಾಖಲಿಸಿ, 46 ಪ್ರಕರಣಗಳಿಗೆ ಚಾರ್ಜ್ ಶೀಟ್ ಸಲ್ಲಿಸಲಾಗಿದ್ದು, ಉಳಿದ

# ಚಾರಣ ಪರಿಸರ ಶಿಬಿರಕ್ಕೆ ನೊಂದಣಿ

**ಚಿಕ್ಕಮಗಳೂರು:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಮಗಳೂರು ಹಾಗೂ ಪ್ರತಿಬಿಂಬ ಯುವ ಪ್ರತಿಷ್ಠಾನ (ರಿ.), ಮೂಡಿಗೆರೆ ಇವರ ಸಹಯೋಗದೊಂದಿಗೆ ಫೆಬ್ರವರಿ 06 ರಂದು ಮೂಡಿಗೆರೆ ತಾಲೂಕಿನ ಎತ್ತಿನಭುಜಕ್ಕೆ ಚಾರಣ ಪರಿಸರ ಶಿಬಿರವನ್ನು ಏರ್ಪಡಿಸಲಾಗಿದೆ.

ಆಸಕ್ತರು ತಮ್ಮ ಹೆಸರನ್ನು ಫೆಬ್ರವರಿ 05 ರೊಳಗೆ ಮೂಡಿಗೆರೆ ಪ್ರತಿಬಿಂಬ ಯುವ ಪ್ರತಿಷ್ಠಾನ (ರಿ.), ಅಧ್ಯಕ್ಷ ಸುನಿಲ್ (ಮೊ.ಸಂ. 8546879303) ಇವರನ್ನು ಸಂಪರ್ಕಿ ನೊಂದಣಿ ಮಾಡಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪನಿರ್ದೇಶಕರ ಕಛೇರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಹನ ಸಂಚಾರ ನಿಷೇಧ

**(ಕಳಸ–ಹೊರನಾಡು ಸಂಪರ್ಕಿಸುವ ರಸ್ತೆ ಬದಲಿ ಮಾರ್ಗ)**

**ಚಿಕ್ಕಮಗಳೂರು:** ಕಳಸ ತಾಲ್ಲೂಕಿನ ಕಳಸ–ಹೊರನಾಡು ರಸ್ತೆಯಲ್ಲಿನ ಹೆಬ್ಬಾಳೆ ಸೇತುವೆಯ ತಡೆಗೋಡೆ ಮತ್ತು ಅಪ್ರೋಚ್ ರಸ್ತೆ ನಿರ್ಮಾಣ ಕಾಮಗಾರಿ ನಡೆಯುತ್ತಿರುವುದರಿಂದ ಜನವರಿ 25 ರಿಂದ ಏಪ್ರಿಲ್ 25 ರವರೆಗೆ ಒಟ್ಟು ಮೂರು ತಿಂಗಳುಗಳ ಕಾಲ ಕಳಸ–ಹೊರನಾಡು ರಸ್ತೆಯಲ್ಲಿ ವಾಹನ ಸಂಚಾರ ನಿಷೇಧಿಸಿದೆ ಮತ್ತು ಕಳಸ–ಹೊರನಾಡು ಸಂಪರ್ಕಿಸಲು ಬದಲೀ ರಸ್ತೆಯಾದ ಹಳುವಳ್ಳಿ–ದಾರಿಮನೆ ಕ್ರಾಸ್–ಹೊರನಾಡು ರಸ್ತೆಯು ಏಕಪಥದ ರಸ್ತೆಯಾಗಿದ್ದು, ಲಘು ವಾಹನಗಳ ಸಂಚಾರಕ್ಕೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ಶೃಂಗೇರಿಯಿಂದ ಹೊರನಾಡಿಗೆ ಬರುವ ವಾಹನಗಳನ್ನು ಶೃಂಗೇರಿ–ಕೂಳೂರು–ಕೊಗ್ರೆ–ಶಾಂತಿಗ್ರಾಮ–ಬೈಲುಮನೆ–ಮೆಣಸಿನಹಾಡ್ಯ–ಬಲಿಗೆ–ಹೊರನಾಡಿಗೆ ವಾಹನ ಸಂಚರಿಸಲು ಬದಲಿ ಮಾರ್ಗವಾಗಿದೆ. ಈ ರಸ್ತೆಯು ತೀವ್ರ ತಿರುವುಗಳಿಂದ ಕೂಡಿರುವುದರಿಂದ ಉದ್ದ ಚಾಸಿ ವಾಹನಗಳನ್ನು (ಬಸ್ಸು, ಲಾರಿ ಇತರೆ) (ಲಾಂಗ್ ಚಾಸ್ಸಿ) ಸಂಚಾರವನ್ನು ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅವರು ಆದೇಶಿಸಿದ್ದಾರೆ.

# ಪುಷ್ಪಾ ಮಹಿಳಾ ಸಹಕಾರ ಸಂಘದ ಅಧ್ಯಕ್ಷೆ

**ಮಾಯಕೊಂಡ:** ದಾವಣಗೆರೆ ತಾಲೂಕು ಈಚಗಟ್ಟ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಪುಷ್ಪ ರಾಜಪ್ಪ ಹಾಗೂ ಉಪಾಧ್ಯಕ್ಷರಾಗಿ ಜ್ಯೋತಿ ಮಂಜ ನಾಯ್ಕ್ ಅವಿರೋಧವಾಗಿ ಅಯ್ಕೆಯಾಗಿದ್ದಾರೆ. ಸಂಘದ ಕಚೇರಿಯಲ್ಲಿ ಶುಕ್ರವಾರ ಅಧ್ಯಕ್ಷ, ಉಪಾಧ್ಯಕ್ಷ ಮತ್ತು 9 ನಿರ್ದೇಶಕರ ಸ್ಥಾನಗಳಿಗೆ ಪಲ್ಲವಿ, ಗೀತಾ, ಅನುಷಾ, ನಿರ್ಮಲಾ, ರೇಖಾ ಮತ್ತು ಚಂದ್ರಮ್ಮ ಅವಿರೋಧವಾಗಿ ..ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಸತೀಶ್ ನಾಯ್ಕ ಘೋಷಿಸಿದ್ದಾರೆ ಕಾರ್ಯದರ್ಶಿ ನೇತ್ರಾವತಿ, ಹಾಲು ಪರೀಕ್ಷಕಿ ಪವಿತ್ರಾ ಇತರರಿದ್ದರು.

# ಹಾವೇರಿಯ ಡಿ ಯುನೈಟೆಡ್ ಮತ್ತು ಬೆಳಗಾಂ ನ ರೇಣುಕಾ ಫುಟ್ಬಾಲ್ ಕ್ಲಬ್ ನಡುವೆ ಫೈನಲ್ ಪಂದ್ಯಾವಳಿ



**ದಾವಣಗೆರೆ:** ದಾವಣಗೆರೆ ಜಿಲ್ಲಾ ಫುಟ್ಬಾಲ್ ಅಸೋಸಿಯೇಷನ್ ವತಿಯಿಂದ ಕ್ರೀಡೆಗಳ ಮೂಲಕ ಶಾಲಾ ಬಾಲಕೀಯರ ಸಬಲೀಕರಣಕ್ಕಾಗಿ ಖೇಲೋ ಇಂಡಿಯಾ ಅಡಿಯಲ್ಲಿ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿ ಅವರ ನೇತೃತ್ವದಲ್ಲಿ ನಡೆಯುತ್ತಿರುವ ನಗರದ ಲೂಡ್ಸ್ ಬಾಯ್ಸ್ ಸ್ಕೂಲ್ ಆವರಣದಲ್ಲಿ ರಾಜ್ಯಮಟ್ಟದ ಬಾಲಕಿಯರ ಫುಟ್ಬಾಲ್ ಪಂದ್ಯಾವಳಿಯ ನಾಳೆ ಮಧ್ಯಾಹ್ನ 2 ಗಂಟೆಗೆ ಹಾವೇರಿಯ ಡಿ ಯುನೈಟೆಡ್ ಮತ್ತು ಬೆಳಗಾಂ ನ ರೇಣುಕಾ ಫುಟ್ಬಾಲ್ ಕ್ಲಬ್ ನಡುವೆ ಫೈನಲ್ ಪಂದ್ಯಾವಳಿಗಳು ನಡೆಯಲಿದೆ

ಈ ಪಂದ್ಯಾವಳಿಯಲ್ಲಿ ವಿಜೇತರಾದ ತಂಡಗಳಿಗೆ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಪ್ರಶಸ್ತಿ ವಿತರಣೆ ಮಾಡಲಿದ್ದಾರೆ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಮಹಾನಗರ ಪಾಲಿಕೆಯ ಆಯುಕ್ತರದ ರೇಣುಕಾ ಎಸ್ ದಾವಣಗೆರೆ ಜಿಲ್ಲಾ ಫುಟ್ಬಾಲ್ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿ ಮಹಾಪೌರರಾದ ಚಮಾನ್ ಸಾಬ್ ಮಹಾನಗರ ಪಾಲಿಕೆ ಸದಸ್ಯರಾದ ಎ ನಾಗರಾಜ್ ಗಡಿಗುಡಾಳ ಮಂಜುನಾಥ್ ಲಯನ್ಸ್ ಕ್ಲಬ್ ಅಧ್ಯಕ್ಷರಾದ ಉಳುವಯ್ಯ ಬಹುಮಾನ ವಿತರಣ ಸಮಾರಂಭದಲ್ಲಿ ಪಾಲ್ಗೊಳ್ಳುವರು ಎಂದು ಸಂಘದ ಕಾರ್ಯದರ್ಶಿಗಳಾದ ಮುಜಾಯಿದ್ ರವರು ತಿಳಿಸಿದರು.

# ಮಾಚಿದೇವರು ಕಾರ್ಯ ಪುರುಷರ : ಗೊರೂರು ಶಿವೇಶ್

ಹಾಸನ : ಬಸವಣ್ಣನವರಂತೆಯೆ 12 ನೇ ಶತಮಾನದ ಮಹತ್ವ ವಚನಕಾರರಲ್ಲಿ ಮಡಿವಾಳ ಮಾಚಿದೇವ ಅವರು ಶ್ರೇಷ್ಠರಾದವರು, ಬಸವಣ್ಣನವರು ಕಾರಣಿ ಪುರುಷರಾದರೆ, ಮಾಚಿದೇವರು ಕಾರ್ಯ ಪುರುಷರು ಎಂದು ನಿವೃತ್ತ ಉಪನ್ಯಾಸಕರಾದ ಗೊರೂರು ಶಿವೇಶ್ ಹೇಳಿದ್ದಾರೆ.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಾಸನಂಬ ಕಲಾಕ್ಷೇತ್ರದಲ್ಲಿ ಇಂದು ಹಮ್ಮಿಕೊಂಡಿದ್ದ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮ ಕುರಿತು ಉಪನ್ಯಾಸ ನೀಡಿ ಮಾತನಾಡಿದ ಅವರು ವಚನಗಳನ್ನು ಸಂರಕ್ಷಿಸುವಲ್ಲಿ ಮಾಚಿದೇವರ ಕೊಡುಗೆಯು ಅಪಾರವಾದದ್ದು, ಕಾಯಕ ಯೋಗಿಯಾಗಿ, ವಚನ ಸಂರಕ್ಷಕರಾಗಿ, ಸೈನಿಕರಾಗಿ ಇವರನ್ನು ಗುರುತಿಸಬಹುದು ಎಂದರು.


ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಬಿ.ಪಿ ಕೃ?ೀಗೌಡ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಮಡಿವಾಳ ಮಾಚಿದೇವರ ಪ್ರಮುಖ ವೃತ್ತಿ ಶಿವಶರಣರ ಸಮಿತಿಯಲ್ಲಿದ್ದುಕೊಂಡು ಅವರ ವಸ್ತ್ರಗಳನ್ನು ಮಡಿವಂತಿಕೆ ಮಾಡುವುದಾಗಿತ್ತು, ವೃತ್ತಿ ಕಾರ್ಯದ ಬಗೆಗೆ ಇವರು ಬಹಳ ಗೌರವವನ್ನು ಹೊಂದಿದ್ದರು.

ಬಸವಣ್ಣನವರು ಕೂಡ ಕೆಲವೊಮ್ಮೆ ಇವರಿಂದ ಸಲಹೆ ಸೂಚನೆಗಳನ್ನು ಪಡೆದುಕೊಳ್ಳುತ್ತಿದ್ದರು ಹಾಗಾಗಿ ಇವರು ವಿಚಾರವಂತರು ಜೊತೆಗೆ ಎಲ್ಲಾ ಪ್ರಾಣಿ ಪಕ್ಷಿಗಳ ಮೇಲೆಯೂ ವಚನಗಳನ್ನು ಬರೆದಿದ್ದಾರೆ, ಅಕ್ಕಮಹಾದೇವಿಯವರು ಕೂಡ ತಂದೆಯ ಸ್ಥಾನವನ್ನು ಕೊಟ್ಟು ಮಾಚಿದೇವರನ್ನು ಗೌರವಿಸಿದ್ದಾರೆ ಎಂದು ತಿಳಿಸಿದರು.ಎಲ್ಲಾ ಜಯಂತಿಗಳಿಗೂ ಎಲ್ಲ ಸಮುದಾಯದವರು ಭಾಗವಹಿಸಬೇಕು ಏಕೆಂದರೆ ಇಂತಹ ಮಹಾನ್ ವ್ಯಕ್ತಿಗಳು ಸಮಾಜಕ್ಕೆ ಅನೇಕ ಉತ್ತಮವಾದ ಮಾರ್ಗದರ್ಶನಗಳನ್ನು ನೀಡಿದ್ದಾರೆ ಹಾಗಾಗಿ ಎಲ್ಲ ಜನಾಂಗದವರು ಒಟ್ಟಾಗಿ ಸೇರಿ ಆಚರಣೆ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಚ್.ಪಿ ತಾರಾನಾಥ್, ಹಾಸನ ನೌಕರ ಸಂಘದ ಗೌರವಾಧ್ಯಕ್ಷರಾದ ಇ ಕೃ?ೀಗೌಡ, ಜಿಲ್ಲಾ ಕನ್ನಡ ಸಾಹಿತ್ಯ ಪರಿ?ತ್ತಿನ ಅಧ್ಯಕ್ಷರಾದ ಡಾ. ಎಚ್.ಎಲ್ ಮಲ್ಲೇಶಗೌಡ ಹಾಗೂ ಸಮುದಾಯದ ಇತರ ಮುಖಂಡರು ಉಪಸ್ಥಿತರಿದ್ದರು.

### ಜಿಲ್ಲಾಡಳಿತದಲ್ಲಿ ಮಡಿವಾಳ ಮಾಚಿದೇವ ಜಯಂತಿ

# ಅರಸುತನ ಮೇಲಲ್ಲ, ಅಗಸತನ ಕೀಳಲ್ಲ



**ಗದಗ:** ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಶ್ರೀ ಮಡಿವಾಳ ಮಾಚಿದೇವ ಜಯಂತಿಯನ್ನು ಶನಿವಾರ ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ದಲ್ಲಿ ಆಚರಿಸಲಾಯಿತು.

ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ ಅವರು ಕಾರ್ಯಕ್ರಮ ಉದ್ಘಾಟಿಸಿದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಮಾತನಾಡಿ, 12ನೇ ಶತಮಾನದ ಶರಣರು ತಮ್ಮ ವಚನದ ಮೂಲಕ ಸಮಾಜದ ಅಂಕು ಡೊಂಕುಗಳನ್ನು ವಚನಗಳ ಅಸ್ತ್ರದಿಂದ ತಿದ್ದಲು ಶ್ರಮಿಸಿದ್ದಾರೆ. 12ನೇ ಶತಮಾನದ ಮಡಿವಾಳ ಮಾಚಿದೇವರು ಮನುಕುಲದ ಕಲ್ಯಾಣಕ್ಕಾಗಿ ಶ್ರಮಿಸಿದವರಲ್ಲಿ ಒಬ್ಬರು. ವಚನದ ಸಾರವನ್ನು ಅರಿತು ಸಂದೇಶಗಳನ್ನು ನಿಜ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ನುಡಿದರು.

ಮಡವಾಳ ಮಾಚಿದೇವರು ಕಾಯಕ ನಿಷ್ಠರು. ಅವರೊಬ್ಬ ಮಹಾನ ಅವತಾರ ಪುರುಷರಾಗಿ ಸಮಾಜದ ಏಳಿಗೆಗಾಗಿ ಶ್ರಮಿಸಿದ ಶರಣರಾಗಿದ್ದಾರೆ. ಅಚಲ ಕಾಯಕನಿಷ್ಠೆ ತನ್ನ ಕಾಯಕವೇ ಭಕ್ತಿ ಉಸಿರು ಎಂದು ನಂಬಿದ್ದರು. ಶಿವ ಶರಣರ ಹಾಗೂ ಕಾಯಕದಲ್ಲಿ ನಿಷ್ಠೆ ಉಳ್ಳವರ ಬಟ್ಟೆಗಳನ್ನು ಮಡಿಮಾಡಿ ತಲುಪಿಸುವ ಕಾರ್ಯ ಇವರದಾಗಿತ್ತು. ಅದನ್ನು ಶ್ರದ್ದೇಯಿಂದ ಮಾಡುವ ಮೂಲಕ ಅರಸುತನ ಮೇಲಲ್ಲ, ಅಗಸತನ ಕೀಳಲ್ಲ ಎಂದು ಜಗತ್ತಿಗೆ ಸಾರಿದ ಮಹಾಮಹಿಮ ಎಂದು ಬಣ್ಣಿಸಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕ ಸಿದ್ದಲಿಂಗೇಶ ಸಜ್ಜನ ಶೆಟ್ಟರ್ ಉಪನ್ಯಾಸ ಸಕರಾಗಿ ಮಾತನಾಡಿ, ಕಲ್ಯಾಣ ಲದಲಿದ್ದ ಶರಣರೊಂದಿಗೆ ಹಲವಾರು ವಚನಗಳನ್ನು ರಚಿಸಿ ಕಾಯಕದ ಮಹತ್ವವನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿದ್ದಾರೆ ಎಂದರು.

ವೀರನಿಷ್ಠೆಯ ಶರಣನೀತ, ವಿಜಾಪುರ ಜಿಲ್ಲೆಯ ಸಿಂಧಗಿ ತಾಲೂಕಿನ 'ದೇವರ ಹಿಪ್ಪರಗಿಯಲ್ಲಿ' ಪರುವತಯ್ಯ –ಸುಜ್ಞಾನವ್ವ ದಂಪತಿಗಳ ಪುತ್ರ ರತ್ನ –ಶರಣ ಕಿರಣ ಮಡಿವಾಳ ಮಾಚಿದೇವರು. ದೇವರ ಹಿಪ್ಪರಗಿ ಇವರ ಜನ್ಮಸ್ಥಳ. ಕಾರ್ಯಕ್ಷೇತ್ರ ಕಲ್ಯಾಣ. ಆರಾಧ್ಯದೈವ ಕಲ್ಲಿನಾಥ. ಕಾವ್ಯ ಪುರಾಣಗಳಲ್ಲಿ ಇವರನ್ನು ವೀರಭದ್ರನ ಅವತಾರವೆಂದು ಬಣ್ಣಿಸಲಾಗಿದೆ. ಶಾಸನ ಶಿಲ್ಪಗಳಲ್ಲಿಯೂ ಇವರಿಗೆ ಎಡೆ ಲಭಿಸಿದೆ. ಶರಣರ ಬಟ್ಟೆಗಳನ್ನು ತೊಳೆಯುವುದು (ಶುಚಿ ಮಾಡುವುದು) ಇವರ ಕಾಯಕವಾಗಿತ್ತು ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಹೆಚ್ಚವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ. ಬಿ. ಸಂಕದ, ಜಿ.ಪಂ ಉಪಕಾರ್ಯದರ್ಶಿ ಸಿ ಆರ್ ಮುಂಡರಗಿ, ಜಿಲ್ಲಾ ಖಜಾನೆ ಉಪನಿರ್ದೇಶಕ ಹರಿನಾಥ ಬಾಬು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ, ಸಮಾಜದ ಗಣ್ಯರು, ಹಿರಿಯರು ಹಾಜರಿದ್ದರು.

# ಮಾದಕ ವಸ್ತುಗಳ ಉತ್ಪಾದನೆ, ಸಾಗಾಣಿಕೆ, ಮಾರಾಟ ಪತ್ತೆಗೆ ಕ್ರಮವಹಿಸಲು ಸೂಚನೆ

**ಹಾಸನ :** ಜಿಲ್ಲೆಯಲ್ಲಿ ಮಾದಕ ವಸ್ತುಗಳ ಉತ್ಪಾದನೆ, ಸಾಗಾಣಿಕೆ, ಮಾರಾಟ ಹಾಗೂ ಬಳಕೆಯನ್ನು ಪರಿಣಾಮವಾಗಿ ತಡೆಗಟ್ಟುವ ನಿಟ್ಟಿನಲ್ಲಿ ನಿಗಾ ವಹಿಸುವಂತೆ ಜಿಲ್ಲಾಧಿಕಾರಿ ಸತ್ಯಭಾಮ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ಮಟ್ಟದ ನಾರ್ಕೋ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಯಾರು ಓಡಾಡದೇ ಇರುವಂತಹ ಪ್ರದೇಶದಲ್ಲಿ ಗಾಂಜಾ ಬೆಳೆಯುವ ಸಾಧ್ಯತೆ ಇರುತ್ತದೆ ಈ ನಿಟ್ಟಿನಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಗಸ್ತು ಸಮಯದಲ್ಲಿ ಗಮನಹರಿಸಿ ಗಾಂಜಾ ಬೆಳೆಯನ್ನು ಪತ್ತೆಹಚ್ಚಿ ಸೂಕ್ತ ಕ್ರಮ ವಹಿಸುವಂತೆ ಸೂಚಿಸಿದರು.

ಅದೇ ರೀತಿ ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸಹ ಎಚ್ಚರಿಕೆವಹಿಸಿ ತೋಟಗಾರಿಕೆ ಮತ್ತು ಕೃಷಿ ಜಮೀನುಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಗಾಂಜಾ ಬೆಳೆ ಪತ್ತೆಹಚ್ಚಲು ನಿರ್ದೇಶನ ನೀಡಿದರು.

ಅಕ್ರಮವಾಗಿ ಔ?ಧಿ ಅಂಗಡಿಗಳಲ್ಲಿ ಒಂದೇ ರೀತಿಯಾಗಿರುವ ಹೆಚ್ಚಿನ ಡ್ರಗ್ ಮಾರಾಟವಾಗುತ್ತಿದ್ದರೆ ಅಂತಹ ಅಂಗಡಿಗಳ ಮೇಲೆ ಸೂಕ್ತ




ನಿಗಾವಹಿಸಿ ಅನಿರೀಕ್ಷಿತ ದಾಳಿ ನಡೆಸಿ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಸಹಾಯಕ ಔ?ಧ ನಿಯಂತ್ರಣಾಧಿಕಾರಿಗೆ ಸೂಚಿಸಿದರು.

ಹಾಸನ ಜಿಲ್ಲೆಯ ರೆಸಾರ್ಟ್ ಮತ್ತು ಹೋಂ ಸ್ಟೇ ಗಳಿಗೆ ವಾರಾಂತ್ಯದ ಶುಕ್ರವಾರ ಮತ್ತು ಶನಿವಾರದಂದು ಹೊರಗಡೆಯಿಂದ ಯಾತ್ರಿಕರು ಬಂದು ಹೋಗುತ್ತಿದ್ದು, ಕೆಲವು ರೆಸಾರ್ಟ್ ಮತ್ತು ಹೋಂ ಸ್ಟೇ ಗಳು ಹೆಚ್ಚು ಭರ್ತಿಯಾಗುತ್ತಿವೆ. ಯಾತ್ರಿಕರಿಗೆ ಸೇವನೆ ಮಾಡಲು ಅಕ್ರಮವಾಗಿ ಮಾದಕ ವಸ್ತುಗಳನ್ನು ಪೂರೈಕೆ ಮಾಡುವ ಮಾಹಿತಿ ಇರುವುದರಿಂದ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳು ಹೆಚ್ಚಿನ ಗಮನಹರಿಸಿ ಅನಿರೀಕ್ಷಿತ ಭೇಟಿ ನೀಡಿ ತಕ್ಷಣ ಪೊಲೀಸ್ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದು ಪ್ರಕರಣ ದಾಖಲಿಸುವಂತೆ ಸೂಚಿಸಿದರು.

ಅಕ್ರಮವಾಗಿ ಮಾದಕ ವಸ್ತುಗಳ ಮಾರಾಟ ಮಾಡುವಂತಹ ಹಾಗೂ ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವಂತಹ ವ್ಯಕ್ತಿಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುವಂತೆ ಪೊಲೀಸ್ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಹಿಂದಿನ ಸಭೆಯಲ್ಲಿ 50 ಪ್ರಕರಣ ದಾಖಲಿಸಲು ಗುರಿ ನಿಗದಿಪಡಿಸಲಾಗಿತ್ತು 131 ಪ್ರಕರಣಗಳನ್ನು ದಾಖಲಿಸಿದ್ದಾರೆ ಇನ್ನೂ ಹೆಚ್ಚಿನ ಕಾಳಜಿಯಿಂದ ಪತ್ತೆಹಚ್ಚುವಂತೆ ತಿಳಿಸಿದರು.

ಮಾದಕ ವಸ್ತುಗಳ ಪತ್ತೆಗಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಕೂಡ ವಾಹನಗಳ ತಪಾಸಣೆ ಮಾಡಲು ಸೂಚಿಸಿದರು.

ಮುಖ್ಯವಾಗಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಕ್ರಮ ವಹಿಸುವಂತೆ ಸೂಚಿಸಿದರಲ್ಲದೆ, ಶಾಲಾ ಕಾಲೇಜು ಸುತ್ತಮುತ್ತ ಮಾದಕ ವಸ್ತುಗಳ ಮಾರಾಟ ಮಾಡುವುದನ್ನು ಪತ್ತೆಹಚ್ಚಲು ಹೆಚ್ಚಿನ ನಿಗಾವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಸಮಾಜ ಕಲ್ಯಾಣ, ಬಿ.ಸಿ.ಎಂ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಸ್ಟೆಲ್ ಗಳಲ್ಲಿಯೂ ಕೂಡ ಸಂಬಂದಪಟ್ಟ ಅಧಿಕಾರಿಗಳು ಪರಿಶೀಲನೆ ಮಾಡುವಂತೆ ನಿರ್ದೇಶನ ನೀಡಿದರು.

ಜಿಲ್ಲಾ ಪೊಲೀಸ್ ವರಿ?ಧಿಕಾರಿ ಮೊಹಮ್ಮದ್ ಸುಜೀತ ಅವರು ಮಾತನಾಡಿ ಮಾದಕ ವಸ್ತುಗಳ ಸೇವನೆ ಹೆಚ್ಚಾಗಿದೆ ಇದನ್ನು ತಡೆಗಟ್ಟಲು ಎಲ್ಲರೂ ಜಾಗೃತರಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ತಿಳಿಸಿದರು.

ಮಾದಕ ವಸ್ತುಗಳ ಸಾಗಣೆಕೆ ಪತ್ತೆಗಾಗಿ ಪೊಲೀಸ್ ಇಲಾಖೆಯೊಂದಿಗೆ ರೈಲ್ವೆ ಇಲಾಖೆ ಪೊಲೀಸ್ ಸಿಬ್ಬಂದಿಗಳು ಕೂಡ ಕೈ ಜೋಡಿಸಿ ಎಂದು ತಿಳಿಸಿದರು.

ಸಿಂಥೆಟಿಕ್ ಡ್ರಗ್ ಮೇಲೆ ನಿಗಾ ವಹಿಸಬೇಕಿದೆ ಒಮ್ಮೆ ಇದರ ಸೇವನೆಗೆ ಒಳಗಾದರೆ ಆ ವ್ಯಸನದಿಂದ ಹೊರತರುವುದು ಕ?ವಿದೆ ಎಂದು ತಿಳಿಸಿದರು. ಇದಕ್ಕಾಗಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವುದು ಬಹುಮುಖ್ಯವಾಗಿದೆ ಎಂದರು.

ಸಕಲೇಶಪುರಕ್ಕೆ ತೋಟದ ಕೆಲಸಕ್ಕೆ ಅಸ್ಸಾಂ, ಬಾಂಗ್ಲಾ ದೇಶದಿಂದ ಬಂದಿರುವ ಕಾರ್ಮಿಕರು ಸಂತೆ ನಡೆಯುವ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದಾರೆ ಎಂದು ಕೇಳಿಬಂದಿದೆ ಈ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸುವಂತೆ ಹೇಳಿದರು.

ಹೆಚ್ಚುವರಿ ಪೊಲೀಸ್ ವರಿ?ಧಿಕಾರಿಗಳಾದ ತಮ್ಮಯ್ಯ, ವೆಂಕಟೇಶ್ ನಾಯ್ಡು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಶಿವಶರಣರು, ವಚನಕಾರರು, ಸಮಾಜದ ಆಸ್ತಿ



**ಚಿಕ್ಕಮಗಳೂರು:** ಶಿವಶರಣರು, ವಚನಕಾರರು, ಸಮಾಜದ ಶಾಶ್ವತ ಆಸ್ತಿ, ಸಾಮಾಜಿಕ ಅಸಮಾನತೆ ಹೋಗಲಾಡಿಸುವ ಜೊತೆಗೆ ಜ್ಞಾನ ವಿಸ್ತರಣೆಗೆ ಅವರು ನೀಡಿದ ಕೊಡುಗೆ ಮಹತ್ತರವಾದುದ್ದು ಎಂದು ಸಾಹಿತಿ ಸಂಗಮೇಶ್ವರ ತಿಳಿಸಿದರು.

ಜಿಲ್ಲಾಡಳಿತದ ವತಿಯಿಂದ ಇಂದು ನಗರದ ಕುವೆಂಪು ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಕಾಯಕ ನಿಷ್ಠೆ, ದಾಸೋಹದಂತಹ ಮೌಲ್ಯಯುತವಾದ ಕಾಣಿಕೆ ನೀಡಿದ್ದು 12ನೇ ಶತಮಾನದ ಕಾಲದಲ್ಲಿ. ಇಂತಹ ಶರಣರು ಮಹಾಪುರುಷರು ಹಾಕಿಕೊಟ್ಟ ಮಾರ್ಗದರ್ಶನ ಹಾಗೂ ಸಂದೇಶಗಳು ಇಂದಿನ ಸಮಾಜಕ್ಕೆ ಪ್ರೇರಣೆಯಾಗಿದ್ದು, ಪ್ರತಿಯೊಬ್ಬರು ಜೀವನದಲ್ಲಿ ಆಳವಡಿಸಿಕೊಂಡು ಮುನ್ನಡೆಯಬೇಕು ಎಂದರು.

ಮಡಿವಾಳ ಮಾಚಿದೇವರು ಬದುಕಿನ ಸಾತ್ವಿಕತೆ ನೀಡಿ ಸತ್ಯ, ಶುದ್ಧ ಕಾಯಕ ಕೊಟ್ಟಿದ್ದಾರೆ. ಸಮಾಜದಲ್ಲಿ ಜಾತಿ ಮುಖ್ಯವಲ್ಲ, ಜೀವನ ಮುಖ್ಯ ಎಂದು ತೋರಿಸಿ ಕೊಟ್ಟಿದ್ದಾರೆ. ಅನುಭವ ಮಂಟಪ ಕಟ್ಟುವಲ್ಲಿ ಮಡಿವಾಳ ಮಾಚಿದೇವರ

ಕಾಯಕ ಮಹತ್ವದ್ದು, ದೇಶದ ನಾನಾ ಭಾಗಗಳಿಂದ ಕಲ್ಯಾಣಕ್ಕೆ ಬರುವವರಿಗೆ ಪರೀಕ್ಷಿಸಿ ಮಡಿ ಹಾಸಿ ಸ್ವಾಗತಿಸುವ ಕೆಲಸ ಅವರದ್ದಾಗಿತ್ತು, ಮಾಚಿದೇವರ ಪರೀಕ್ಷೆಗೊಳಪಡದ ಹೊರತು ಕಲ್ಯಾಣಪುರ ಪ್ರವೇಶದ ಪ್ರಮಾಣ ಪತ್ರ ಹೊರಗಿನಿಂದ ಬರುವವರಿಗೆ ಸಿಗುತ್ತಿರಲಿಲ್ಲ ಎಂದ ಅವರು ಕಲ್ಯಾಣ ಕ್ರಾಂತಿಯ ಸಂದರ್ಭದಲ್ಲಿ ಮಾಚಿದೇವರು ರಕ್ಷಣೆ, ವಚನ ಸಾಹಿತ್ಯದ ದಂಡ ನಾಯಕತ್ವದ ಜವಾಬ್ದಾರಿ ಹೊತ್ತು ಬಸವಣ್ಣ, ಅಕ್ಕನಾಗಮ್ಮ, ಕಿನ್ನರಿ ಬೊಮ್ಮಣ್ಣ ಮೊದಲಾದವರೊಂದಿಗೆ ಮಾಚಿದೇವ ಶರಣ ಸಮೂಹದ ಭೀಮ ರಕ್ಷೆಯಾಗಿ ನಿಂತರು ಎಂದರು.

ಚಿಕ್ಕಮಗಳೂರು ವಿಧಾನ ಸಭೆ ಕ್ಷೇತ್ರದ ಶಾಸಕರಾದ ಹೆಚ್.ಡಿ. ತಮ್ಮಯ್ಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಶಿವ ಶರಣರು, ವಚನಕಾರರು ಸಮಾಜದ ಶಾಶ್ವತ ಆಸ್ತಿ, ಸಾಮಾಜಿಕ ಅಸಮಾನತೆ ಹೋಗಲಾಡಿಸುವ ಜೊತೆಗೆ ಜ್ಞಾನ ವಿಸ್ತರಣೆಗೆ ಅವರು ನೀಡಿದ ಕೊಡುಗೆ ಮಹತ್ತರವಾದುದು, ತಮ್ಮ ಕಾಯಕದ ಮೂಲಕ ಸಮಾಜದಲ್ಲಿರುವ ಅಧರ್ಮ, ಅಸಂಸ್ಕೃತಿಯ ಕೊಳಕನ್ನು ಹೋಗಲಾಡಿಸಿದ ಕಾಯಕ ಯೋಗಿ ಮಡಿವಾಳ ಮಾಚಿದೇವರು ಅವರ ಆದರ್ಶಗಳು ಇಂದಿನ ಸಮಾಜದ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕವಾಗಿವೆ ಎಂದು ತಿಳಿಸಿದರು.

12ನೇಯ ಶತಮಾನದಲ್ಲಿ ದುರ್ಬಲರ ಶೋಷಣೆ , ಜಾತೀಯತೆ, ಮೇಲು –ಕೀಳು, ತಾರತಮ್ಯ, ಅಸ್ಪೃಶ್ಯತೆ, ಮೂಢ ನಂಬಿಕೆಗಳ ಸೃಷ್ಟಿ , ಶಿಕ್ಷಣದಲ್ಲಿ ಅವಕಾಶ ವಂಚನೆ ಹೀಗೆ ಅನೇಕ ಸಾಮಾಜಿಕ ಅಸಮಾನತೆಯಿಂದ ಜನರು ತುಳಿತಕ್ಕೆ ಒಳಗಾಗಿದ್ದರು. ಇವುಗಳೆಲ್ಲವುಗಳಿಂದ ಮಹಿಳೆಯರು, ವೃತ್ತಿ ನಿರತ ಶ್ರಮಜೀವಿಗಳು , ಬಡವರು, ದೀನ ದಲಿತರು ನಿರಾಶೆ–ಹತಾಶೆಗೊಂಡು ಅಸಹನೀಯ ಬದುಕಿಗೆ ತುತ್ತಾಗಿದ್ದರು. ಸರ್ವರಿಗೂ ಸಮಪಾಲು – ಸಮಬಾಳು ಒದಗಿಸಲು ಬಸವ–ಮಾಚಿದೇವಾದಿ ಶರಣರು ಸಾಮಾಜಿಕ ಕ್ರಾಂತಿಯನ್ನೇ ಕೈಗೊಂಡರು. ಶರಣರ ಅಗ್ರ ಗಣ್ಯ ಬಳಗದಲ್ಲಿ ? ಮಡಿವಾಳ ಮಾಚಿದೇವ? ಅತ್ಯಂತ ಪ್ರಕಾಶಮಾನವಾಗಿ ಕಂಡು ಬರುವರು ಎಂದು ಹೇಳಿದರು.

ಹಿಂದುಳಿದ ವರ್ಗಗಳ ಒಕ್ಕೂಟದ ರಾಷ್ಟ್ರೀಯ ಉಪಾಧ್ಯಕ್ಷ ಹಾಗೂ ಸಮಾಜದ ಮುಖಂಡ ಜೆ.ಕೆ. ಲೋಕೇಶಪ್ಪ ಮಾತನಾಡಿ ಮಡಿವಾಳ ಮಾಚಿದೇವರ ಜಯಂತಿಯನ್ನು ಸರ್ಕಾರದ ವತಿಯಿಂದ ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲೂ ಆಚರಿಸುವಂತೆ ಮನವಿ ಮಾಡಿದ ಅವರು.

ಹಿಂದುಳಿದ ವರ್ಗಗಳು ಅಭಿವೃದ್ಧಿ ಹೊಂದಿ ಸಮಾಜದ ಮುಖ್ಯ ವಾಹಿನಿಗೆ ಬರಬೇಕಾದರೆ ಆ ಸಮುದಾಯದ ಜನ ಶಿಕ್ಷಣವಂತರಾಗಬೇಕು ಒಳಪಂಗಡಗಳ ಆಂತರಿಕ ವೈರುದ್ಯಗಳನ್ನು ಬದಿಗೊತ್ತಿ ಸಂಘಟಿತರಾಗಬೇಕು ಎಂದು ಸಲಹೆ ಮಾಡಿದರು.

ಚಿಕ್ಕಮಗಳೂರು ತಾಲ್ಲೂಕಿನ ತಾಲ್ಲೂಕು ಕಛೇರಿಯ ಉಪತಹಸೀಲ್ದಾರು ರಾಮ್ ರಾವ್ ದೇಸಾಯಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ರಮೇಶ್ ಎಲ್ಲರನ್ನು ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಡಿವಾಳ ಸಂಘದ ಜಿಲ್ಲಾಧ್ಯಕ್ಷ ಇ.ಹೆಚ್. ಲಕ್ಷ್ಮಣ್, ಮಡಿವಾಳ ಸಂಘದ ಕಾರ್ಯದರ್ಶಿ ರಾಮಚಂದ್ರ, ಜಿಲ್ಲಾ ಮಡಿವಾಳ ಸಂಘ ಉಪಾಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ಮಡಿವಾಳ ಸಂಘದ ಅಧ್ಯಕ್ಷ ಸಿ.ಎಂ. ವೇಣು, ಕರ್ನಾಟಕ ರಾಜ್ಯ ಮಡಿವಾಳ ಸಂಘದ ಉಪಾಧ್ಯಕ್ಷ ಕೆ.ಎಂ. ಬಸವರಾಜು ಮುಂತಾದವರಿದ್ದರು.

## ಕುಡೊ ಸ್ಪರ್ಧೆಯಲ್ಲಿ ರಾಷ್ಟ್ರ ಮಟ್ಟಕ್ಕೆ ಆಯ್ಕೆ

**ನ್ಯಾಮತಿ:** ಶಿವಮೊಗ್ಗದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಮೊದಲ ಇಂಟರ್ ಸ್ಕೂಲ್ ಚಾಂಪಿಯನ್‌ಶಿಪ್ ಕುಡೊ ಸ್ಪರ್ಧೆಯಲ್ಲಿ ಪಟ್ಟಣದ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿ ಸಮಗ್ರ ಪ್ರಶಸ್ತಿ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಜೀವಿತಾ ಕೆ.ಜಿ. ಪ್ರಥಮ ಸ್ಥಾನ ಪಡೆದು ಸೈಕಲ್‌ನ್ನು ಬಹುಮಾನವಾಗಿ ಪಡೆದಿದ್ದಾರೆ. ಪ್ರತೀಕ್ಷಾ ಹಾಗೂ ಮನ್ವಿತಾ ದ್ವಿತೀಯ, ಲಕ್ಷ್ಮಿ.ಕೆ.ವಿ ಧನುಷ್ ಎಂ, ಜೀವಿತ್ ಗೌಡ ಎ.ಸಿ, ಗಿರೀಶ್ ಎಸ್.ಎಸ್. ತೃತೀಯ ಬಹುಮಾನ ಪಡೆದಿದ್ದಾರೆ ಎಂದು ದಾವಣಗೆರೆ ಜಿಲ್ಲಾ ಕುಡೊ ಅಸೋಸಿಯೇಷನ್ ಅಧ್ಯಕ್ಷ ಅಂಬೇಡ್ಕರ್ ಭೋದ್ ತಿಳಿಸಿದ್ದಾರೆ.

## ಬಳ್ಳಾರಿಯಲ್ಲಿ ಮತ್ತೊಬ್ಬ ಬಾಣಂತಿ ಸಾವು

**ಬಳ್ಳಾರಿ:** ನಗರದ ಬಿಮ್ಸ್‌ನಲ್ಲಿ ಬಾಣಂತಿಯರ ಸರಣಿ ಸಾವು ಮುಂದುವರಿದಿದೆ. ಶನಿವಾರ ಬೆಳಗ್ಗೆ ಜಿಲ್ಲೆಯ ಕುರುಗೋಡು ತಾಲೂಕಿನ ಕೋಳೂರು ಗ್ರಾಮದ ನಂದೀಶ್ ಎಂಬುವರ ಪತ್ನಿ ಮಹಾದೇವಿ (21) ಮೃತಪಟ್ಟಿದ್ದಾರೆ. ಜ.25 ರಂದು ಸಿಸೇರಿಯನ್‌ಗೆ ಒಳಗಾಗಿದ್ದ ಅವರು ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು. ಆಗಿನಿಂದಲೂ ಆರೋಗ್ಯವಾಗಿದ್ದ ಬಾಣಂತಿ ಮೂರು ದಿನಗಳ ಹಿಂದೆ ಅಸ್ವಸ್ಥರಾಗಿದ್ದರು. ವಿಪರೀತ ಜ್ವರದಿಂದ ಸೋಂಕು ತಗುಲಿ ಮೃತಪಟ್ಟಿದ್ದಾರೆ ಎಂದು ವೈದ್ಯರು ಹೇಳುತ್ತಿದ್ದಾರೆ. ಶಸ್ತ್ರಚಿಕಿತ್ಸೆಗೆ ಬಳಸಿದ ಸಾಧನಗಳು ಸರಿಯಾಗಿ ಸ್ವಚ್ಛಗೊಳ್ಳದ ಕಾರಣದಿಂದಲೇ ಹೀಗೆ ಆಗಿದೆ. ಸೋಂಕಿಗೆ ವೈದ್ಯರು ಸೂಕ್ತ ಚಿಕಿತ್ಸೆ ನೀಡಿಲ್ಲ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

# ಸಹಕಾರ ಸಂಘಕ್ಕೆ ಅಧ್ಯಕ್ಷ–ಉಪಾಧ್ಯಕ್ಷ ಆಯ್ಕೆ

**ನ್ಯಾಮತಿ:** ತಾಲೂಕಿನ ಕೆಂಚಿಕೊಪ್ಪ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಬಿ.ಕೋಮೇಶ್ವರಪ್ಪ ಹಾಗೂ ಉಪಾಧ್ಯಕ್ಷರಾಗಿ ವನಿತಾ ಪರಮೇಶ್ವರಪ್ಪ ಅಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಹೊನ್ನಾಳಿ ನವೀನ್ ಕುಮಾರ್ ಘೋಷಿಸಿದ್ದಾರೆ. ಸಾಮಾನ್ಯ ಕ್ಷೇತ್ರದಿಂದ ಕೆ.ಜಿ.ಗಂಗಾಧರ್, ಎಸ್.ಬಸವರಾಜಪ್ಪ, ಜೆ.ಇ.ರವೀಂದ್ರಕುಮಾರ್, ಎಂ.ರುದ್ರೇಶಪ್ಪ, ಮಹಿಳಾ ಮೀಸಲು–ಹೇಮಮ್ಮ, ಹಿಂದುಳಿದ ಪ್ರವರ್ಗ ಬ–ಜಿ.ಶಿವಲಿಂಗಪ್ಪ, ಪರಿಶಿಷ್ಟ ಜಾತಿ–ಎ.ಕೆ.ಹಳದಪ್ಪ, ಪರಿಶಿಷ್ಟ ಪಂಗಡ–ಕೆ.ಬಸಪ್ಪ, ಸಾಲಗಾರರಲ್ಲದ ಸಾಮಾನ್ಯ ಕ್ಷೇತ್ರದಿಂದ ಸಾಕಮ್ಮ, ಮಂಜಪ್ಪ ನಿರ್ದೇಶಕರಾಗಿ ಆಯ್ಕೆ ಆಗಿದ್ದಾರೆ. ಮುಖ್ಯ ಕಾರ್ಯ ನಿರ್ವಾಹಕ ಜಿ.ಪಿ. ಬಸವರಾಜಪ್ಪ ಕೆಂಚಿಕೊಪ್ಪ ಇತರರು ಇದ್ದರು.


## ಅಪ್ರಾಪ್ತ ಹೆಣ್ಣು ಮಕ್ಕಳ ಮೇಲೆ ಪ್ರಕರಣ ಆರೋಪಿ ಬಂಧನ

**ಚನ್ನಗಿರಿ :** ಅಮರ್ ಔಷಧ ಅಂಗಡಿ ಮಾಲೀಕ ಅಮ್ಜದ್ ಜ್‌ನ ಅಪ್ರಾಪ್ತ ಹೆಣ್ಣು ಮಕ್ಕಳ ಮೇಲೆ ನಡಸುತ್ತಿರುವ ರಾಸಲೀಲೆ ಪ್ರಕರಣವು ತೀವ್ರ ಸ್ವರೂಪವನ್ನು ಪಡೆದುಕೊಳ್ಳುತ್ತಿದ್ದು ದಾವಣಗೆರೆ ಜಿಲ್ಲಾ ಪೋಲಿಸ್ ವರಿಷ್ಟಾಧಿಕಾರಿ ಉಮಾ ಪ್ರಶಾಂತ್ ಮಾರ್ಗದರ್ಶನದಲ್ಲಿ ದಾವಣಗೆರೆ ಸೈಬರ್ ಸೆನ್‌ನ ಡಿ.ವೈ.ಎಸ್.ಪಿ ಪದ್ಮಶ್ರೀ ಕುಂಜಿಕರ್ ನೇತ್ರತ್ವದಲ್ಲಿ ದಾವಣಗೆರೆ ಪೋಲಿಸರು ಭಾನುವಾರ ಬೆಳಗ್ಗೆ ಅರೋಪಿಯನ್ನು ಕರೆದುಕೊಂಡು ಆತನ ಔಷಧ ಅಂಗಡಿ ಮತ್ತು ಈ ಹಿಂದೆ ಕೃತ್ಯ ನಡೆಸಿದ್ದ ಚನ್ನಗಿರಿಯ ಮನೆ ಪರಿಶೀಲನೆ ನಡೆಸಿ ಆಗತ್ಯ ವಸ್ತುಗಳನ್ನು ವಶಪಡಿಸಿಕೊಂಡರು.

ನಂತರ ಮಾಧ್ಯಮದೊಂದಿಗೆ ಮಾತನಾಡಿ ದಾವಣಗೆರೆ ಜಿಲ್ಲಾ ಪೋಲಿಸ್ ವರಿಷ್ಟಾಧಿಕಾರಿ ಉಮಾ ಪ್ರಶಾಂತ್‌ರವರು ಈ ಪ್ರಕರಣದ ಬಗ್ಗೆ ಹೆಚ್ಚು ಗಮನಹರಿಸಿದ್ದು ತನಿಖೆಯನ್ನು ಪ್ರಾರಂಭಿಸಲಾಗಿದೆ. ಮೊದಲ ಹಂತದಲ್ಲಿ ಸ್ಥಳ ಪರಿಶೀಲನೆ ಮತ್ತು ಕೆಲ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಚನ್ನಗಿರಿ ಪಿ.ಐ.ರವೀಶ್, ಪಿ.ಎಸ್.ಐ. ಸುರೇಶ್ ಮತ್ತು ಚನ್ನಗಿರಿ ಪೋಲಿಸರು ಹಾಜರಿದ್ದರು.

## ಇಂದು ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಮಂಡನೆ

**ನವದೆಹಲಿ:** ವಕ್ಫ್ (ತಿದ್ದುಪಡಿ) ಮಸೂದೆಯನ್ನು ಪರಿಶೀಲಿಸುವ ಸಂಸತ್ತಿನ ಜಂಟಿ ಸಮಿತಿಯ ವರದಿಯನ್ನು ಸೋಮವಾರ ಲೋಕಸಭೆಯಲ್ಲಿ ಮಂಡಿಸಲಾಗುತ್ತದೆ.ಸಮಿತಿಯ ಅಧ್ಯಕ್ಷ ಜಗದಾಂಬಿಕಾ ಪಾಲ್ ಮತ್ತು ಸದಸ್ಯ ಸಂಜಯ್ ಜೈಸ್ವಾಲ್ ಸೋಮವಾರ ಲೋಕಸಭೆಯಲ್ಲಿ ವರದಿಯನ್ನು ಮಂಡಿಸಲಿದ್ದಾರೆ ಎಂದು ಲೋಕಸಭಾ ಸಚಿವಾಲಯ ಹೊರಡಿಸಿದ ಬುಲೆಟಿನ್ನಲ್ಲಿ ತಿಳಿಸಿದೆ.ಸಮಿತಿಯು ಗುರುವಾರ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ವರದಿಯನ್ನು ಸಲ್ಲಿಸಿತ್ತು. ಆಡಳಿತಾರೂಢ ಭಾರತೀಯ ಜನತಾ ಪಕ್ಷದ ಸದಸ್ಯರು ಸೂಚಿಸಿದ ಬದಲಾವಣೆಗಳನ್ನು ಒಳಗೊಂಡಿರುವ ತನ್ನ ವರದಿಯನ್ನು ಸಮಿತಿ ಬುಧವಾರ ಬಹುಮತದ ಮತದಿಂದ ಅಂಗೀಕರಿಸಿತು. ಈ ಬೆಳವಣಿಗೆಯ ಬಗ್ಗೆ ಪ್ರತಿಕ್ರಿಯೆ ನೀಡಿರುವ ವಿರೋಧ ಪಕ್ಷಗಳು ಈ ಪ್ರಕ್ರಿಯೆಯನ್ನು ವಕ್ಫ್ ಮಂಡಳಿಗಳನ್ನು ನಾಶಮಾಡುವ ಪ್ರಯತ್ನ ಎಂದು ಕರೆದವು.ವಕ್ಫ್ (ತಿದ್ದುಪಡಿ) ಮಸೂದೆಯ ಕುರಿತಾದ ಸಂಸತ್ತಿನ ಜಂಟಿ ಸಮಿತಿ ಕರಡು ಶಾಸನದ ವರದಿಯನ್ನು 15–11 ಬಹುಮತದ ಮತಗಳಿಂದ ಅಂಗೀಕರಿಸಿತು. ವಿರೋಧ ಪಕ್ಷದ ಸದಸ್ಯರು ವರದಿಗೆ ಭಿನ್ನಾಭಿಪ್ರಾಯ ಟಿಪ್ಪಣಿಗಳನ್ನು ಸಲ್ಲಿಸಿದರು.ಕಳೆದ ವರ್ಷ ಆಗಸ್ಟ್ನಲ್ಲಿ ಲೋಕಸಭೆಯಲ್ಲಿ ಪರಿಚಯಿಸಲಾದ ಮಸೂದೆಯು ವಕ್ಫ್ ಆಸ್ತಿಗಳ ನಿರ್ವಹಣೆಯಲ್ಲಿ ಆಧುನಿಕತೆ, ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ತರಲು ಪ್ರಯತ್ನಿಸುತ್ತದೆ ಎಂದು ಬಿಜೆಪಿ ಸದಸ್ಯರು ಹೇಳಿದರು. ಮತ್ತೊಂದೆಡೆ, ವಿರೋಧ ಪಕ್ಷಗಳು ಇದನ್ನು ಮುಸ್ಲಿಂ ಸಮುದಾಯದ ಸಾಂವಿಧಾನಿಕ ಹಕ್ಕುಗಳ ಮೇಲಿನ ದಾಳಿ ಮತ್ತು ವಕ್ಫ್ ಮಂಡಳಿಗಳ ಕಾರ್ಯನಿರ್ವಹಣೆಯಲ್ಲಿ ಹಸ್ತಕ್ಷೇಪ ಎಂದು ಹೇಳಿವೆ.



# ಮಲೆನಾಡಲ್ಲಿ ಮರಗಳ ಹನನ, ಒತ್ತುವರಿಗೆ ಯಾವುದೇ ತಡೆ ಇಲ್ಲ

ಶಿವಮೊಗ್ಗ: ಮಲೆನಾಡಿನ ಹಲವೆಡೆ ಕಂದಾಯ ಹಾಗೂ ಅರಣ್ಯ ಭೂಮಿ ಅತಿಕ್ರಮಣ ಮತ್ತೆ ವೇಗ ಪಡೆದಿದೆ. ಸರ್ಕಾರದ ಆದೇಶ ಹಾಗೂ ಕಾನೂನು ಧಿಕ್ಕರಿಸಿ ಅರಣ್ಯ ನಾಶಪಡಿಸುವುದು ಅವ್ಯಾಹತವಾಗಿ ನಡೆಯುತ್ತಿದೆ. ಬಗರ್ಹುಕುಂ ಅಡಿ ಮಂಜೂರಾದ ಜಮೀನಿಗೆ ತಾಗಿಕೊಂಡಂತಿರುವ ಸರ್ಕಾರಿ, ಅರಣ್ಯ ಇಲಾಖೆ ಜಮೀನಿನಲ್ಲಿನ ಮರ□ಮುಟ್ಟುಗಳನ್ನು ರಾತ್ರೋ ರಾತ್ರಿ ಕಡಿದು, ಬೇರು□ಬೊಡ್ಡೆಗಳನ್ನು ಸುಟ್ಟು ಹಾಕಿ ಒತ್ತುವರಿಮಾಡಲಾಗುತ್ತಿದೆ.

ಸೊರಬ ತಾಲ್ಲೂಕು ಗುಡವಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಂತನಹಳ್ಳಿ ಗ್ರಾಮದ ಸರ್ವೆ ನಂ.8ರಲ್ಲಿ ಒಟ್ಟು 533 ಎಕರೆ ಅರಣ್ಯವಿದೆ. ಅದು ನಿತ್ಯ ಹರಿದ್ವರ್ಣ ಕಾಡು. ಅಲ್ಲಿ ಅಪಾರ ಪ್ರಮಾಣದ ಬೆಲೆಬಾಳುವ ಪಾರಂಪರಿಕ ವೃಕ್ಷಗಳನ್ನು ಕಡಿಯಲಾಗಿದೆ. ಇದ–ಕ್ಕೆ ತಾಗಿಕೊಂಡೇ ಇರುವ ಸಾರೆಮರೂರು ಗ್ರಾಮದ ಸರ್ವೆ ನಂ.27ರಲ್ಲಿ 352 ಎಕರೆ ಅರಣ್ಯವಿದೆ. ಅಲ್ಲಿಯೂ ಅಂದಾಜು 15 ಎಕರೆ ಅತಿಕ್ರಮಣವಾಗಿದೆ. ನೂರಾರು ನಂದಿ,ಹೊನ್ನೆ, ಬಣಗಿ, ಮತ್ತಿ, ಹುಣಾಲು ಜಾತಿಯ ಮರಗಳನ್ನು ಕಡಿದು ಉರುಳಿಸಲಾಗಿದೆ. ಬೆಲೆ ಬಾಳುವ ಮರಗಳನ್ನು ಕತ್ತರಿಸಿ ಉರುವಲಿಗೆ ಕಟ್ಟಿಗೆಯಾಗಿಯೂ



ಬಳಸಲಾಗಿದೆ.

ಚಂದ್ರಗುತ್ತಿ ಹೋ ಬಳಿಯಹೊಳೆಮರೂರು, ತೋರಣಗೊಂಡನಕೊಪ್ಪ, ಅಂದವಳ್ಳಿ, ಮುಟಗುಪ್ಪೆ, ಗೊಗ್ಗೆಹಳ್ಳಿ, ಹರಳಿಗೆ, ಕೋಡಂಬಿ ಸೇರಿ ಹಲವು ಕಡೆ ಅರಣ್ಯ ನಾಶವಾಗಿದೆ.ಹೊಳೆಮರೂರು ಮತ್ತು ತೋರಣಗೊಂಡನಕೊಪ್ಪದಲ್ಲಿನ ಅರಣ್ಯ ನಾಶದ ವಿರುದ್ಧ ಗ್ರಾಮಸ್ಥರೇ ಧ್ವನಿ ಎತ್ತಿದ್ದಾರೆ.

'ದೇವರ ಕಾಡು, ಜಂಬಳ್ಳಿ ಕಾಡು, ಸಾರೆ ಮರೂರು ಕಾಡಿನಲ್ಲೂ ಮರಗಳ ಹನನ ನಡೆದಿದೆ. ಇವೆಲ್ಲ ನಿರ್ಜನ ಪ್ರದೇಶವೇನಲ್ಲ. ವಾಹನ ಓಡಾಡಲು ರಸ್ತೆ ವ್ಯವಸ್ಥೆ ಇರುವ ಇಲ್ಲಿ ಏನೇ ಚಟುವಟಿಕೆ ನಡೆದರೂ ಗೊತ್ತಾಗುತ್ತದೆ. ಆದಾಗ್ಯೂ ಅರಣ್ಯ ಇಲಾಖೆ ಗಮನಕ್ಕೆ ಬಾರದಿರುವುದು ಅಚ್ಚರಿಮೂಡಿಸಿದೆ' ಎಂದು ಸೊರಬ ಪರಿಸರ ಜಾಗೃತಿ ಟ್ರಸ್ಟ್ನ ಉಪಾಧ್ಯಕ್ಷ ಶ್ರೀಪಾದ್ ಬಿಚ್ಚುಗತ್ತಿ ಆರೋಪಿಸುತ್ತಾರೆ.

**ಸಿಬ್ಬಂದಿ ಕೊರತೆ ನೆಪ:**

'ಸೊರಬ ಮಾತ್ರವಲ್ಲ ಸಾಗರ, ತೀರ್ಥಹಳ್ಳಿ, ಶಿಕಾರಿಪುರ ತಾಲ್ಲೂಕುಗಳಲ್ಲಿಯೂ ಇದೇ ಪರಿಸ್ಥಿತಿ ಇದೆ. ಮರಗಳಿಂದ ಆವರಿಸಿದ ಭೂಮಿ ಬೆಳಗಾಗುವುದರೊಳಗೆ ಪಕ್ಕದ ಅಡಿಕೆ ತೋಟದ ವಿಸ್ತರಣೆಯ ಭಾಗವಾಗಿರುತ್ತದೆ. ಕಾನು ಬರಿದಾಗುತ್ತಿದೆ. ಅದನ್ನು ತಪ್ಪಿಸಿ ಅಂದರೆ ನಮ್ಮಲ್ಲಿ (ಚಂದ್ರಗುತ್ತಿ ಹೋಬಳಿ) ಸಿಬ್ಬಂದಿ ಕೊರತೆ ಇದೆ ಎಂದು ಅರಣ್ಯಾಧಿಕಾರಿಗಳು ನೆಪ ಹೇಳುತ್ತಾರೆ. ಇಲಾಖೆಯ ನಿಷ್ಕಾಳಜಿಯಿಂದಾಗಿಯೇ ಸಮಸ್ಯೆ ಉಲ್ಬಣಗೊಂಡಿದೆ. ಕಣ್ಣೆದುರು ಮರಗಳ ಹನನವಾಗುತ್ತಿದ್ದರೂ ಅದನ್ನು ಬಹಿರಂಗವಾಗಿ ವಿರೋಧಿಸಲು ಸ್ಥಳೀಯರು ಭಯಪಡುತ್ತಿದ್ದಾರೆ' ಎಂದು ಶ್ರೀಪಾದ ಬೇಸರ ವ್ಯಕ್ತಪಡಿಸುತ್ತಾರೆ.




## ಸೌದಿ ಅರೇಬಿಯಾದಲ್ಲಿ ಭೀಕರ ಅಪಘಾತ: ಉದ್ಯೋಗ ಅರಸಿ ಹೋಗಿದ್ದ ತೆಲಂಗಾಣದ ವ್ಯಕ್ತಿ ಸೇರಿ 9 ಭಾರತೀಯರ ದುರ್ಮರಣ

ಸೌದಿ ಅರೇಬಿಯಾದ ಪಶ್ಚಿಮ ಪ್ರದೇಶದ ಜೆಡ್ಡಾ ಬಳಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ 9 ಭಾರತೀಯ ನಾಗರಿಕರು ಸೇರಿದಂತೆ 15 ಜನರು ದುರಂತ ಸಾವನ್ನಪ್ಪಿದ್ದಾರೆ. ಈ ಅಪಘಾತದಲ್ಲಿ ನೇಪಾಳ ಮತ್ತು ಘಾನಾದ ತಲಾ ಮೂವರು ನಾಗರಿಕರು ಪ್ರಾಣ ಕಳೆದುಕೊಂಡಿದ್ದಾರೆ. ಇಂದು ಭಾರತೀಯ ರಾಯಭಾರ ಕಚೇರಿ ಅಪಘಾತವನ್ನು ದೃಢಪಡಿಸಿದ್ದು, ಮೃತರ ಕುಟುಂಬಗಳಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುವುದಾಗಿ ಭರವಸೆ ನೀಡಿದೆ. ಈ ಅಪಘಾತದ ನಂತರ, ಮೃತರ ಕುಟುಂಬಗಳಲ್ಲಿ ಶೋಕ ಮಡುಗಟ್ಟಿದೆ.ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್ ಕೂಡ ಈ ಅಪಘಾತದ ಬಗ್ಗೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಜೆಡ್ಡಾದಲ್ಲಿ ನಡೆದ ಈ ಭೀಕರ ರಸ್ತೆ ಅಪಘಾತದ ಬಗ್ಗೆ ಕೇಳಿ ದುಃಖಿತನಾಗಿದ್ದೇನೆ ಎಂದು ಅವರು ಇನ್ಸ್ಟಾಗ್ರಾಮ್ ನಲ್ಲಿ ಬರೆದಿದ್ದಾರೆ. ನಾನು ಜೆಡ್ಡಾದ ನಮ್ಮ ಕಾನ್ಸುಲ್ ಜನರಲ್ ಅವರೊಂದಿಗೆ ಮಾತನಾಡಿದ್ದೇನೆ. ಅವರು ಸಂತ್ರಸ್ತ ಕುಟುಂಬಗಳೊಂದಿಗೆ ಸಂಪರ್ಕದಲ್ಲಿದ್ದು ಅವರಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ಒದಗಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ತೆಲಂಗಾಣದ ಒಬ್ಬ ಕಾರ್ಮಿಕ ಸಾವು: ಭಾರತೀಯ ಸಮುದಾಯದ ಪ್ರಕಾರ, ಈ ಎಲ್ಲಾ ಕಾರ್ಮಿಕರು ದಕ್ಷಿಣ ಬಂದರು ನಗರವಾದ ಜಿಜಾನ್ನಲ್ಲಿರುವ ತಮ್ಮ ಕೆಲಸದ ಸ್ಥಳದ ಕಡೆಗೆ ಹೋಗುತ್ತಿದ್ದರು. ಈ ಸಮಯದಲ್ಲಿ ಅವರ ಬಸ್ ಟ್ರೇಲರ್ಗೆ ಡಿಕ್ಕಿ ಹೊಡೆದಿದೆ. ಬಸ್ಸಿನಲ್ಲಿ ಒಟ್ಟು 26 ಜನರಿದ್ದು ಸ್ಥಳದಲ್ಲೇ 15 ಮಂದಿ ಸಾವನ್ನಪ್ಪಿದ್ದಾರೆ. ಇನ್ನುಳಿದ ಪ್ರಯಾಣಿಕರು ಗಾಯಗೊಂಡಿದ್ದು ಅವರನ್ನು ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಮೃತರಲ್ಲಿ ತೆಲಂಗಾಣದ ಜಗತ್ಯಾಲ್ ಜಿಲ್ಲೆಯ ಮೆಟ್ಪಲಿ ಮಂಡಲದ ನಿವಾಸಿ ಕಪೇಲಿ ರಮೇಶ್ (32) ಎಂಬ ಭಾರತೀಯ ಪ್ರಜೆಯೂ ಸೇರಿದ್ದಾರೆ. ರಮೇಶ್ ಅವರ ಸಾವಿನ ಸುದ್ದಿ ಅವರ ಕುಟುಂಬಕ್ಕೆ ಬರಸಿಡಿಲು ಬಡಿದಂತಾಗಿದೆ. ಈ ಅಪಘಾತದ ಬಗ್ಗೆ ಭಾರತೀಯ ರಾಯಭಾರ ಕಚೇರಿ ತೀವ್ರ ಸಂತಾಪ ವ್ಯಕ್ತಪಡಿಸಿದೆ. "ಜೆಡ್ಡಾದ ಬಳಿ ನಡೆದ ರಸ್ತೆ ಅಪಘಾತದಲ್ಲಿ 9 ಭಾರತೀಯರು ಸಾವನ್ನಪ್ಪಿದ್ದಕ್ಕೆ ತೀವ್ರ ಸಂತಾಪ ಸೂಚಿಸುತ್ತೇವೆ" ಎಂದು ರಾಯಭಾರ ಕಚೇರಿ ಟ್ವಿಟರ್ನಲ್ಲಿ ಪೋಸ್ಟ್ ಮಾಡಿದೆ. ಮೃತರ ಕುಟುಂಬಗಳಿಗೆ ನಮ್ಮ ಸಂತಾಪಗಳು. ಭಾರತೀಯ ದೂತಾವಾಸವು ಸ್ಥಳೀಯ ಆಡಳಿತ ಮತ್ತು ಸಂತ್ರಸ್ತ ಕುಟುಂಬಗಳೊಂದಿಗೆ ಸಂಪರ್ಕದಲ್ಲಿದೆ ಮತ್ತು ಸಾಧ್ಯವಿರುವ ಎಲ್ಲ ಸಹಾಯವನ್ನು ಒದಗಿಸುತ್ತಿದೆ. ಈ ಅಪಘಾತದಲ್ಲಿ ಗಾಯಗೊಂಡವರ ಚಿಕಿತ್ಸೆಗೆ ಸಂಪೂರ್ಣ ವ್ಯವಸ್ಥೆ ಮಾಡಲಾಗುತ್ತಿದೆ.

## ಬೆಂಗಳೂರಿನಲ್ಲಿ ಇಂದು ಪ್ರಶಸ್ತಿ ಪ್ರದಾನ



ಎಲ್ಲ ಬಲ್ಲವರಿಲ್ಲ ಬಲ್ಲವರು ಬಹಳಿಲ್ಲ' ಎಂಬ ಸರ್ವಜ್ಞರ ತ್ರಿಪದಿಯ ಸಾರದಲ್ಲಿರುವಂತೆ ಸಕಲವನ್ನರಿತವರಾರು ಇಲ್ಲ, ಅಷ್ಟಿಷ್ಟು ಅರಿತವರಿದ್ದರೂ ಅಂತಹವರ ಸಂಖ್ಯೆಯು ಕಡಿಮೆಯೇ ಎಂದಾಗುತ್ತದೆ. ಜ್ಞಾನಿಗಳಾಗಿ, ಯೋಗಿಗಳಾಗಿ ತಮ್ಮದೇ ಏಕಾಂತ ಜಗದಲ್ಲಿ ಮೌನವಾಗಿದ್ದು ಬಿಡುವವರೇ ಹೆಚ್ಚು. ಆದರೆ ನಿಜವಾದ ಜ್ಞಾನಿಗಳು ತಮ್ಮನ್ನು ಹಾಗೆಂದು ತೋರಿಸಿಕೊಳ್ಳುವುದೇ ಇಲ್ಲ. ಅಂತವರಲ್ಲೊಬ್ಬ ಸರಳ ವ್ಯಕ್ತಿಯಾದ ಅಂತರಾಷ್ಟ್ರೀಯ ಹಿರಿಯ ಯೋಗಪಟುಗಳೂ, ಯೋಗಾಸನ ತೀರ್ಪುಗಾರರೂ, ಯೋಗಾಸನ ದಲ್ಲಿ ವಿವಿಧ ಪ್ರಶಸ್ತಿ ಪುರಸ್ಕೃತರೂ ಮತ್ತು ಹಿರಿಯ ಪತ್ರಕರ್ತರೂ, ಜಿಲ್ಲಾ ವರದಿಗಾರರ ಕೂಟದ ಸಾಂಸ್ಕೃತಿಕ ಕಾರ್ಯದರ್ಶಿಗಳೂ, 'ಡಾಕ್ಟರೇಟ್' ಪುರಸ್ಕೃತರೂ ಆದ ಡಾ. ಕೆ. ಜೈಮುನಿ ಅವರಿಗೆ 2023ನೇ ಸಾಲಿನ 'ಕರ್ನಾಟಕ ಮಾಧ್ಯಮ ಅಕಾಡೆಮಿ' ಪ್ರಶಸ್ತಿ ಲಭಿಸಿದೆ.

ಡಾ. ಜೈಮುನಿ ಅವರು ಕಳೆದ ಸುಮಾರು ಐದು ವರ್ಷಗಳು ಸಂಜೆವಾಣಿಯಲ್ಲಿ ಮತ್ತು ಮೂರು ವರ್ಷಗಳು ಮಲ್ನಾಡವಾಣಿ ಪತ್ರಿಕೆಗಳಲ್ಲಿ ವರದಿಗಾರರಾಗಿ ಸೇವೆ ಸಲ್ಲಿಸಿ, 2003ರಲ್ಲಿ 'ಸುಭಾಷಿತ' ಎಂಬ ಕನ್ನಡ ದಿನಪತ್ರಿಕೆ ಆರಂಭಿಸಿ, ಅಂದಿನಿಂದ ಯಶಸ್ವಿಯಾಗಿ ಮುನ್ನಡೆಸಿಕೊಂಡು ಬರುತ್ತಿಚಿದ್ದಾರೆ. 1987 ರಿಂದ 1991ರವರೆಗೆ ಬಿ.ಎಸ್.ಎಫ್.ನಲ್ಲಿಯೂ ಸಹ ದೇಶಸೇವೆ ಮಾಡಿದ್ದಾರೆ. ಅವರು ರಾಜ್ಯಮಟ್ಟ, ರಾಷ್ಟ್ರಮಟ್ಟ, ಅಂತರರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ, ಸ್ವರ್ಣ ಪದಕ, ಬೆಳ್ಳಿ ಪದಕ, ಕಂಚಿನ ಪದಕಗಳನ್ನು ವಿಜೇತರಾಗಿದ್ದಾರೆ.

2018ರಲ್ಲಿ ಚೆನ್ನೈ ಯುನಿರ್ವಸಿಟಿ ಆಫ್ ಜೆರೋಸಲಂ ಇವರಿಂದ ವಿವಿಧ ಕ್ಷೇತ್ರಗಳಲ್ಲಿ ಮಾಡಿದ ಸಾಧನೆ ಗುರುತಿಸಿ ಗೌರವ ಡಾಕ್ಟರೇಟ್ ಪ್ರದಾನ. 2020ರಲ್ಲಿ ವಿವಿಧ ಕ್ಷೇತ್ರದಲ್ಲಿ ಮಾಡಿದ ಸಾಧನೆ ಗುರುತಿಸಿ ಕರ್ನಾಟಕ ಅಚೀವರ್ಸ್ ಬುಕ್ ಆಫ್ ರೆಕಾರ್ಡ್. 2012ನೇ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ 2012ನೇ ಸಾಲಿನ ಡಿ.ವಿ. ಗುಂಡಪ್ಪ ಪ್ರಶಸ್ತಿ. 2013ರಲ್ಲಿ ವಿಶ್ವ ವೀರಶೈವ ಸಂಸ್ಕೃತಿ ಪ್ರತಿಷ್ಠಾನ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ಜಗಜ್ಯೋತಿ ಶ್ರೀ ಬಸವೇಶ್ವರ ಕಾಯಕ ಶ್ರೀ ರಾಜ್ಯ ಪ್ರಶಸ್ತಿ. 2014ರಲ್ಲಿ ದಾವಣಗೆರೆಯಲ್ಲಿ ನಡೆದ ಜಿಲ್ಲಾಡಳಿತ ವತಿಯಿಂದ 65ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗಾಗಿ ಸಚಿವರಿಂದ ಸನ್ಮಾನ. 2012ರಂದು ಹರಿಹರದ ನಡೆದ ತಾಲ್ಲೂಕು ಆಡಳಿತ ವತಿಯಿಂದ ನಡೆದ ಆಗಸ್ಟ್ 15ರಂದು ಸಮಾರಂಭಕ್ಕೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗಾಗಿ ಶಾಸಕ ಬಿ.ಪಿ. ಹರೀಶ್ ಅವರಿಂದ ಸನ್ಮಾನ ಉತ್ತಮ ಯೋಗ ಪ್ರದರ್ಶನಕ್ಕಾಗಿ ಮಾಜಿ ಕೈಗಾರಿಕಾ ಸಚಿವ ಹೆಚ್. ಶಿವಪ್ಪ ಇವರಿಂದ ಸನ್ಮಾನ. 2013ರಲ್ಲಿ ಬೆಂಗಳೂರಿನಲ್ಲಿ ನಡೆದ ಯೋಗಾಸನ ಸಮಾರಂಭದಲ್ಲಿ ಯೋಗ ಸಾಧಕ ಪ್ರಶಸ್ತಿ ಪಡೆದಿರುವುದು. 2019ರಲ್ಲಿ ಯಲಹಂಕ ಬೆಂಗಳೂರು ನಡೆದ ಗಿನ್ನೀಸ್ ವರ್ಲ್ಡ್ ರಿಕಾರ್ಡ್‌ನಲ್ಲಿ ಭಾಗವಹಿಸಿರುವ ಪ್ರಶಸ್ತಿ. 2013–14ರಲ್ಲಿ ಜಿಲ್ಲಾಡಳಿತ–ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ದಾವಣಗೆರೆ ಜಿಲ್ಲೆ ಇವರಿಂದ ಕ್ರೀಡಾ ಪ್ರಶಸ್ತಿ. 2015ರಲ್ಲಿ ಚೆನ್ನೈನಲ್ಲಿ ನಡೆದ ಅವಾರ್ಡ್ ಕಾರ್ಯಕ್ರಮದಲ್ಲಿ ಯೋಗ ಪತಾಂಜಲಿ ಅವಾರ್ಡ್ ಪ್ರಶಸ್ತಿ. 2017ರಲ್ಲಿ ವಿಧಾನಸೌಧ–ಬೆಂಗಳೂರಿನಲ್ಲಿ ನಡೆದ ನಡೆದ ಶಿರ್ಷಾಸನ ಕಾರ್ಯಕ್ರಮದಲ್ಲಿ ಗಿನ್ನೀಸ್ ವರ್ಲ್ಡ್ ರೆಕಾರ್ಡ್ ಪ್ರಶಸ್ತಿ. 2020ರಲ್ಲಿ ಪಂಜಾಬ್‌ನಲ್ಲಿ ನಡೆದ ಯೋಗಾಸನ ಸಮಾರಂಭದಲ್ಲಿ ಪರೇಡ್ ಆಫ್ ಇಂಡಿ–ಯಾ ಆವಾರ್ಡ್ ಪ್ರಶಸ್ತಿ. 2019ರಲ್ಲಿ ಪುದಿಚೇರ್‌ನಲ್ಲಿ ನಡೆದ ಸಮಾರಂಭದಲ್ಲಿ ಪತಾಂಜಲಿ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಪ್ರಶಸ್ತಿ. 2017ರಲ್ಲಿ ಚೆನ್ನೈನಲ್ಲಿ ನಡೆದ ಯೋಗಾಸನ ಸಮಾರಂಭದಲ್ಲಿ ಬೆಸ್ಟ್ ಯೋಗ ಟೀಚರ್ ಅವಾರ್ಡ್ ಪ್ರಶಸ್ತಿ. 2012ರಲ್ಲಿ ಕಂಚಿ–ಚೆನ್ನೈನಲ್ಲಿ ನಡೆದ ಯೋಗಾಸನ ಸ್ಪರ್ಧೆಯ ಸಮಾರಂಭದಲ್ಲಿ ಯೋಗಾ ಸೇವಾ ರತ್ನ ಪ್ರಶಸ್ತಿ ಸೇರಿದಂತೆ ಇನ್ನೂ ನೂರಾರು ಪ್ರಶಸ್ತಿ ಪುರಸ್ಕಾರಗಳಿಗೆ ಅವರು ಭಾಜನರಾಗಿದ್ದಾರೆ.

ಯೋಗಾಸನ, ಪತ್ರಿಕೋದ್ಯಮ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಸಕ್ರಿಯರಾಗಿರುವ ಡಾ. ಕೆ. ಜೈಮುನಿ ಅವರಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಸಂದಿರುವುದು ಹೆಮ್ಮೆಯ ಸಂಗತಿ.

ಬೆಂಗಳೂರಿನ ಮಲ್ಲೇಶ್ವರಂ ಸಿವಿ ರಾಮನ್ ರಸ್ತೆಯಲ್ಲಿರುವ ಐಐಎಸ್‌ಸಿ ಆವರಣದಲ್ಲಿರುವ ಜೆ.ಎನ್. ಟಾಟಾ ಸಭಾಂಗಣದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಇಂದು (ಫೆಬ್ರವರಿ 3) ಸೋಮವಾರ ಬೆಳಿಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಸ್ವೀಕರಿಸಲಿದ್ದಾರೆ.

ಡಾ. ಜೈಮುನಿ ಅವರ ಸೇವೆ ಯಶಸ್ವಿಯಾಗಲಿ, ಅವರಿಗೆ ಇನ್ನೂ ಉನ್ನತ ಮಟ್ಟದ ಪ್ರಶಸ್ತಿ ಪುರಸ್ಕಾರಗಳು ಲಭಿಸಲಿ ಎಂದು ಹಾರೈಸೋಣ.

– **ಶೃತಿ ಕೆ.ಇ.** ದಾವಣಗೆರೆ

## ಆಪರೇಷನ್ ಹಸ್ತ: ಬಹಿರಂಗವಾಗಿಯೇ ಜೆಡಿಎಸ್ ಶಾಸಕರಿಗೆ ಆಫರ್ ನೀಡಿದ ಡಿ.ಕೆ. ಶಿವಕುಮಾರ್

**ಚನ್ನಪಟ್ಟಣ:** ಹಳೇ ಮೈಸೂರು ಭಾಗದಲ್ಲಿ 'ಆಪರೇಷನ್ ಹಸ್ತ' ದ ಮಾತುಗಳು ಕೆಲ ದಿನಗಳಿಂದ ಕೇಳಿಬರುತ್ತಿದೆ. ಇದಕ್ಕೆ ಇಂಬು ನೀಡುವಂತೆ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಇಂದು ಬಹಿರಂಗವಾಗಿಯೇ ಜೆಡಿಎಸ್ ಶಾಸಕರಿಗೆ ಆಫರ್ ನೀಡಿದ್ದಾರೆ.

ಕೃತಜ್ಞತಾ ಸಮಾವೇಶದಲ್ಲಿ ಮಾತನಾಡಿದ ಡಿಕೆ ಶಿವಕುಮಾರ್, ಪಾಪ ಜೆಡಿಎಸ್ ಕಾರ್ಯಕರ್ತರಿಗೆ ಹೇಳಬೇಕು. ಅವರು ಟೈಮ್ ವೇಸ್ಟ್ ಮಾಡಿಕೊಳ್ಳುವುದು ಬೇಡ. ಬೆಂಗಳೂರು ದಕ್ಷಿಣ ಜಿಲ್ಲೆಯಾಗುತ್ತಿದೆ. ಒಬ್ಬ ವ್ಯಕ್ತಿಗೋಸ್ಕರ ಇಡೀ ಪಕ್ಷವನ್ನು ಬಲಿಕೊಟ್ಟಿದ್ದಾರೆ. ನಾನು ಕೈಮುಗಿದು ಕೇಳಿಕೊಳ್ಳುತ್ತೇನೆ. ನಾನು ಸಿದ್ದರಾಮಯ್ಯ ನಿಮ್ಮ ಜೊತೆಗೆ ನಿಲ್ಲುತ್ತೇವೆ ಎಂದು ಹೇಳುವ ಮೂಲಕ ಪರೋಕ್ಷವಾಗಿ ಕಾಂಗ್ರೆಸ್ ಗೆ ಬರುವಂತೆ ಆಹ್ವಾನ ನೀಡಿದರು.

ಇದೇ ವೇಳೆ ಸಂಸದ ಕುಮಾರಸ್ವಾಮಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಡಿಕೆ ಶಿವಕುಮಾರ್, 2 ಬಾರಿ ಸಿಎಂ ಆದರೂ ದೇವಾಲಯ, ಶಾಲೆ ಕಟ್ಟಿಸಲಿಲ್ಲ. ಅಭಿವೃದ್ಧಿ ಮಾಡಿದ್ದೇವೆ ಎಂಬುದಕ್ಕೆ ಸಾಕ್ಷಿ ಗುಡ್ಡೆ ಏನು ಎಂದು ಪ್ರಶ್ನಿಸಿದರು. ಡಿಕೆ ಸುರೇಶ್ ಹಾಗೂ ನನ್ನ ಬಗ್ಗೆ ತುಂಬಾ ಕೀಳಾಗಿ ಮಾತನಾಡಿದ್ದಾರೆ. ಆದರೆ, ನಾವು ಏನನ್ನೂ ಮಾತನಾಡಿಲ್ಲ. ಎಲ್ಲರಿಗೂ ಈ ಚನ್ನಪಟ್ಟಣವೇ ಉತ್ತರ ನೀಡಲಿದೆ ಎಂದರು.

ಇದೇ ವೇಳೆ ಮಾತನಾಡಿದ ಮಾಗಡಿ ಶಾಸಕ ಹೆಚ್. ಸಿ. ಬಾಲಕೃಷ್ಣ, ಪರೋಕ್ಷವಾಗಿ ಡಿಕೆ ಶಿವಕುಮಾರ್ ಮುಂದಿನ ಸಿಎಂ ಎಂದು ಹೇಳಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**